11 September 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

**ಭಾವನಾಂತರಂಗ**

ನೆಮ್ಮದಿಯ ಜೀವನಕ್ಕೆ ಒತ್ತಡಗಳು ಆತಂಕಕಾರಿ! ಹೀಗಾಗಿ ಜೀವನದಲ್ಲಿ ಶ್ರೀಮಂತಿಕೆಗಿಂತ ನೆಮ್ಮದಿಯೇ ಬಹಳ ಮುಖ್ಯ!

-ಸ್ನೇಹಾ ಆನಂದ್


ಶ್ರೀ ಬಾಣೇಶ್ವರ ದೇಗುಲದಲ್ಲಿ ಗರುಡಗಂಬ ಸ್ಥಾಪನೆ — ಪುಟ ಸಂ. 2


ಅಕ್ರಮವಾಗಿ ಜಾನುವಾರು ಸಾಗಾಟ: ಆರೋಪಿಗಳ ಬಂಧನ — ಪುಟ ಸಂ. 3


ಸತೀಶ್ ಜಾರಕಿಹೊಳಿ ನಿವಾಸದ ಮೇಲೆ ಇಡಿ ದಾಳಿ ಖಂಡಿಸಿ ಪ್ರತಿಭಟನೆ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 267 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಎಂಎಲ್ಸಿ ರವಿಗೆ ಒಲಿದ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷಗಿರಿ





**ಬೆಂಗಳೂರು:** ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರಾಗಿ ವಿಧಾನ ಪರಿಷತ್ ಸದಸ್ಯ ಎಸ್.ರವಿ ಹಾಗೂ ಉಪಾಧ್ಯಕ್ಷರಾಗಿ ಶರಣಗೌಡ ಪಾಟೀಲ ಬಯ್ಯಾಪುರ ಅವಿರೋಧ ಆಯ್ಕೆಯಾಗಿದ್ದಾರೆ.

ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ಗುರುವಾರ ಚುನಾವಣೆ ನಿಗದಿಯಾಗಿತ್ತು. ಬೇರೆ ಯಾರೂ ನಾಮಪತ್ರ ಸಲ್ಲಿಸದ ಹಿನ್ನೆಲೆ ಎಸ್.ರವಿ ಮತ್ತು ಶರಣಗೌಡ ಪಾಟೀಲ ಬಯ್ಯಾಪುರ ಅವಿರೋಧವಾಗಿ ಆಯ್ಕೆಯಾದರು.

ಅಧ್ಯಕ್ಷ ಸ್ಥಾನಕ್ಕೆ ಸಿದ್ದರಾಮಯ್ಯ ಅವರ ಆಪ್ತ, ಮಾಜಿ ಸಚಿವ ಕೆ.ಎನ್.ರಾಜಣ್ಣ ಹೆಸರು ಪ್ರಮುಖವಾಗಿ ಕೇಳಿಬಂದಿತ್ತು. ಈ ಬಗ್ಗೆ ಡಿ.ಕೆ. ಶಿವಕುಮಾರ್ ಅವರು ಅಪಸ್ವರ ಎತ್ತಿದ್ದರು. ಎಸ್.ರವಿ ಹೆಸರನ್ನು ಸೂಚಿಸಿದ್ದರು. ಈ ಹಿನ್ನೆಲೆಯಲ್ಲಿ ರಾಜಣ್ಣ ಅವರಿಗೆ ಅಧ್ಯಕ್ಷಗಿರಿ ಕೈತಪ್ಪಿದೆ ಎನ್ನಲಾಗಿದೆ.

ರಾಜ್ಯ ಸಹಕಾರಿ ಬ್ಯಾಂಕ್‌ಗೆ ಜನವರಿಯಲ್ಲೇ ಚುನಾವಣೆ ನಡೆಯಬೇಕಿತ್ತು. ಅಭ್ಯರ್ಥಿಗಳ ಆಯ್ಕೆ ವಿಚಾರದಲ್ಲಿ ಒಮ್ಮತ ಮೂಡದ ಕಾರಣ ಸುಮಾರು 8 ತಿಂಗಳು ತಡವಾಗಿ ಚುನಾವಣೆ ನಡೆದಿದೆ.

ಅಪೆಕ್ಸ್ ಬ್ಯಾಂಕ್‌ನ 19 ನಿರ್ದೇಶಕರೊಂದಿಗೆ ಸಹಕಾರ ಸಚಿವ ಲಕ್ಷ್ಮಣ ಸವದಿ ಸಭೆ ನಡೆಸಿದ್ದರು. ಸಭೆಯಲ್ಲಿ ಬಹುತೇಕ ನಿರ್ದೇಶಕರು ಎಸ್.ರವಿ ಅವರಿಗೆ ಬೆಂಬಲ ವ್ಯಕ್ತಪಡಿಸಿದ್ದರು ಎನ್ನಲಾಗಿದೆ. ಬಳಿಕ ಸವದಿ ಮತ್ತು ರಾಜಣ್ಣ ನಡುವೆ ಪ್ರತ್ಯೇಕವಾಗಿ ಮಾತುಕತೆ ನಡೆಯಿತು. ಅಂತಿಮವಾಗಿ ಎಸ್. ರವಿ ಆಯ್ಕೆ ಮಾಡಲಾಗಿದೆ. ಬೆಂಗಳೂರಿನಲ್ಲಿ ಅಪೆಕ್ಸ್ ಬ್ಯಾಂಕ್ ಚುನಾವಣಾ ಪ್ರಕ್ರಿಯೆ ಕುರಿತು ಸಹಕಾರ ಸಚಿವ ಲಕ್ಷ್ಮಣ್ ಸವದಿ ಮಾತ ನಾಡಿ, ಮೊದಲ ಎರಡೂವರೆ ವರ್ಷಗಳ ಅವಧಿಗೆ

ಪುಟ 2ಕ್ಕೆ

## ಸಿದ್ದು ಆಪ್ತ ರಾಜಣ್ಣಗೆ ತಪ್ಪಿದ ಅಧ್ಯಕ್ಷ ಸ್ಥಾನ



ಸಿದ್ದರಾಮಯ್ಯ ಅವರ ಕಟ್ಟಾ ಬೆಂಬಲಿಗರಾಗಿರುವ ಮಾಜಿ ಸಚಿವ ಕೆ.ಎನ್.ರಾಜಣ್ಣ ಅವರಿಗೆ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನ ತಪ್ಪಿದ್ದು ಭಾರೀ ಹಿನ್ನಡೆ ಉಂಟಾಗಿದೆ. ಸಂಪುಟ ಪುನಾರಚನೆಯಲ್ಲಿ ಸಚಿವ ಸ್ಥಾನ ವಂಚಿತರಾಗಿದ್ದ ರಾಜಣ್ಣ ಅಪೆಕ್ಸ್ ಬ್ಯಾಂಕ್ ಮೇಲೆ ಕಣ್ಣಿಟ್ಟಿದ್ದರು. ಆದರೆ ಸಿಎಂ ಡಿ.ಕೆ.ಶಿವಕುಮಾರ್ ಅವರು ಸಂಬಂಧಿ ಎಂಎಲ್‌ಸಿ ರವಿ ಅವರಿಗೆ ಪಟ್ಟ ಕಟ್ಟಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಕಾಂಗ್ರೆಸ್‌ನಲ್ಲಿ ಡಿ.ಕೆ. ಶಿವಕುಮಾರ್ ವಿರುದ್ಧ ಧ್ವನಿ ಎತ್ತುತ್ತಿದ್ದ ನಾಯಕರನ್ನು ಆಯಕಟ್ಟಿನ

ಪುಟ 2ಕ್ಕೆ

# ಪಂಚಾಯ್ತಿ ಫೈಟ್‌ಗೆ ಸರ್ಕಾರ ಸಿದ್ಧ

## ಗ್ರಾಪಂ, ತಾಪಂ, ಜಿಪಂ ಚುನಾವಣೆ ಶೀಘ್ರ: ಸಚಿವ ಈಶ್ವರ್ ಖಂಡ್ರೆ

**ಬೆಂಗಳೂರು:** ರಾಜ್ಯದಲ್ಲಿ ಅವಧಿ ಮುಗಿದ ಪಂಚಾಯಿತಿಗಳ ಚುನಾವಣೆ ನಡೆಸಿಲು ಸರ್ಕಾರ ಸಿದ್ಧತೆ ಮಾಡುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.

ಮಾಧ್ಯಮಗಳ ಜೊತೆ ಗುರುವಾರ ಮಾತನಾಡಿದ ಅವರು, ಅವಧಿ ಮುಗಿದ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ನಡೆಸಲು ಸರ್ಕಾರ ಮುಂದಾಗಿದೆ. ಎಸ್‌ಐಆರ್ ಕಾರ್ಯಕ್ಕೆ ಸರ್ಕಾರಿ ಸಿಬ್ಬಂದಿ ನಿಯೋಜನೆ ಆಗಿದ್ದ ಹಿನ್ನೆಲೆಯಲ್ಲಿ ವಿಳಂಬವಾಗಿದೆ. ಶೀಘ್ರವೇ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗುವುದು ಎಂದು ತಿಳಿಸಿದರು.

ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಹಾಗೂ ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ ಡಿ.ರಂದೀಪ್ ಅವರೊಂದಿಗೆ ಚುನಾವಣೆ ನಡೆಸುವ ಕುರಿತ ಕಾನೂನು ಅಂಶಗಳ ಬಗ್ಗೆ ಸಚಿವರು ಮಾಹಿತಿ ಪಡೆದರು.

## ಕೇಂದ್ರದ ಅನುದಾನಕ್ಕೆ ಸುಪ್ರೀಂಗೆ ಮೊರೆ: ಖಂಡ್ರೆ



**ಬೆಂಗಳೂರು:** 15ನೇ ಹಣಕಾಸು ಆಯೋಗದ ಶಿಫಾರಸಿನಂತೆ ಗ್ರಾಮ ಪಂಚಾಯಿತಿಗಳಿಗೆ ಬರಬೇಕಾದ 2186.20 ಕೋಟಿ ರೂ. ಅನುದಾನ ತಡೆಹಿಡಿದಿರುವ ಕೇಂದ್ರ ಸರ್ಕಾರದ ವಿರುದ್ಧ ಸುಪ್ರೀಂ ಕೋರ್ಟ್ ಮೊರೆ ಹೋಗಲು ತೀರ್ಮಾನಿಸಲಾಗಿದೆ ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ತಮ್ಮ ಕಚೇರಿಯಲ್ಲಿ ಗುರುವಾರ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಮತ್ತು ಅಧಿಕಾರಿಗಳೊಂದಿಗೆ ಈ ಸಂಬಂಧ ಸಭೆ ನಡೆಸಿದ ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ್ ಖಂಡ್ರೆ ಅವರು, 2025–26ನೇ ಸಾಲಿನಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಹಂಚಿಕೆ ಮಾಡಿದ್ದ 2186.20 ಕೋಟಿ ರೂ. ಬಿಡುಗಡೆ ಮಾಡಲು ನಿರಾಕರಿಸಿರುವ ಕೇಂದ್ರ ಸರ್ಕಾರದ ನಡೆಗೆ ಬೇಸರ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಈ ಬಾರಿ ಮಳೆಯ ಕೊರತೆಯಿಂದ ಬರ ಪರಿಸ್ಥಿತಿ ತಲೆದೋರಿದೆ. 710 ಹಳ್ಳಿಗಳಲ್ಲಿ

ಪುಟ 2ಕ್ಕೆ

# ಬಲಿಷ್ಠ ಕರ್ನಾಟಕಕ್ಕೆ ಡಿಕೆಶಿ ಶಪಥ

## ಸರ್ಕಾರಕ್ಕೆ 100 ದಿನ: 3 ಮಹಾ ಸಂಕಲ್ಪ, 9 ಸಂಕಲ್ಪ–ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಘೋಷಣೆ



**ಬೆಂಗಳೂರು:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರ ಗುರುವಾರ ನೂರು ದಿನಗಳನ್ನು ಪೂರೈಸಿದ ಸಂಭ್ರಮದಲ್ಲಿ ಬಲಿಷ್ಠ ಕರ್ನಾಟಕಕ್ಕೆ 3 ಮಹಾ ಸಂಕಲ್ಪ ಮತ್ತು 9 ಸಂಕಲ್ಪಗಳನ್ನು ಸಿಎಂ ಡಿಕೆಶಿ ಘೋಷಿಸಿದರು.

ವಿಧಾನಸೌಧದ ಬಾಂಕ್ವೆಟ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಈ ಸಂಕಲ್ಪವನ್ನು ಕೈಗೊಂಡು ಮಾತನಾಡಿದ ಡಿಕೆಶಿ, ನಮ್ಮ ಗುರಿ ದೃಢ ಕರ್ನಾಟಕವನ್ನು ನಿರ್ಮಿಸುವುದು. ಆರ್ಥಿಕವಾಗಿ ಸದೃಢ, ಸಾಮಾಜಿಕವಾಗಿ ಸಶಕ್ತ, ತಂತ್ರಜ್ಞಾನದಲ್ಲಿ ಮುಂದುವರಿದ, ಮತ್ತು ಮೌಲ್ಯಗಳಲ್ಲಿ ಆಳವಾಗಿ ಬೇರೂರಿದ ಕರ್ನಾಟಕ ಎಂದು ಹೇಳಿದರು.

### ಮಹಾಸಂಕಲ್ಪ ಏನು?

**2037ರ ವೇಳೆಗೆ ನಮ್ಮ ರಾಜ್ಯದ ಆರ್ಥಿಕತೆಯನ್ನು 0.343 ಟ್ರಿಲಿಯನ್‌ನಿಂದ 1 ಟ್ರಿಲಿಯನ್ ಡಾಲರ್‌ಗೆ ಏರಿಸುವುದು ನಮ್ಮ ಆದ್ಯತೆ. ಶೇ.5ಕ್ಕಿಂತ ಕಡಿಮೆ ಅಪೌಷ್ಟಿಕತೆ ಮತ್ತು ಶೂನ್ಯ ಬಡತನ ಮತ್ತು ಶಾಲಾ ತೊರೆಯುವಿಕೆ ನಿರ್ಧರಿಸುವುದು ನಮ್ಮ ಗುರಿ ಎಂದು ಸಿಎಂ ಡಿ.ಕೆ.ಶಿವಕುಮಾರ್ ಘೋಷಿಸಿದರು.**

### ನನ್ನ ಹಸ್ತ ಸದಾ ಮುಂದು...

**ಬೆಂಗಳೂರು:** ನಿಮ್ಮ ಸಂಕಷ್ಟಗಳನ್ನು ಆಲಿಸಲು, ನಿಮ್ಮ ಬೇಡಿಕೆಗಳಿಗೆ ಸ್ಪಂದಿಸಲು ನನ್ನ ಹಸ್ತ ಸದಾ ಮುಂದಿರಲಿದೆ. ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಶಕ್ತ ಕರ್ನಾಟಕವನ್ನು

ಪುಟ 2ಕ್ಕೆ

### ರಾಜ್ಯದ ಅಭಿವೃದ್ಧಿಗೆ 9 ಸಂಕಲ್ಪ

- **ಆರೋಗ್ಯ:** ಕೈಗೆಟುಕುವ ಸುಲಭದ ಮತ್ತು ಅತ್ಯಾಧುನಿಕ ಆರೋಗ್ಯ ಮತ್ತು ಚಿಕಿತ್ಸಾ ವ್ಯವಸ್ಥೆ. ಆರೋಗ್ಯ ಮೂಲಭೂತ ಸೌಕರ್ಯ ಸೃಷ್ಟಿಸುವುದು ಮುಖ್ಯಮಂತ್ರಿಗಳ ಹೊಸ ವಿಮಾ ಯೋಜನೆ. ಆರೋಗ್ಯ ಪ್ರವಾಸೋದ್ಯಮ ಬೆಳವಣಿಗೆಗಾಗಿ ಮೆಡಿಸಿಟಿ ನಿರ್ಮಾಣ.
- **ಶಿಕ್ಷಣ ಕ್ಷೇತ್ರದ ಪುನಶ್ಚೇತನ:** ಕರ್ನಾಟಕ ಪಬ್ಲಿಕ್ ಶಾಲೆಗಳ ಮೂಲಕ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣವನ್ನು ಪುನಶ್ಚೇತನಗೊಳಿಸಲಾಗುವುದು. ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಲಾಗುವುದು. ಕೈಗೆಟುಕುವ ದರದಲ್ಲಿ ಶಿಕ್ಷಣ ಮತ್ತು ಉತ್ತಮ ಗುಣಮಟ್ಟದ ಮತ್ತು ಕೈಗೆಟುಕುವ ಸಾರ್ವಜನಿಕ ಶಿಕ್ಷಣಕ್ಕೆ ಆದ್ಯತೆ ನೀಡಲು ಯೋಜನೆ.
- **ಜಲಭದ್ರತೆ:** ಕರ್ನಾಟಕದ ಜಲ ಭವಿಷ್ಯವನ್ನು ಸುರಕ್ಷಿತಗೊಳಿಸುವುದು. ಮೇಕೆದಾಟು ಯೋಜನೆ ಜಾರಿ ಮತ್ತು ಕೃಷ್ಣ ಮೇಲ್ದಂಡೆ ಯೋಜನೆಗೆ ವೇಗ ನೀಡುವುದು. ಎತ್ತಿನಹೊಳೆ ಮತ್ತು ಭದ್ರಾ ಮೇಲ್ದಂಡೆ ಯೋಜನೆಗಳ ಪೂರ್ಣಗೊಳಿಸುವಿಕೆ ಹಾಗೂ ರಾಜ್ಯಾದ್ಯಂತ ಜಲಮೂಲಗಳ

ಪುಟ 2ಕ್ಕೆ

# ಎಂದಿಗೂ ಗ್ಯಾರಂಟಿಗಳು ನಿಲ್ಲಲ್ಲ

## ವಿಶ್ವದ ಎಲ್ಲಡೆ ಕರ್ನಾಟಕದ ಗ್ಯಾರಂಟಿ ಮಾಡೆಲ್: ಸಿಎಂ ಡಿಕೆಶಿ ಬಣ್ಣನೆ




**ಬೆಂಗಳೂರು:** ಕರ್ನಾಟಕದ ಗ್ಯಾರಂಟಿ ಯೋಜನೆಗಳನ್ನು ಪ್ರಧಾನಿ ಮೋದಿ ಸೇರಿದಂತೆ ವಿಪಕ್ಷಗಳು ಟೀಕಿಸಿದ್ದವು. ಈಗ ಕರ್ನಾಟಕದ ಗ್ಯಾರಂಟಿ ಮಾಡೆಲ್ ದೇಶದ ಎಲ್ಲೆಲ್ಲೂ ಇದೆ. ವಿಶ್ವದ ಅನೇಕ ದೇಶಗಳು ಒಪ್ಪಿಕೊಂಡಿವೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣ್ಣಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಗುರುವಾರ ನಡೆದ ತಮ್ಮ ನೇತೃತ್ವದ ಸರ್ಕಾರದ 100 ದಿನಗಳ ಆಡಳಿತ ಶತದಿನೋತ್ಸವ ಸಂಭ್ರಮದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಜಾರಿಯಲ್ಲಿರುವ ಯಾವುದೇ ಗ್ಯಾರಂಟಿ ಯೋಜನೆ ನಿಲ್ಲುವುದಿಲ್ಲ ಎಂದು ಭರವಸೆ ನೀಡಿದರು.

ಇದು ನೂರು ದಿನಗಳ ಆಚರಣೆ ಅಲ್ಲ. ಇದು ಡಿ.ಕೆ.ಶಿವಕುಮಾರ್ ಸರ್ಕಾರ ಅಲ್ಲ. ಇದು ನಿಮ್ಮ ಸರ್ಕಾರ. 7 ಕೋಟಿ ಜನತೆಯ ಸರ್ಕಾರ ಇದು. ನಾನೊಬ್ಬನೇ ರಥ ಎಳೆಯುತ್ತಿಲ್ಲ. ಈ ಸರ್ಕಾರ ಅನೇಕ ಆಲೋಚನೆ ಮಾಡಿದೆ. ಶತಕತದ ಪಥದಲ್ಲಿ ಕರ್ನಾಟಕ

ಪುಟ 2ಕ್ಕೆ

### ಭಯ ಮುಕ್ತ ಕರ್ನಾಟಕ

**ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರೆದ ನಂತರ ಭಯ ಮುಕ್ತ ಕರ್ನಾಟಕ ನಿರ್ಮಾಣ ಮಾಡಿದ್ದೇವೆ. ದಕ್ಷಿಣ ಭಾರತಕ್ಕೆ ಕರ್ನಾಟಕ ಧ್ವನಿಯಾಗಿ ಕೆಲಸ ಮಾಡುತ್ತಿದೆ. ತುಂಗಭದ್ರಾ ಗೇಟ್ ಉದ್ಘಾಟನೆ ಸಂದರ್ಭ 3 ರಾಜ್ಯದ ಸಿಎಂ ಬಂದರು. ಕೇಂದ್ರದ ಸಚಿವರ ಜೊತೆ ಮಾತಾಡಿದ್ದೇವೆ. ಮೇಕೆದಾಟು ಯೋಜನೆಗೆ ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ಇದು ನಮ್ಮ ಸಾಧನೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಬಣ್ಣಿಸಿದರು.**

## ಮೈಸೂರು ಅರಮನೆಗೆ ವಿದ್ಯುತ್ ದೀಪಾಲಂಕಾರ

**ಮೈಸೂರು:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ನೂರು ದಿನ ಪೂರೈಸಿರುವ ಹಿನ್ನೆಲೆಯಲ್ಲಿ ಮೈಸೂರು ಅರಮನೆಗೆ ವರ್ಣರಂಜಿತ ವಿದ್ಯುತ್ ದೀಪಾಲಂಕಾರ ಮಾಡಲಾಗಿದೆ. ಗುರುವಾರದಿಂದ 4 ದಿನ ಸಂಜೆ 6ರಿಂದ 10 ಗಂಟೆಯವರೆಗೆ ವಿದ್ಯುತ್ ಅಲಂಕಾರ ಇರಲಿದೆ. ಅರಮನೆಯ ಜಯರಾಮ ದ್ವಾರದಲ್ಲಿ ಸರ್ಕಾರದ ಅಭಿವೃದ್ಧಿ ಯೋಜನೆ ಮತ್ತು ಪಂಚ ಗ್ಯಾರಂಟಿ ಯೋಜನೆಗಳ ಯಶೋಗಾಥೆಯನ್ನು ಬಿಂಬಿಸುವ ಎಲ್‌ಇಡಿ ಪ್ರದರ್ಶನ ಗಳು, ಧ್ವನಿ ಮತ್ತು ಬೆಳಕು, ತ್ರಿಡಿ ಮ್ಯಾಪಿಂಗ್ ಪ್ರದರ್ಶನ ನಡೆಯಲಿದೆ.



## ಜಾರಕಿಹೊಳಿ ನಿವಾಸದಲ್ಲಿ ಮುಂದುವರಿದ ಇಡಿ ಶೋಧ



**ಬೆಂಗಳೂರು:** ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ನಿವಾಸ ಹಾಗೂ ಕಚೇರಿಗಳ ಮೇಲೆ ಜಾರಿ ನಿರ್ದೇಶನಾಲಯದ ದಾಳಿ ಗುರುವಾರ ಮುಂಜಾನೆಯಿಂದ ಮತ್ತೆ ಮುಂದುವರಿದಿದೆ.

ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ ಉಲ್ಲಂಘಿಸಿ ವಿದೇಶದಲ್ಲಿ ಅಕ್ರಮವಾಗಿ ಹಣ ಹೂಡಿಕೆ ಮಾಡಿರುವ ಆರೋಪದ ಮೇಲೆ ಇಡಿ ಅಧಿಕಾರಿಗಳು 18 ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿದ್ದರು. ಬುಧವಾರ ತಡರಾತ್ರಿ ತನಕ ಸಚಿವರನ್ನು ಅಧಿಕಾರಿಗಳು ವಿಚಾರಣೆ ನಡೆಸಿದರು. ಊಟದ ಬ್ರೇಕ್ ಬಳಿಕ ಸಹ ವಿಚಾರಣೆ ನಡೆಸಲಾಗಿತ್ತು. ತಡರಾತ್ರಿ 2 ಗಂಟೆಯ ತನಕ ಸುಮಾರು 18 ಗಂಟೆಗಳ ಕಾಲ ವಿಚಾರಣೆ ನಡೆಸಿದ್ದರು.

ತಡರಾತ್ರಿ 3 ಗಂಟೆಗೆ ಸತೀಶ್ ಜಾರಕಿಹೊಳಿ ಅವರಿಗೆ ನಿದ್ರೆ ಮಾಡುವುದಕ್ಕೆ ಅಧಿಕಾರಿಗಳು ಅವಕಾಶ ಕಲ್ಪಿಸಿಕೊಟ್ಟಿದ್ದರು. ಸೆ.9ರ ಮುಂಜಾನೆ 7 ಗಂಟೆಯಿಂದ ಆರಂಭಗೊಂಡ ಇಡಿ ದಾಳಿ ಇನ್ನೂ ಮುಂದುವರೆದಿದೆ. ಎಲ್ಲಾ ಕಡೆ ಶೋಧ ಮುಗಿಯೋವರೆಗೂ ಸತೀಶ್ ಜಾರಕಿಹೊಳಿ ನಿವಾಸದಲ್ಲೇ ಇಡಿ ಅಧಿಕಾರಿಗಳು ಇರಲಿದ್ದಾರೆ.

ಸತೀಶ್ ಜಾರಕಿಹೊಳಿಯವರಿಗೆ ಮಲಗಲು ಅವಕಾಶ ನೀಡಿದ ಬೆನ್ನಲ್ಲೇ ತಡರಾತ್ರಿ 3 ಗಂಟೆಗೆ ಇಡಿ ಅಧಿಕಾರಿಗಳ ಒಂದು ತಂಡ ಅವರ ಮನೆಗೆ ಆಗಮಿಸಿದೆ. ಸಂಪೂರ್ಣ ದಾಳಿ ಅಂತ್ಯವಾದ ಬಳಿಕ ಪಂಚನಾಮೆ ನಡೆಯಲಿದೆ.

# ಹಿಂದೂ ಪರ ಸರ್ಕಾರ ಅಗತ್ಯ

## ರಾಜ್ಯ ಸರ್ಕಾರ, ಸಿಎಂ ಡಿಕೆಶಿ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಾಗ್ದಾಳಿ



### ನಮ್ಮ ಹೋರಾಟ ನಿಲ್ಲಲ್ಲ

**ಪಾದಯಾತ್ರೆ 10ನೇ ದಿನ ಮುಗಿದಿರಬಹುದು. ಆದರೆ ನಮ್ಮ ಹೋರಾಟ ನಿಂತಿಲ್ಲ, ನಿಲ್ಲುವುದೂ ಇಲ್ಲ. ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವವರೆಗೂ ಹೋರಾಟ ಮುಂದುವರಿಯಲಿದೆ. ನಾವು ಮನೆಯಲ್ಲಿ ಕೂರುವುದಿಲ್ಲ. ರಾಜ್ಯದ ವಿವಿಧ ಕ್ಷೇತ್ರಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನ ಆಲಿಸುವುದಾಗಿ ಅವರು ಹೇಳಿದರು. ಅಲ್ಲದೇ ಅಕ್ಟೋಬರ್ 17ರವರೆಗೆ ಸೇವಾ ಸಂಕಲ್ಪ ಕಾರ್ಯಕ್ರಮ ನಡೆಸಲಾಗುವುದು ಎಂದು ವಿಜಯೇಂದ್ರ ತಿಳಿಸಿದರು.**

**ಬಳ್ಳಾರಿ:** ರಾಜ್ಯ ಸರ್ಕಾರ ಅಲ್ಪಸಂಖ್ಯಾತರ ಓಲೈಕೆಗಾಗಿ ವಂದೇ ಮಾತರಂ ಗೀತೆ ಮೊಟಕುಗೊಳಿಸಿದೆ. ರೈತರು, ದಲಿತರು ಒಟ್ಟಾಗಿ ಹಿಂದೂಗಳ ಪರ ಇರುವ ಸರ್ಕಾರ ಅಧಿಕಾರಕ್ಕೆ ತರಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಕರೆ ನೀಡಿದರು.

ಬಳ್ಳಾರಿಯಲ್ಲಿ ಗುರುವಾರ ಆಯೋಜಿಸಲಾಗಿದ್ದ 'ಬಳ್ಳಾರಿ ಚಲೋ' ಪಾದಯಾತ್ರೆ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಕೇಂದ್ರ ಸರ್ಕಾರ ಸಂಪೂರ್ಣ ವಂದೇ ಮಾತರಂ ಗೀತೆಯನ್ನು ಹಾಡುವಂತೆ ಸೂಚಿಸಿದ್ದರೂ, ರಾಜ್ಯ ಸರ್ಕಾರ ಕೇವಲ ಎರಡು ಚರಣಗಳನ್ನ ಹಾಡುವಂತೆ ಆದೇಶಿಸಿದೆ. ಅಲ್ಪಸಂಖ್ಯಾತರ ಓಲೈಕೆಗಾಗಿ ವಂದೇ ಮಾತರಂ ಗೀತೆಗೆ ಕತ್ತರಿ ಹಾಕಲಾಗಿದೆ. ಈ ವಿಚಾರವಾಗಿ ಜನರು ಆಕ್ರೋಶ ವ್ಯಕ್ತಪಡಿಸುತ್ತಿದ್ದು, ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷವನ್ನ ಮತ್ತೆ ಮನೆಗೆ ಕಳುಹಿಸಲಿದ್ದಾರೆ ಎಂದು

ಪುಟ 2ಕ್ಕೆ

# 'ವಂದೇ ಮಾತರಂ' 2 ಚರಣ ಅಷ್ಟೇ ಹಾಡಲು ರಾಜ್ಯ ಸರ್ಕಾರದ ಆದೇಶ

## ಕೇಂದ್ರ ಸರ್ಕಾರದ ಆದೇಶಕ್ಕೆ ಸೆಡ್ಡು ಹೊಡೆದ ಕಾಂಗ್ರೆಸ್



**ಬೆಂಗಳೂರು:** ರಾಷ್ಟ್ರೀಯ ಗೀತೆ 'ವಂದೇ ಮಾತರಂ'ಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಹಾಗೂ ಕಾಂಗ್ರೆಸ್ ನಡುವಿನ ಗುದ್ದಾಟ ಮತ್ತೊಂದು ಮಜಲಿಗೆ ತಲುಪಿದೆ. ಕೇಂದ್ರ ಗೃಹ ಸಚಿವಾಲಯ ವಂದೇ ಮಾತರಂ ಗೀತೆಯ ಎಲ್ಲಾ ಆರು ಚರಣಗಳನ್ನು ಹಾಡುವುದನ್ನು ಕಡ್ಡಾಯಗೊಳಿಸಿ ಹೊರಡಿಸಿದ್ದ ಮಾರ್ಗಸೂಚಿಗೆ ಬದಲಾಗಿ, ಕರ್ನಾಟಕ ಸರ್ಕಾರ ತನ್ನದೇ ಆದ ನೂತನ ನಿಯಮ ಜಾರಿ ಮಾಡಿದೆ.

ಸರ್ಕಾರಿ ಮತ್ತು ಸಾರ್ವಜನಿಕ ಕಾರ್ಯಕ್ರಮಗಳಲ್ಲಿ 'ವಂದೇ ಮಾತರಂ'ನ ಮೊದಲ ಎರಡು ಚರಣಗಳನ್ನು ಮಾತ್ರವೇ ಹಾಡಲು ಡಿಕೆ ಶಿವಕುಮಾರ್ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.

ಭಾರತದ ಸ್ವಾತಂ ಚಳವಳಿಯ ವೇಳೆ ರಾಷ್ಟ್ರೀಯತೆ, ಏಕತೆ ಮತ್ತು ದೇಶಭಕ್ತಿ ಮೂಡಿಸಲು ವಂದೇ ಮಾತರಂ ಪ್ರಮುಖ ಪಾತ್ರ ವಹಿಸಿತ್ತು. ಕೇಂದ್ರ ಗೃಹ ವ್ಯವಹಾರಗಳ ಸಚಿವಾಲಯ ವಂದೇ ಮಾತರಂ ರಾಷ್ಟ್ರೀಯ ಗೀತೆಯ ಅಧಿಕೃತ ಆವೃತ್ತಿ ಹಾಗೂ ಅದರ ಗಾಯನ/ವಾದನಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿತ್ತು. ಆ ಮಾರ್ಗಸೂಚಿಗಳಲ್ಲಿ ವಾದನ ಮತ್ತು ಸಾಮೂಹಿಕ ಗಾಯನಕ್ಕೆ ಪ್ರತ್ಯೇಕ ಸಂದರ್ಭಗಳನ್ನು ನಿರ್ದಿಷ್ಟಪಡಿಸಲಾಗಿತ್ತು.

ರಾಜ್ಯದಲ್ಲಿ ನಡೆಯುವ ವಿವಿಧ ಸರ್ಕಾರಿ ಕಾರ್ಯಕ್ರಮಗಳು ಮತ್ತು ಸಮಾರಂಭಗಳ ಸ್ವರೂಪ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ರಾಷ್ಟ್ರೀಯ ಗೀತೆಯ ವಾದನ/ಗಾಯನದಲ್ಲಿ ಏಕರೂಪತೆ, ಗೌರವ ಮತ್ತು ಸೂಕ್ತ ಶಿಷ್ಟಾಚಾರ ಕಾಯ್ದುಕೊಳ್ಳಲು ಸರ್ಕಾರ ನಿರ್ಧರಿಸಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸಚಿವ ಸಂಪುಟದ ತೀರ್ಮಾನದಂತೆ ರಾಜ್ಯ ಸರ್ಕಾರಿ ಸಮಾರಂಭಗಳಲ್ಲಿ ವಂದೇ ಮಾತರಂ ಗೀತೆಯ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಬೇಕು ಎಂದು ನಿರ್ದೇಶನ ನೀಡಲಾಗಿದೆ.

ರಾಷ್ಟ್ರಪತಿಗಳು, ಉಪ ರಾಷ್ಟ್ರಪತಿಗಳು, ಪ್ರಧಾನಮಂತ್ರಿ, ರಾಜ್ಯಪಾಲರು ಭಾಗವಹಿಸುವ ಅಧಿಕೃತ ಕಾರ್ಯಕ್ರಮಗಳ ಜೊತೆಗೆ ಮತ್ತು ಕೇಂದ್ರ ಸರ್ಕಾರದ ಪ್ರಾತಿನಿಧ್ಯದ ಕಾರ್ಯಕ್ರಮಗಳಲ್ಲಿ ಕೇಂದ್ರ ಸರ್ಕಾರದ ನಿಯಮದ ಅನ್ವಯ ಎಲ್ಲಾ 6 ಚರಣಗಳನ್ನು ಹಾಡಲು ಸೂಚಿಸಲಾಗಿದೆ.

# ಸಚಿವರ ಮೇಲಿನ ಇಡಿ ದಾಳಿ ಖಂಡಿಸಿ ಪ್ರತಿಭಟನೆ

ಮೈಸೂರು: ಸಚಿವ ಸತೀಶ್‌ಜಾರಕಿಹೊಳಿ ಅವರ ನಿವಾಸ ಸೇರಿ ಹಲವೆಡೆ ಜಾರಿ ನಿರ್ದೇಶನಾಲಯದ(ಇಡಿ) ಅಧಿಕಾರಿಗಳು ದಾಳಿ ನಡೆಸಿರುವುದನ್ನು ಖಂಡಿಸಿ ನಗರದಲ್ಲಿ ದಲಿತ ಮಹಾಸಭಾ ಹಾಗೂ ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿದವು.

ನಗರದ ಪುರಭವನ ಮುಂಭಾಗದ ಅಂಬೇಡ್ಕರ್ ಪ್ರತಿಮೆ ಬಳಿ ಗುರುವಾರ ಪ್ರತಿಭಟನೆ ನಡೆಸಿ ನಾನಾ ಘೋಷಣೆಗಳನ್ನು ಕೂಗಿದರು. ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಸರ್ಕಾರ ಮುಂಬರುವ ವಿಧಾನಸಭಾ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು, ರಾಜಕೀಯ ಲಾಭಕ್ಕಾಗಿ ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ. ಸತೀಶ್ ಜಾರಕಿಹೊಳಿಯವರು ದಲಿತ, ಎಸ್‌ಟಿ ಹಾಗೂ ಹಿಂದುಳಿದ ವರ್ಗಗಳ ಪ್ರಬಲ ನಾಯಕರಾಗಿ ಬೆಳೆಯುತ್ತಿದ್ದಾರೆ. ಮುಂಬರುವ ಚುನಾವಣೆಯಲ್ಲಿ ದಲಿತ ಮತ್ತು ಹಿಂದುಳಿದ ವರ್ಗಗಳ ಮತಗಳು ಕಾಂಗ್ರೆಸ್ ಪಕ್ಷದ ಪರವಾಗಿ ಧ್ರುವೀಕರಣಗೊಳ್ಳಲಿವೆ ಎಂಬ ಭೀತಿಯಿಂದ, ಅವರನ್ನು ರಾಜಕೀಯವಾಗಿ ಮುಗಿಸುವ, ಕಟ್ಟಿಹಾಕುವ ಕುತಂತ್ರವನ್ನು ಬಿಜೆಪಿ ಮಾಡುತ್ತಿದೆ ಎಂದು ದೂರಿದರು.




ಸತೀಶ್ ಜಾರಕಿಹೊಳಿಯವರು ಮಾನವ ಬಂಧುತ್ವ ವೇದಿಕೆಯ ಮೂಲಕ ಬಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಯಾವುದೇ ಜಾತಿ, ಧರ್ಮದ ತಾರತಮ್ಯವಿಲ್ಲದೆ ಉಚಿತ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರಗಳನ್ನು ಬೆಳಗಾವಿ ಸೇರಿದಂತೆ ಹಲವು ಭಾಗಗಳಲ್ಲಿ ತೆರೆದಿದ್ದಾರೆ. ತಮ್ಮ ಸ್ವಂತ ಖರ್ಚಿನಿಂದ ವಿದ್ಯಾರ್ಥಿಗಳಿಗೆ ಉದ್ಯೋಗ ಕಂಡುಕೊಳ್ಳಲು ನೆರವಾಗು ತ್ತಿರುವ ಅವರ ಸಮಾಜಮುಖಿ ಕಾರ್ಯಗಳನ್ನು ಸಹಿಸದೆ, ಬಿಜೆಪಿ ಇಡಿ ದಾಳಿಯಂತಹ ಬೆದರಿಸುವ ತಂತ್ರಗಾರಿಕೆಗೆ ಇಳಿದಿದೆ ಎಂದು ಆಕ್ರೋಶ ಹೊರಹಾಕಿದರು. ಪ್ರತಿಭಟನೆಯಲ್ಲಿ ದಲಿತ ಮಹಾಸಭಾ ಅಧ್ಯಕ್ಷ ಎಸ್.ರಾಜೇಶ್, ಪ್ರಗತಿಪರ ಒಕ್ಕೂಟದ ಅಧ್ಯಕ್ಷ ದ್ಯಾವಪ್ಪ ನಾಯಕ, ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಬಸವರಾಜು, ಅಹಿಂದ ಜವರಪ್ಪ, ಮಾಜಿ ಮೇಯರ್ ಪುರುಷೋತ್ತಮ್, ತುಂಬಲ ರಾಮಣ್ಣ, ಶ್ರೀನಿವಾಸ್, ಲೋಕೇಶ್ ಪಿಯಾ, ಮಹದೇವು, ಶ್ರೀನಿವಾಸ್, ಎಸ್. ಆರ್.ರವಿ, ಸೈಯದ್ ಫಾರೂಕ್, ಬಾಬು, ಸತ್ಯನಾರಾಯಣ್, ರೇವಣ್ಣ, ರವಿಕುಮಾರ್ ಸೇರಿ ಹಲವರು ಭಾಗವಹಿಸಿದ್ದರು.

# ಜೆ.ಯೋಗೇಶ್ ಕಾಂಗ್ರೆಸ್ ಜಿಲ್ಲಾಧ್ಯಕ್ಷ

ಚಾಮರಾಜನಗರ, ಸಂಘಟನಾ ಪುನರ್‌ರಚನೆಗೆ ವೇಗ ನೀಡಿರುವ ಕಾಂಗ್ರೆಸ್ ಹೈಕಮಾಂಡ್, ಕರ್ನಾಟಕದ 35 ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರನ್ನು ನೇಮಕ ಮಾಡಿ ಆದೇಶಿಸಿದ್ದು, ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಗೆ ಸಾರಥಿಯನ್ನು ನೇಮಕ ಮಾಡಲಾಗಿದೆ.



ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಸಮಿತಿಗೆ ನೂತನ ಅಧ್ಯಕ್ಷರಾಗಿ ಉಪ್ಪಾರ ಸಮಾಜದ ಯರಿ ಯೂರು ಜೆ.ಯೋಗೇಶ್ ಅವರನ್ನು ನೇಮಕ ಮಾಡಿ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಬುಧವಾರ ಆದೇಶ ಹೊರಡಿಸಿದೆ.

ಸಂಘಟನ್ ಸೃಜನ್ ಅಭಿಯಾನ'ದಡಿ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ಎಐಸಿಸಿ ವೀಕ್ಷಕರು ಪ್ರತಿ ಬ್ಲಾಕ್‌ಗೆ ಭೇಟಿ ನೀಡಿ ಮುಖಂಡರು ಹಾಗೂ ಕಾರ್ಯಕರ್ತರಿಂದ ಮಾಹಿತಿ ಸಂಗ್ರಹಿಸಿ ವರದಿ ಸಲ್ಲಿಸಿದ್ದರು. ಈ ವರದಿಗಳ ಆಧಾರದ ಮೇಲೆ ಹೊಸ ಜಿಲ್ಲಾಧ್ಯಕ್ಷರನ್ನು ಆಯ್ಕೆ ಮಾಡಲಾಗಿದೆ ಎನ್ನಲಾಗಿದೆ.

ಎಐಸಿಸಿ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರಿಂದ ನೇಮಕಾತಿ ಆದೇಶ ಹೊರಬಿದ್ದಿದೆ. ಕಾಂಗ್ರೆಸ್ ಈ ಹಿಂದೆ ವಿವಿಧ ರಾಜ್ಯಗಳಲ್ಲಿ ಇದೇ 'ಸಂಘಟನ್ ಸೃಜನ್ ಅಭಿಯಾನ'ದಡಿ ವೀಕ್ಷಕರ ವರದಿ ಆಧರಿಸಿ ಆಅಆ ಅಧ್ಯಕ್ಷರನ್ನು ನೇಮಕ ಮಾಡಿರುವುದು ದಾಖಲಾಗಿದೆ. ಈ ನೇಮಕಾತಿಗಳೊಂದಿಗೆ ಮುಂಬರುವ ದಿನಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಕಾಂಗ್ರೆಸ್ ಸಂಘಟನೆ ಯನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆ ಮೂಡಿದೆ.

**ಅಭಿನಂದನೆ ಸಲ್ಲಿಕೆ**

ಚಾ.ನಗರ ಕಾಂಗ್ರೆಸ್ ನೂತನ ಜಿಲ್ಲಾಧ್ಯಕ್ಷರಾದ ಯರಿಯೂರು ಜೆ.ಯೋಗೇಶ್ ಅವರಿಗೆ ಅಭಿನಂದನೆಗಳು ಕಾಂಗ್ರೆಸ್ ಮುಖಂಡರು, ಹಿತೈಷಿಗಳು ಶುಭಾಶಯ ಕೋರಿದ್ದಾರೆ. ಜಿಲ್ಲಾ ಉಪ್ಪಾರ ಯುವಕರ ಸಂಘದ ಜಿಲ್ಲಾಧ್ಯಕ್ಷ ಎಂ.ಜಯಕುಮಾರ್ ಹಾಗೂ ಇತರರು ಅಭಿನಂದನೆ ಸಲ್ಲಿಸಿದ್ದಾರೆ.

ಮೊದಲ ಪುಟದಿಂದ

## ಎಂದಿಗೂ ಗ್ಯಾರಂಟಿಗಳು ನಿಲ್ಲಲ್ಲ

ಹೆಜ್ಜೆ ಹಾಕ್ತಿದೆ. ನಾಡಿನ ಜನರ ಶ್ರಮ, ಯವಕರ ಕನಸು ಕರ್ನಾಟಕದ ಪ್ರಗತಿ ಎಂದು ಹೇಳಿದರು.

ರಾಜ್ಯದ ಅಭಿವೃದ್ಧಿಗೆ ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು. ನಾವೆಲ್ಲರೂ ಒಟ್ಟಾಗಿ ನಾಡಿನ, ದೇಶದ ಹಿತಕ್ಕಾಗಿ ಸಂವಿಧಾನಬದ್ಧವಾಗಿ ಕೆಲಸ ಮಾಡ್ತೀವಿ. ರಾಗ, ದ್ವೇಷ ಇಲ್ಲದೆ ಎಲ್ಲರನ್ನೂ ಸಮಾನವಾಗಿ ನೋಡುತ್ತೇವೆ ಎಂದರು.

ಜನರ ಜೀವನಕ್ಕೆ ಗ್ಯಾರಂಟಿಗೆ 1,45,416 ಕೋಟಿ ಹಣ ಕೊಡಲಾಗಿದೆ. ಜಗತ್ತಿನ ಅತಿ ದೊಡ್ಡ ಯೋಜನೆ. ಗ್ಯಾರಂಟಿ ಮಾಡಲು ಆಗೊಲ್ಲ ಅಂದಿದ್ದರು. ನಾವು ಸಾಧನೆ ಮಾಡಿದ್ದೇವೆ. ಜನರಿಗೆ ಗ್ಯಾರಂಟಿ ಕೊಟ್ಟಿದ್ದೇವೆ. ಗೃಹಲಕ್ಷ್ಮಿಯಿಂದ 1.24 ಕೋಟಿ ಮಹಿಳೆಯರಿಗೆ ಹಣ ಸಿಕ್ಕಿದೆ. ಪ್ರತಿ ಮಹಿಳೆಗೆ 66 ಸಾವಿರ ಹಣ ಸಿಕ್ಕಿದೆ. ಗೃಹಜ್ಯೋತಿ ಸೌಲಭ್ಯವನ್ನು 1.67 ಕೋಟಿ ಜನರಿಗೆ ಕೊಡಲಾಗಿದೆ. 30,522 ಕೋಟಿ ರೂ. ಖರ್ಚು ಮಾಡಲಾಗಿದೆ. ಇದೊಂದು ಐತಿಹಾಸಿಕ ಕಾರ್ಯಕ್ರಮ ಎಂದು ಗ್ಯಾರಂಟಿ ಯೋಜನೆಗಳನ್ನು ಡಿ.ಕೆ.ಶಿವಕುಮಾರ್ ಬಣ್ಣಿಸಿದರು.

ಕ್ಯಾಬಿನೆಟ್‌ನಲ್ಲಿ ಶಕ್ತಿ ಯೋಜನೆಗೆ ಸ್ಮಾರ್ಟ್ ಕೊಡುವ ನಿರ್ಧಾರ ಮಾಡಲಾಗಿದೆ. 3.72 ಲಕ್ಷ ಯುವಕರಿಗೆ ಯುವನಿಧಿ ಯೋಜನೆ ಕೊಡಲಾಗಿದೆ. 1154 ಕೋಟಿ ಖರ್ಚು ಮಾಡಲಾಗಿದೆ. ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ. ಯಾವುದೇ ಗ್ಯಾರಂಟಿ ಯೋಜನೆ ನಿಲ್ಲಿಸಲು ಸಾಧ್ಯವಿಲ್ಲ. ಕಾಂಗ್ರೆಸ್ ಸರ್ಕಾರ ಬಂದಾಗ ರಾಷ್ಟ್ರಗೀತೆಯಿಂದ ಹಿಡಿದು ಅನೇಕ ಕೆಲಸ ಮಾಡಿದೆ. ಇದನ್ನ ಯಾರೂ ಬದಲಾವಣೆ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು. 25,652 ಕೋಟಿ ಶೂನ್ಯಬಡ್ಡಿಯಲ್ಲಿ ರೈತರಿಗೆ ಕೊಡಲಾಗಿದೆ. ನೀರಾವರಿ ಯೋಜನೆಗೆ 17 ಸಾವಿರ ಕೋಟಿ ನೀಡಲಾಗಿದೆ. 121 ಪ್ರಾಜೆಕ್ಟ್ ಮಾಡಲಾಗಿದೆ ಎಂದು ವಿವರಿಸಿದರು. ಗೃಹ ಆರೋಗ್ಯದಡಿ ಮನೆ ಮನೆಯಲ್ಲಿ 88 ಲಕ್ಷ ಮಂದಿ ತಪಾಸಣೆ ಆಗಿದೆ. ಹೃದಯ ಜ್ಯೋತಿ 21,658 ಸಾವಿರ ಕೇಸ್ ನೋಡಿದ್ದೇವೆ. 6 ದಿನ ಮಕ್ಕಳಿಗೆ ಮೊಟ್ಟೆ ಕೊಡಲಾಗ್ತಿದೆ. 2023 ರಿಂದ 2.53 ಲಕ್ಷ ಕೋಟಿ ಬಂಡವಾಳ ಹೂಡಿಕೆ ಬಂದಿದೆ. 6 ಲಕ್ಷ ಉದ್ಯೋಗ ಸೃಷ್ಟಿ ಆಗಲಿದೆ. ನಮ್ಮ ಸರ್ಕಾರ ಬಂದ ಮೇಲೆ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡಲಾಗಿದೆ ಎಂದು ಸಿಎಂ ತಿಳಿಸಿದರು.

## ರಾಜ್ಯದ ಅಭಿವೃದ್ಧಿಗೆ 9 ಸಂಕಲ್ಪ

- ಪುನಶ್ಚೇತನಕ್ಕೆ ಆದ್ಯತೆ.
- **ಹೂಡಿಕೆ ಮತ್ತು ಆರ್ಥಿಕ ಬಲ:** ಹೆಚ್ಚು ಹೂಡಿಕೆ ಮಾಡಿ, ಹೆಚ್ಚು ಗಳಿಸಿಸಲು ಕರೆ. ಜಾಗತಿಕ ಹೂಡಿಕೆ ಮತ್ತು ಅನಿವಾಸಿ ಭಾರತೀಯರ ವ್ಯವಹಾರಗಳ ಇಲಾಖೆಯನ್ನು ಸ್ಥಾಪಿಸಲಾಗಿದೆ. ಅನಿವಾಸಿ ಭಾರತೀಯರ ಜೊತೆಗೂಡಿ 3 ಲಕ್ಷ ಕೋಟಿ ರೂ. ಹೊಸ ಹೂಡಿಕೆಯ ಆಕರ್ಷಣೆ. ಆದಾಯ-ಉಳಿತಾಯದ ಕರ್ನಾಟಕದತ್ತ ಕಾರ್ಯನಿರ್ವಹಣೆಗೆ ಸಂಕಲ್ಪ.
- **ಬೆಂಗಳೂರಿನಲ್ಲಿ ಐದು ಹೊಸ ಲಾಲ್‌ಬಾಗ್‌ಗಳು ಮತ್ತು ಏಳು ಕೆರೆಗಳ ಪುನಶ್ಚೇತನ:** ಬೆಂಗಳೂರಿನಲ್ಲಿ ಲಾಲ್‌ಬಾಗ್‌ನಷ್ಟೇ ದೊಡ್ಡದಾದ 5 ಹೊಸ ಹಸಿರು ತಾಣಗಳ ನಿರ್ಮಾಣ. ಬೆಂಗಳೂರಿನ 7 ಕೆರೆಗಳಿಗೆ ಹೊಸ ಜೀವ ತುಂಬುವುದಕ್ಕೆ ಆದ್ಯತೆ.
- **ಪ್ರಾದೇಶಿಕ ಸಮತೋಲನ:** ಬೆಂಗಳೂರಿನ ಆಚೆಗೂ ಬೆಳವಣಿಗೆಗೆ ಚಾಲನೆ ನೀಡಲಿರುವ 5 ಹೊಸ ಪ್ರಮುಖ ನಗರಗಳ ಅಭಿವೃದ್ಧಿಗೆ ಆದ್ಯತ ನೀಡಲಾಗುವುದು. ಮೈಸೂರು, ಮಂಗಳೂರು, ಹುಬ್ಬಳ್ಳಿ, ಬೆಳಗಾವಿ, ಕಲಬುರ್ಗಿ ನಗರಗಳನ್ನು ಸಹ ಹೂಡಿಕೆ ಮತ್ತು ಉದ್ಯೋಗ ಸೃಷ್ಟಿ ತಾಣವಾಗಿ ಅಭಿವೃದ್ಧಿಪಡಿಸಲು ಸಂಕಲ್ಪ.
- **ಸಾಮಾಜಿಕ ನ್ಯಾಯ:** ನಿರಾಶ್ರಿತರಿಗೆ ಭೂಮಿ ನೀಡುವುದು ಮತ್ತು ರಾಜ್ಯದಲ್ಲಿ ವಸತಿ ಹೀನರಿಗೆ 5 ಲಕ್ಷ ನಿವೇಶನ ಹಂಚಿಕೆಗೆ ಆದ್ಯತೆ.
- **ಬಂಡವಾಳ ಹೂಡಿಕೆ:** ಕರ್ನಾಟಕದ ಬೆಳವಣಿಗೆಯನ್ನು ಬಲಪಡಿಸಲು, ವಿವಿಧ ವಲಯಗಳಲ್ಲಿ ಮೂಲಸೌಕರ್ಯ ಮತ್ತು ಇತರ ಚಟುವಟಿಕೆಗಳನ್ನು ಕೈಗೊಳ್ಳಲು ಮುಂದಿನ 500 ದಿನಗಳಲ್ಲಿ 1.5 ಲಕ್ಷ ಕೋಟಿ ರೂಪಾಯಿಗಳ ಬಂಡವಾಳ ಹೂಡಿಕೆ.
- **ಉದ್ಯೋಗಗಳು ಮತ್ತು ಡಿಜಿಟಲ್ ಆಡಳಿತ:** ರಾಜ್ಯಾದ್ಯಂತ ಒಂದು ಲಕ್ಷ ಸರ್ಕಾರಿ ನೇಮಕಾತಿಗಳು ಮತ್ತು 5 ಲಕ್ಷ ಖಾಸಗಿ ಉದ್ಯೋಗಗಳ ಸೃಷ್ಟಿ ಭೂ ದಾಖಲೆಗಳ ಸಂಪೂರ್ಣ ಡಿಜಿಟಲೀಕರಣಕ್ಕೆ ಸಂಕಲ್ಪ.

## ಹಿಂದೂ ಪರ ಸರ್ಕಾರ ಅಗತ್ಯ

ಅವರು ಹೇಳಿದರು. ರಾಜ್ಯ ಸರ್ಕಾರ ಎಸ್‌ಸಿಎಸ್‌ಪಿ-ಟಿಎಸ್‌ಪಿ ಯೋಜನೆಯ ಹಣವನ್ನ ದುರ್ಬಳಕೆ ಮಾಡಿಕೊಂಡಿದೆ ಎಂದು ವಿಜಯೇಂದ್ರ ಆರೋಪಿಸಿದರು. ಸುಮಾರು 45 ಸಾವಿರ ಕೋಟಿ ದಲಿತರ ಹಣವನ್ನ ಬೇರೆ ಬೇರೆ ದುರ್ಬಳಕೆ ಮಾಡಲಾಗಿದೆ ಎಂದು ದೂರಿದರು. ಕಳೆದ ಮೂರು ತಿಂಗಳಲ್ಲಿ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರು ಬಿಡದಿ ಟೌನ್‌ಶಿಪ್ ಮತ್ತು ವಿಮಾನ ನಿಲ್ದಾಣದ ವಿಚಾರಗಳ ಬಗ್ಗೆ ಹೆಚ್ಚು ಗಮನ ಹರಿಸಿದ್ದಾರೆ. ಆದರೆ ಬರ, ರೈತರ ಸಮಸ್ಯೆ, ಅಭಿವೃದ್ಧಿ ಹಾಗೂ ಸಾಲಮನ್ನಾ ಕುರಿತು ತಲೆಕೆಡಿಸಿಕೊಂಡಿಲ್ಲ. ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇಲ್ಲ ಎಂದು ವಾಗ್ದಾಳಿ ನಡೆಸಿದರು. ಯಡಿಯೂರಪ್ಪ ಅವರು ಹೋರಾಟದ ಹಿನ್ನೆಲೆಯಿಂದ ಬಂದು ರಾಜ್ಯಕ್ಕೆ ಹಲವು ಯೋಜನೆಗಳನ್ನ ನೀಡಿದ್ದಾರೆ. ಆದರೆ ಡಿ.ಕೆ.ಶಿವಕುಮಾರ್ ಹಾರಾಟದಿಂದ ಬಂದು ಅಭಿವೃದ್ಧಿ ಮಾಡದೆ ಎಲ್ಲ ಸಮುದಾಯಗಳಿಗೂ ಅನ್ಯಾಯ ಮಾಡುತ್ತಿದ್ದಾರೆ ಎಂದು ಆಕ್ರೋಶ ಹೊರಹಾಕಿದರು. ಬರ ಪರಿಸ್ಥಿತಿಯಲ್ಲಿ ಹಿಂದುಳಿದ ವರ್ಗಗಳ ನಿಗಮಗಳಿಗೆ ಕನಿಷ್ಠ 2,000 ಕೋಟಿ ಅನುದಾನ ನೀಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

## ನನ್ನ ಹಸ್ತ ಸದಾ ಮುಂದು...

ನಿರ್ಮಿಸುವುದೇ ನನ್ನ ಸಂಕಲ್ಪ ಎಂದು ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಹೇಳಿದ್ದಾರೆ. ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿ 100 ದಿನಗಳು ಪೂರ್ಣಗೊಂಡಿವೆ. ಈ ಹಿನ್ನೆಲೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಗುರುವಾರ ಪೋಸ್ಟ್ ಮಾಡಿರುವ ಅವರು, ಪ್ರಜಾಸೇವಕನಾಗಿ ನಿಮ್ಮ ಸೇವೆ ಮಾಡಲು ನನಗೆ ಅವಕಾಶ ದೊರೆತು ಇಂದಿಗೆ ನೂರು ದಿನಗಳು. ನಾಡಿನ ಪ್ರತಿಯೊಬ್ಬರ ಬದುಕಿನಲ್ಲಿ ಹೊಸ ಬದಲಾವಣೆ ತರಲು ನನಗೆ ಹೆಚ್ಚಿನ ಜವಾಬ್ದಾರಿ ನೀಡಿದ ದಿನಗಳು. ದೃಢ ಕರ್ನಾಟಕದ ಕನಸು ನನಸು ಮಾಡಲು ಈ ನೂರು ದಿನಗಳಲ್ಲಿ ಹಲವು ಮಹತ್ವದ ಯೋಜನೆಗಳನ್ನು ಘೋಷಿಸಿದ್ದೇವೆ ಎಂದಿದ್ದಾರೆ. ಕರುನಾಡಿನ ಜನತೆಯ ಋಣ ತೀರಿಸಲು, ನಿಮ್ಮ ಜೀವನ ಮಟ್ಟವನ್ನು ಸುಧಾರಿಸಲು, ನಿಮ್ಮ ಮನೆಯ ಮಗನಾಗಿ ಸದಾ ನಿಮ್ಮ ಸೇವೆಗೆ ಸಿದ್ಧನಿದ್ದೇನೆ ಎಂದಿದ್ದಾರೆ.

# ದೇಗುಲದಲ್ಲಿ ಗರುಡಗಂಬ ಸ್ಥಾಪನೆ

## 30 ಅಡಿ ಎತ್ತರದ ಗರುಡಗಂಬ ಪ್ರತಿಷ್ಠಾಪನೆ ಹಾಗೂ ಭಕ್ತರ ಭಾಗಿ

## ಧಾರ್ಮಿಕ ಪ್ರವಾಸೋದ್ಯಮ ಕ್ಷೇತ್ರ ಘೋಷಣೆಗೆ ಸರ್ಕಾರಕ್ಕೆ ಮನವಿ: ಎಂ.ಎನ್.ನಟರಾಜ್

ಹೆಚ್.ಡಿ.ಕೋಟೆ: ತಾಲೂಕಿನ ಮಗ್ಗೆ ಗ್ರಾಮದ ಇತಿಹಾಸ ಪ್ರಸಿದ್ಧ ಶ್ರೀ ಬಾಣೇಶ್ವರ ದೇವಾಲಯದ ಮುಂಭಾಗ ಗರುಡಗಂಬ ಸ್ಥಾಪನಾ ಕಾರ್ಯ ಬುಧವಾರ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಶ್ರದ್ಧಾಭಕ್ತಿಯಿಂದ ನೆರವೇರಿತು.

ದೇವಾಲಯದ ಮುಂಭಾಗ ಅರ್ಚಕರು ಹಾಗೂ ಆಗಮಿಕರ ನೇತೃತ್ವದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಬೆಳಗ್ಗೆ 11.04 ರಿಂದ 12.04 ಗಂಟೆಯೊಳಗಿನ ವೃಶ್ಚಿಕ ಶುಭ ಲಗ್ನದಲ್ಲಿ ಪೂಜಾ ವಿಧಿ ವಿಧಾನಗಳೊಂದಿಗೆ ಸುಮಾರು 7 ಲಕ್ಷ ರೂ. ಅಂದಾಜಿನ 30 ಅಡಿ ಎತ್ತರದ ಗರುಡಗಂಬವನ್ನು ಪ್ರತಿಷ್ಠಾಪಿಸಲಾಯಿತು.

ಈ ಸಂದರ್ಭದಲ್ಲಿ ಮಗ್ಗೆ, ಕೆ.ಆರ್.ಪುರ, ಅಂತರಸಂತೆ, ನಿಸನ ಬೆಳತೂರು, ಮಳಲಿ, ಕೃಷ್ಣಾಪುರ, ಪೆಂಜಳ್ಳಿ, ನೂರಲಕುಪ್ಪೆ, ಸತ್ತಿಗೆಹುಂಡಿ ಸೇರಿದಂತೆ ಹತ್ತಾರು ಗ್ರಾಮಗಳಿಂದ 1 ಸಾವಿರಕ್ಕೂ ಹೆಚ್ಚು ಭಕ್ತರು ಆಗಮಿಸಿ ಗರುಡಗಂಬ ಸ್ಥಾಪನಾ ಕಾರ್ಯಕ್ಕೆ ಸಾಕ್ಷಿಯಾದರು. ಈ ವೇಳೆ ದೇವಸ್ಥಾನ ಸಮಿತಿ ವತಿಯಿಂದ ಭಕ್ತರಿಗೆ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.



### ಶ್ರೀ ಬಾಣೇಶ್ವರಸ್ವಾಮಿ ದೇವಸ್ಥಾನದ ಇತಿಹಾಸ

**ಸುಮಾರು 500ರಿಂದ 700 ವರ್ಷಗಳ ಇತಿಹಾಸ ಹೊಂದಿರುವ ಶ್ರೀ ಬಾಣೇಶ್ವರಸ್ವಾಮಿ ದೇವಸ್ಥಾನವು ಕಬಿನಿ ಅಣೆಕಟ್ಟು ನಿರ್ಮಾಣಕ್ಕೂ ಮುನ್ನ ಮಗ್ಗೆ ಸಮೀಪದ ಎರೆಕುರಹುಂಡಿ ಗ್ರಾಮದಲ್ಲಿತ್ತು. 1972-73 ರಲ್ಲಿ 33 ಹಳ್ಳಿಗಳು ಕಬಿನಿ ಹಿನ್ನೀರಿಗೆ ಮುಳುಗಡೆಯಾದ ಬಳಿಕ 1973-74 ರಲ್ಲಿ ಅಲ್ಲಿದ್ದ ದೇವರ ಕಲ್ಲಿನ ವಿಗ್ರಹವನ್ನು ಮಗ್ಗೆ ಗ್ರಾಮಕ್ಕೆ ತಂದು ಕೂರಿಸಲಾಯಿತು. 2006ರಲ್ಲಿ ಹಿರಿಯರಾದ ನಂದಕುಮಾರ್, ಡಿ. ಸುಂದರದಾಸ್ ಮತ್ತಿತರರ ನೆರವಿನಿಂದ ದೇವಸ್ಥಾನ ನಿರ್ಮಾಣಕ್ಕೆ ಅಡಿಗಲ್ಲು ಹಾಕಲಾಯಿತು. ತದನಂತರ 2011ರಲ್ಲಿ ದಾನಿಗಳು ಹಾಗೂ ವಿವಿಧ ಗ್ರಾಮಸ್ಥರ ನೆರವಿನಿಂದ ನೂತನ ದೇವಸ್ಥಾನವನ್ನು ಉದ್ಘಾಟನೆ ಮಾಡಲಾಯಿತು ಎಂದು ಅವರು ದೇಗುಲದ ಇತಿಹಾಸವನ್ನು ವಿವರಿಸಿದರು.**

ಈ ಸಂದರ್ಭದಲ್ಲಿ ದೇಗುಲ ಸಮಿತಿ ಮಾಜಿ ಅಧ್ಯಕ್ಷರಾದ ಡಿ. ಸುಂದರದಾಸ್, ದೇವಾಲಯ ಸಮಿತಿ ಕಾರ್ಯಾಧ್ಯಕ್ಷ ವೈ.ಪಿ. ನಾಗರಾಜ್, ಉಪಾಧ್ಯಕ್ಷರಾದ ವಿನೋದ್ ಕುಮಾರ್ ರಾಗಲಕುಪ್ಪೆ, ಎ.ಎನ್. ಸುಬ್ರಹ್ಮಣ್ಯ, ಎಂ.ವಿ. ನಂದಕುಮಾರ್, ಕಾರ್ಯದರ್ಶಿ ಸುಬ್ರಹ್ಮಣ್ಯ, ಶ್ಯಾಮ್ ಸುಂದರ್, ರತ್ನಯ್ಯ, ಎಂ.ಆರ್. ನಂದೀಶ್, ಹಿರಿಯರಾದ ಬಿ.ಸಿ. ಬಸಪ್ಪ, ಚಿಕ್ಕತಮ್ಮೇಗೌಡ, ಎ.ವಿ. ರಾಜಪ್ಪ, ಎಂ.ಎ. ಜಗದೀಶ್, ಕೆ.ಎನ್. ಮಲ್ಲಿಕಾರ್ಜುನ್, ಎ.ಪಿ. ಕೃಷ್ಣ, ಸರಗೂರು ಬಸವಣ್ಣ, ಕೆ. ಸುಬ್ಬೇಗೌಡ, ರಾಮರಾಜ್ ನಂಜನಗೂಡು, ಕೆ. ಮಹೇಶ್, ಹೆಗ್ಗುಡಿಲು ಮಹದೇವ್, ಎಂ.ಬಿ.ಎನ್. ಮೂರ್ತಿ, ನೀಲಕಂಠ, ಡಿ. ನಾಗೇಶ್, ಆರ್.ಆರ್. ಕುಮಾರ್, ಎಚ್.ಟಿ. ರಾಮು, ಸುರೇಶ್, ಎಚ್.ಪಿ. ನಂಜಪ್ಪ, ನಾಗೇಂದ್ರ, ದಿನೇಶ್, ಗೋಪಯ್ಯ, ನಾಗರಾಜನಾಯ್ಕ, ಸೋಮೇಶ್, ಚಲುವರಾಜು, ದೇವರಾಜು, ಗೋವಿಂದ ನಾಯ್ಕ, ಸಾಮ್ರಾಟ್ ಅಶೋಕ್, ಎಂ. ಜಯಣ್ಣ, ಸುರೇಂದ್ರ ಹಾಗೂ ಕಾರ್ಯಕಾರಿ ಸಮಿತಿಯ ಎಲ್ಲಾ ಸದಸ್ಯರು ಹಾಜರಿದ್ದರು.

### ಧಾರ್ಮಿಕ ಪ್ರವಾಸೋದ್ಯಮ ಕ್ಷೇತ್ರವಾಗಿ ಘೋಷಿಸಲು ಒತ್ತಾಯ

**ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಅಧ್ಯಕ್ಷರಾದ ಎಂ.ಎನ್. ನಟರಾಜ್ ಅವರು ಮಾತನಾಡಿ, ಕಬಿನಿ ಹಿನ್ನೀರಿನಲ್ಲಿರುವ ಮಗ್ಗೆ ಗ್ರಾಮದ ಶ್ರೀ ಬಾಣೇಶ್ವರಸ್ವಾಮಿ ದೇವಸ್ಥಾನ, ಭೀಮನಕೊಲ್ಲಿಯ ಶ್ರೀ ಮಹದೇಶ್ವರ ಸ್ವಾಮಿ ದೇವಸ್ಥಾನ ಹಾಗೂ ಕಿತ್ತೂರು ಗ್ರಾಮದ ಶ್ರೀ ರವಿರಾಮೇಶ್ವರ ದೇವಸ್ಥಾನಗಳು ಇತಿಹಾಸ ಪ್ರಸಿದ್ಧವಾಗಿದ್ದು, ಅವುಗಳನ್ನು ದರ್ಶನ ಮಾಡುವ ನಿಟ್ಟಿನಲ್ಲಿ ಧಾರ್ಮಿಕ ಪ್ರವಾಸೋದ್ಯಮ ಕ್ಷೇತ್ರವಾಗಿ ಘೋಷಣೆ ಮಾಡಲು ಸರ್ಕಾರದ ಮಟ್ಟದಲ್ಲಿ ಪ್ರಯತ್ನ ನಡೆಸಲಾಗಿದೆ ಎಂದರು. ಈಗಾಗಲೇ ಈ ಸಂಬಂಧ ಮುಖ್ಯಮಂತ್ರಿಗಳು ಹಾಗೂ ಮುಖ್ಯ ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಲಾಗಿದೆ. ಭಕ್ತರು ಬೋಟ್ ಮುಖಾಂತರ ಮೂರು ದೇವಸ್ಥಾನಗಳನ್ನು ಕಬಿನಿ ಹಿನ್ನೀರಿನ ಮೂಲಕ ಒಂದರ ನಂತರ ಮತ್ತೊಂದನ್ನು ವೀಕ್ಷಿಸಲು ಅನುಕೂಲವಾಗುವಂತೆ ಧಾರ್ಮಿಕ ಪ್ರವಾಸೋದ್ಯಮ ಕ್ಷೇತ್ರವಾಗಿ ಘೋಷಣೆ ಮಾಡುವಂತೆ ಕೋರಲಾಗಿದೆ ಎಂದು ತಿಳಿಸಿದರು.**

"ಶ್ರೀ ಬಾಣೇಶ್ವರಸ್ವಾಮಿ ದೇವಸ್ಥಾನ ವನ್ನು ಮಗ್ಗೆಯಲ್ಲಿ ಪುನರ್ ನಿರ್ಮಾಣ ಮಾಡಿದ ನಂತರ ಇದೀಗ ಭಕ್ತರ ನೆರವಿನಲ್ಲಿ ಗರುಡಗಂಬ ಸ್ಥಾಪಿಸಲಾಗಿದೆ. ದೇವಸ್ಥಾನದ ಸುತ್ತ ಕಾಂಪೌಂಡ್ ನಿರ್ಮಾಣ, ಗ್ರಾಮದ ಮುಖ್ಯ ರಸ್ತೆಯಲ್ಲಿ ಸ್ವಾಗತ ಕಮಾನು ನಿರ್ಮಾಣ ಮಾಡುವುದು ಸೇರಿದಂತೆ ಇನ್ನೂ ಹಲವು ಅಭಿವೃದ್ಧಿ ಕಾರ್ಯಗಳನ್ನು ಭಕ್ತರ ನೆರವಿನಿಂದ ಬರುವ ದಿನಗಳಲ್ಲಿ ನೆರವೇರಿಸಲಾಗುವುದು."

**ಎಂ.ಎನ್. ನಟರಾಜ್**
ಅಧ್ಯಕ್ಷರು, ಶ್ರೀ ಬಾಣೇಶ್ವರಸ್ವಾಮಿ ದೇವಸ್ಥಾನ ಸೇವಾ ಸಮಿತಿ, ಮಗ್ಗೆ.

ಮೊದಲ ಪುಟದಿಂದ

## ಅನುದಾನಕ್ಕೆ ಸುಪ್ರೀಂಗೆ ಮೊರೆ

ಕುಡಿಯುವ ನೀರಿನ ಸಮಸ್ಯೆ ಇದೆ. 149 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆ. 561 ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆಗೆ ಪಡೆಯಲಾಗಿದೆ. ಬಿತ್ತನೆ ಮಾಡಿದ ಬೀಜ ಮೊಳಕೆ ಒಡೆಯದೆ ರೈತರು ಕಂಗಾಲಾಗಿರುವ ಪರಿಸ್ಥಿತಿಯಲ್ಲಿ ಕೇಂದ್ರ ಸರ್ಕಾರ ಈ ರೀತಿ ಅನ್ಯಾಯ ಮಾಡಿರುವುದುನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸುವ ಕಾನೂನು ಅಂಶಗಳ ಬಗ್ಗೆ ಚರ್ಚಿಸಿದರು.

## ರವಿಗೆ ಒಲಿದ ಅಧ್ಯಕ್ಷಗಿರಿ

ಎಂಎಲ್‌ಸಿ ರವಿ ಅವರನ್ನು ಅಧ್ಯಕ್ಷರನ್ನಾಗಿ ಹಾಗೂ ಶರಣಗೌಡ ಬಯ್ಯಾಪುರ ಉಪಾಧ್ಯಕ್ಷರಾಗಿ ಅವಿರೋಧ ಆಯ್ಕೆ ಮಾಡಲಾಗಿದೆ. ಮುಂದಿನ ಎರಡೂವರೆ ವರ್ಷಗಳ ಅಧಿಕಾರಾವಧಿ ಕುರಿತು ಆ ನಂತರವೇ ತೀರ್ಮಾನಿಸಲಾ ಗುವುದು ಎಂದು ತಿಳಿಸಿದರು.

## ರಾಜಣ್ಣಗೆ ತಪ್ಪಿದ ಅಧ್ಯಕ್ಷ ಸ್ಥಾನ

ಹುದ್ದೆಗಳಿಂದ ದೂರವಿಡಲಾಗುತ್ತಿದೆ ಎಂಬ ಚರ್ಚೆ ರಾಜಕೀಯ ವಲಯದಲ್ಲಿ ಜೋರಾಗಿದೆ. ಡಿಕೆಶಿ ಕಾರ್ಯವೈಖರಿಯನ್ನು ಬಹಿರಂಗವಾಗಿ ಪ್ರಶ್ನಿಸುತ್ತಿದ್ದ ಮಾಜಿ ಸಚಿವರಾದ ಡಾ.ಎಚ್.ಸಿ. ಮಹದೇವಪ್ಪ ಹಾಗೂ ಕೆ.ಎನ್. ರಾಜಣ್ಣ ಇಬ್ಬರೂ ಅಧಿಕಾರದಿಂದ ದೂರ ಉಳಿಯುವಂತಾಗಿದೆ ಎನ್ನಲಾಗಿದೆ.

# ನೀರು ಬಿಡುಗಡೆಗೆ ಆದೇಶ ಖಂಡಿಸಿ ಪ್ರತಿಭಟನೆ

**ಮೈಸೂರು:** ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಿ ಮತ್ತೆ ತಮಿಳುನಾಡಿಗೆ ನೀರು ಹರಿಸುವಂತೆ ಆದೇಶಿಸಿರುವುದನ್ನು ಖಂಡಿಸಿ ನಗರದಲ್ಲಿ ಎರಡು ಪ್ರತಿಭಟನೆಗಳು ನಡೆದವು.

ಖಾಲಿ ಮಡಿಕೆ ಪ್ರದರ್ಶಿಸಿದ ನಗರದ ಕೃಷ್ಣರಾಜ, ಚಾಮರಾಜ ಹಾಗೂ ನರಸಿಂಹರಾಜ ಯುವಕಾಂಗ್ರೆಸ್ ಸಮಿತಿ ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕೃಷ್ಣರಾಜ ಕ್ಷೇತ್ರದ ಯುವಕಾಂಗ್ರೆಸ್ ಅಧ್ಯಕ್ಷ ಹೊಯ್ಸಳ ಮಾತನಾಡಿ, ಕೆ.ಆರ್.ಎಸ್ ನಲ್ಲಿ ಕುಡಿಯುವುದಕ್ಕೆ ನೀರಿಲ್ಲ. ಹೀಗಿರುವಾಗ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀರು ಬಿಡಿ ಎಂದು ಆದೇಶಿಸಿರುವುದು ಸರಿಯಲ್ಲ. ಈ ಬಗ್ಗೆ ಪ್ರಶ್ನಿಸುವ ರಾಜ್ಯದ ಸಂಸದರು ಮೌನವಾಗಿದ್ದು, ಪಾದಯಾತ್ರೆ ನಡೆಸುತ್ತಿದ್ದಾರೆ. ರಾಜ್ಯದ ವಿಷಯಗಳಿಗೆ ಬಿಜೆಪಿ ಪಾದಯಾತ್ರೆ ಮಾಡುವ ಬದಲಿಗೆ ಕೇಂದ್ರದ ಕುಡಿಯುವ ನೀರಿಗೆ ಪಾದಯಾತ್ರೆ ನಡೆಸಿ ಎಂದು ಸಂಸದರು ಹಾಗೂ ಕೇಂದ್ರದ




ನಡೆಯನ್ನು ಖಂಡಿಸಿದರು.

ಮತ್ತೊಂದೆಡೆ ಕನ್ನಡ ಚಳವಳಿ ಕ್ರಿಯಾಸಮಿತಿ ಶಿವಶಂಕರ್ ನೇತೃತ್ವದಲ್ಲಿ ಕಲ್ಲು ಚಪ್ಪಡಿಯನ್ನು ತಲೆಯ ಮೇಲೆ ಹೊತ್ತು ಕಾವೇರಿ ನೀರು ನಿರ್ವಹಣಾ ಮಂಡಳಿ ನಡೆ ರಾಜ್ಯದ ಜನರ ಮೇಲೆ ಕಲ್ಲು ಚಪ್ಪಡಿ ಎಳೆಯುವ ಆದೇಶ ಹೊರಡಿಸಿದೆ. ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ನೀರು ಹರಿಸಬಾರದು ಎಂದು ಆಕ್ರೋಶ ಹೊರಹಾಕಿದರು.

## 15ರಿಂದ 20ಮಕ್ಕಳಿಗೆ ವಾಂತಿ ಬೇದಿ

# ದೇಸಾಯ ವಸತಿ ಶಾಲೆಯ ವಿದ್ಯಾರ್ಥಿಗಳು ಆರೋಗ್ಯ

ಕೆ.ಆರ್.ಪೇಟೆ: ತಾಲ್ಲೂಕಿನ ಸಾರಂಗಿ ಗ್ರಾಮದ ಬಳಿ ಇರುವ ಮೊರಾರ್ಜಿ ದೇಸಾಯ ವಸತಿ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಆರೋಗ್ಯವಾಗಿದ್ದಾರೆ.

ನೆನ್ನೆ 15ರಿಂದ 20ಮಕ್ಕಳಿಗೆ ವಾಂತಿ ಬೇದಿ ಉಂಟಾಗಿತ್ತು. ಕ್ಷೇತ್ರದ ಶಾಸಕರಾದ ಹೆಚ್.ಟಿ. ಮಂಜು ಶಾಲೆಗೆ ತಡರಾತ್ರಿಯೇ ಭೇಟಿ ನೀಡಿ .ಮಕ್ಕಳ ಆರೋಗ್ಯ ವಿಚಾರಿಸಿ ಧೈರ್ಯ ತುಂಬಿದ್ದರು.

ವಿಷಯ ತಿಳಿದ ತಕ್ಷಣವೇ ಬುಧವಾರ ರಾತ್ರಿಯೇ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಬೆಟ್ಟಸ್ವಾಮಿ, ತಹಸೀಲ್ದಾರ್ ವಿ.ಶ್ರೇಯಸ್, ತಾಲ್ಲೂಕು ಪಂಚಾಯತ್ ಇಓ ಕೆ.ಸುಷ್ಮ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಅಜಿತ್, ಜಿಲ್ಲಾ ಪಂಚಾಯತ್ ಕುಡಿಯುವ ನೀರು ವಿಭಾಗದ ಇಂಜಿನಿಯರ್ ಬಿಂದು, ಪ್ರವೀಣ್, ಸಾರಂಗಿ ಗ್ರಾಮ ಪಂಚಾಯತ್ ಪಿಡಿಓ ವಿನೋದ್, ತಾಲ್ಲೂಕು ಬಿಸಿಎಂ ಅಧಿಕಾರಿ ಎಂ.ಎನ್.ವೆಂಕಟೇಶ್, ಸಮಾಜ ಕಲ್ಯಾಣಾಧಿಕಾರಿ ಡಾ.ದಿವಾಕರ್, ಸಾರಂಗಿ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಸನ್ನತಿ ಮತ್ತಿತರರು ಸ್ಥಳದಲ್ಲೇ ಮೊಕ್ಕಾಂ ಹೂಡಿದ್ದು ಮಕ್ಕಳ ಆರೋಗ್ಯದ ಬಗ್ಗೆ ಹೆಚ್ಚಿನ ನಿಗಾ ವಹಿಸಿದ್ದಾರೆ.



ಜಿಲ್ಲಾ ಆರೋಗ್ಯಾಧಿಕಾರಿ ಡಾ.ಬೆಟ್ಟಸ್ವಾಮಿ ಮಾತನಾಡಿ ನೆನ್ನೆ ಏಳೆಂಟು ಮಕ್ಕಳಿಗೆ ವಾಂತಿ ಜೊತೆಗೆ ಬೇದಿ ಉಂಟಾಗಿತ್ತು. 10ರಿಂದ 12ಮಕ್ಕಳಿಗೆ ವಾಂತಿ ಮತ್ತು ತಲೆ ಸುತ್ತು ಉಂಟಾಗಿತ್ತು. ಕೂಡಲೇ ಎಲ್ಲರಿಗೂ ಸಾರಂಗಿ ಮತ್ತು ಕೆ.ಆರ್.ಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಕೊಡಿಸಿ ವಾಪಸ್ ವಸತಿ ಶಾಲೆಗೆ ಕರೆದುಕೊಂಡು ಬರಲಾಗಿದೆ ಎಲ್ಲಾ ವಿದ್ಯಾರ್ಥಿಗಳು ಆರೋಗ್ಯವಾಗಿದ್ದಾರೆ.

ಹಾಗಾಗಿ ವಿದ್ಯಾರ್ಥಿಗಳ ಪೋಷಕರು ಆತಂಕಪಡುವ ಅಗತ್ಯವಿಲ್ಲ .ಮಕ್ಕಳು ಗುಣಮುಖರಾಗಿದ್ದು ಶಾಲಾ ತರಗತಿಯಲ್ಲಿ ಪಾಠ ಪ್ರವಚನ ಕೇಳುತ್ತಿದ್ದಾರೆ. ಆದರೂ ಆರೋಗ್ಯ ಇಲಾಖೆ ಹಾಗೂ ತಾಲ್ಲೂಕು ಆಡಳಿತದ ವತಿಯಿಂದ .ಮಕ್ಕಳ ಆರೋಗ್ಯದ ಬಗ್ಗೆ ನಿಗಾವಹಿಸಲಾಗಿದೆ.ಆಹಾರ ಮತ್ತು ನೀರಿನ ಸ್ಯಾಂಪಲ್ ಅನ್ನು ಪರೀಕ್ಷೆಗಾಗಿ ಲ್ಯಾಬ್ ಗೆ ಕಳುಹಿಸಲಾಗಿದೆ. ವರದಿ ಬಂದ ನಂತರ ಘಟನೆಗೆ ನಿಖರವಾದ ಕಾರಣ ಗೊತ್ತಾಗಲಿದೆ. ಮೇಲ್ತೊಟ್ಟಿಕ್ಕೆ ಕುಡಿಯುವ ನೀರಿಗೆ ಬ್ಲೀಚಿಂಗ್ ಪೌಡರ್ ಹಾಕಿ ತೊಳೆಯಲಾಗಿತ್ತು. ಈ ಹಿನ್ನೆಲೆಯಲ್ಲಿ ಕುದಿಸಿದ ಬಿಸಿ ನೀರನ್ನು ಕುಡಿಯುವಂತೆ ಮಕ್ಕಳಿಗೆ ತಿಳುವಳಿಕೆ ನೀಡಲಾಗಿತ್ತು. ಆದರೆ ತಣ್ಣೀರು ಸೇವನೆ ಮಾಡಿದ ವಿದ್ಯಾರ್ಥಿಗಳಿಗೆ ವಾಂತಿ, ಬೇದಿ ಕಾಣಿಸಿಕೊಂಡಿರುವುದು ಕಂಡು ಬಂದಿದೆ. ಈಗ ಎಲ್ಲಾ ಮಕ್ಕಳು ಆರೋಗ್ಯದಿಂದ ಇದ್ದಾರೆ ಎಂದು ಡಾ.ಬೆಟ್ಟಸ್ವಾಮಿ ಘಟನೆಯ ಸಂಬಂಧ ಸ್ಪಷ್ಟನೆ ನೀಡಿದರು.

# ರೇಷ್ಮೆ ಸಹಕಾರ ಸಂಘಕ್ಕೆ ಸಲಾವುದ್ದಿನ್ ನೂತನ ಅಧ್ಯಕ್ಷ

▶▶ ಉಪಾಧ್ಯಕ್ಷರಾಗಿ ವಿ.ಶ್ರೀನಿವಾಸ್ ಆಯ್ಕೆ



**ರಾಮನಗರ:** ಇತ್ತೀಚೆಗಷ್ಟೇ ರೇಷ್ಮೆನೂಲು ಬಿಚ್ಚುವವರ ಮತ್ತು ನೇಕಾರರ ಕೈಗಾರಿಕಾ ಸಹಕಾರ ಸಂಘಕ್ಕೆ ನಿರ್ದೇಶಕರ ಸ್ಥಾನಗಳಿಗೆ ಚುನಾವಣೆ ನಡೆದಿತ್ತು. ಇದೀಗ ಸಂಘದ ಪದಾಧಿಕಾರಿಗಳು ಸಹ ಆಯ್ಕೆಯಾಗಿದ್ದು, ಅಧ್ಯಕ್ಷರಾಗಿ ಮಹ ಮದ್ ಸಲಾವುದ್ದೀನ್ ಮತ್ತು ಉಪಾಧ್ಯಕ್ಷರಾಗಿ ವಿ.ಶ್ರೀನಿವಾಸ್ ಆಯ್ಕೆಯಾಗಿದ್ದಾರೆ.

ಅಧ್ಯಕ್ಷ ಸ್ಥಾನಕ್ಕೆ ಮಹಮದ್ ಸಲಾವುದ್ದೀನ್ ಮತ್ತು ಯಾಸಿನ್ ಪಾಷ ಸ್ಪರ್ಧಿಸಿದ್ದರು. ಮಹಮದ್ ಸಲಾವುದ್ದೀನ್ 7 ಮತಗಳು ಮತ್ತು ಯಾಸಿನ್ ಪಾಷ 3 ಮತಗಳನ್ನು ಪಡೆದುಕೊಂಡರು. ಅತಿ ಹೆಚ್ಚು ಮತಗಳನ್ನು ಪಡೆದ ಸಲಾವುದ್ದೀನ್ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗಿದ್ದಾರೆ. ಉಪಾಧ್ಯಕ್ಷ ಸ್ಥಾನಕ್ಕೆ ಶ್ರೀನಿವಾಸ್.ವಿ ಏಕೈಕ ಸ್ಪರ್ಧಿಯಾಗಿದ್ದರಿಂದ ಅವರ ಆಯ್ಕೆ ಅವಿರೋಧವಾಗಿತ್ತು.

ಚುನಾವಣಾಧಿಕಾರಿಯಾಗಿ ಸಹಕಾರ ಇಲಾಖೆಯ ಪುರುಷೋತ್ತಮ ಕರ್ತವ್ಯ ನಿರ್ವಹಿಸಿ ಫಲಿತಾಂಶ ಘೋಷಿಸಿದರು.

### ರೀಲರ್‌ಗಳ ಕುಟುಂಬದ ಬಗ್ಗೆಯೂ ಕಾಳಜಿ ಇರಲಿ–ಪರ್ವಿಜ್ ಪಾಷ

ಸೊಸೈಟಿ ಮಾಜಿ ಅಧ್ಯಕ್ಷ ಪರ್ವಿಜ್ ಪಾಷ ಮಾತನಾಡಿರೇಷ್ಮೆ ವಹಿವಾಟುನಲ್ಲಿ ವ್ಯತ್ಯಾಸಗಳು ಬರುತ್ತದೆ. ರೀಲರ್ಸ್ ಗಳಿಗೆ ವ್ಯಾಪಾರ ಮಾಡಲು ನೆರವು, ಆರೋಗ್ಯ ಸಂಜೀವಿನಿ ಕಾರ್ಡ್ ಹಾಗೂ ಮಕ್ಕಳ ಶೈಕ್ಷಣಿಕ ವ್ಯವಸ್ಥೆಗೆ ಪೂರಕ ಯೋಜನೆ ರೂಪಿಸಲಾಗುವುದು. ಜಿಲ್ಲಾ ಕೇಂದ್ರದಲ್ಲಿ ಎಲ್ಲ ಕಚೇರಿಗಳಿದ್ದು, ರೇಷ್ಮೆ ಮಾರುಕಟ್ಟೆ ಮಾತ್ರ ಚನ್ನಪಟ್ಟಣದಲ್ಲಿ ಯಾಕೆ ನಿರ್ಮಿಸಿದರೋ ತಿಳಿದಿಲ್ಲ. ಈ ವಿಷಯವಾಗಿ ಮುಂದಿನ ದಿನಗಳಲ್ಲಿ ರೀಲರ್ಸ್ ಗಳು ಸೇರಿ ತೀರ್ಮಾನ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ಸಂಘದ 10 ನಿರ್ದೇಶಕರಾದ ಯಾಸೀನ್ ಪಾಷ, ಮೊಹಮದ್ ಸಲಾವುದೀನ್, ನಯ್ಯಾಜ್‌ಉಲ್ಲಾಖಾನ್, ಪೈರೋಜ್‌ಖಾನ್ , ಮಹಮದ್ ಷಫೀ ಅಹಮದ್, ನಾಸಿರ್ವುದ್ದೀನ್, ಶ್ರೀನಿವಾಸ್, ಅಸ್ಮದ್, ನೂರ್ ಸಾದಿಕ್ ಮತ್ತು ಆಯಿಷಾಖಾನಂ ಭಾಗವಹಿಸಿದ್ದರು.

### ರೀಲರ್‌ಗಳ ವಿಶ್ವಾಸಕ್ಕೆ ಮೊದಲ ಆದ್ಯತೆ–ಸಲಾವುದ್ದೀನ್

ಚುನಾವಣೆ ನಂತರ ಮಾತನಾಡಿದ ನೂತನ ಅಧ್ಯಕ್ಷ ಮಹಮದ್ ಸಲಾವುದ್ದೀನ್, ತಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸಿ ಚುನಾವಣೆಯಲ್ಲಿ ನನ್ನನ್ನುಅಧ್ಯಕ್ಷರಾಗಿಆಯ್ಕೆ ಮಾಡಿದಎಲ್ಲರಿಗೂ ಅಭಿನಂದಿಸುತ್ತೇನೆ. ಪರ್ವಿಜ್‌ಅವರು ನಮಗೆ ಸೇವೆ ಮಾಡಲು ಒಳ್ಳೆಯ ನಿರ್ದೇಶಕರ ತಂಡ ಕಟ್ಟಿಕೊಟ್ಟಿದ್ದಾರೆ. ಎಲ್ಲರ ಸಹಕಾರದಲ್ಲಿ ಮಾದರಿ ಸೊಸೈಟಿ ಮಾಡಲಾಗುವುದು. ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ 10 ಲಕ್ಷ ಅನುದಾನ ಸಹ ನೀಡಿದ್ದಾರೆ. ರೀಲರ್ಸ್ ಗಳಿಗೆ ನಮ್ಮ ಸೊಸೈಟಿ ವತಿಯಿಂದ ಸವಲತ್ತು ಕೊಡುವ ಜೊತೆಗೆ ಉತ್ತಮ ವಹಿವಾಟು ನಡೆಸಲು ಎಲ್ಲ ನೆರವು ನೀಡಲಾಗುವುದು. ಜೊತೆಗೆ ಪ್ರತಿಭಾನ್ವಿತ ಮಕ್ಕಳಿಗೆ ಪುರಸ್ಕಾರ ಸಹ ನೀಡಲಾಗುವುದು ಎಂದರು.

# ಶಿಕ್ಷಣದ ಮೂಲಕ ಜ್ಞಾನ ಗಳಿಸಿ ಕಂದಾಚಾರ ದೂರ ಆಗುತ್ತವೆ–ಹುಲಸಗುಂದಿ ಮಹದೇವಯ್ಯ




**ಗುಂಡ್ಲುಪೇಟೆ:** ಶಿಕ್ಷಣದ ಮೂಲಕ ಜ್ಞಾನ ಪಡೆದು ಕಂದಾಚಾರ ದೂರ ಆಗುತ್ತವೆ ಎಂದು ನಿವೃತ್ತ ಉಪನ್ಯಾಸಕರಾದ ಮಹದೇವಯ್ಯ ಹುಲಸ ಗುಂದಿ ತಿಳಿಸಿದರು.

ಅವರು ಅಂತರರಾಷ್ಟ್ರೀಯ ಬೌದ್ಧ ಸಮ್ಮೇಳನದ ಅಂಗವಾಗಿ ಹೊನ್ನೆಗೌಡನಹಳ್ಳಿ ಗ್ರಾಮದಲ್ಲಿ ಧಮ್ಮ ಪಯಣ ಜಾಥಾ ಕಾರ್ಯ ಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕಂದಾಚಾರಗಳನ್ನು ಬಿಡದೆ ಶಾಂತಿ ನೆಮ್ಮದಿ ಸಾಧ್ಯವಿಲ್ಲ. ನಮಗೆ ಬಾಬಾ ಸಾಹೇಬ್ ಡಾ ಅಂಬೇಡ್ಕರ್ ತೋರಿದ ಬುದ್ಧ ಮಾರ್ಗದಲ್ಲಿ ಸಾಗಲು ಕರೆ ನೀಡಿದರು.

ಅಂತರರಾಷ್ಟ್ರೀಯ ಬೌದ್ಧ ಮಹಾ ಸಮ್ಮೇಳನ ಆಚರಣಾ ಸಮಿತಿಯ ಸದಸ್ಯರಾದ ಸುಭಾಷ್ ಮಾಡ್ರಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ ಅಕ್ಟೋಬರ್ ನಲ್ಲಿ ಚಾಮರಾಜನಗರ ಪಟ್ಟಣದ ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆಯಲಿರುವ ಮಹಾ ಸಮ್ಮೇಳನದಲ್ಲಿ ಡಾ ಅಂಬೇಡ್ಕರ್ ಅವರ ಮೊಮ್ಮಗ ಯಶವಂತ ರಾವ್ ಅಂಬೇಡ್ಕರ್ ಭಾಗವಹಿಸಲಿದ್ದಾರೆ, ದೇಶ, ವಿದೇಶಗಳಿಂದ ಭೌದ್ಧ ಭಿಕ್ಕುಗಳು ಹಾಗೂ ಉಪಾಸಕರು ಭಾಗವಹಿಸಲಿದ್ದಾರೆ.

ಹಾಗಾಗಿ ಚಾಮರಾಜನಗರ ಜಿಲ್ಲೆಯವರೆ ಆದ ನಾವು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ ಮಾಡಿದರು.

ಪೂಜ್ಯ ಸುಗತ ಪಾಲ ಭಂತೇಜಿ ಅವರು ತಿಸರಣ ಹಾಗೂ ಪಂಚಶೀಲ ಪಠಣ ಮಾಡಿ ಬೋದಿ ಮಾರ್ಗದಲ್ಲಿ ಸಾಗುವಂತೆ ಪ್ರವಚನ ನೀಡಿದರು.

ಈ ಸಂಧರ್ಭದಲ್ಲಿ ಎಪಿಎಂಸಿ ಮಾಜಿ ಉಪಾಧ್ಯಕ್ಷ ಹನುಮಂತಯ್ಯ, ಗ್ರಾಮ ಪಂಚಾಯತಿ ಮಾಜಿ ಉಪಾಧ್ಯಕ್ಷ ಶಿವಕುಮಾರ್, ಸಿದ್ದರಾಜ್, ಶಿವಯ್ಯ, ಬಸವಣ್ಣ, ಹನುಮಂತ ರಾಜ್, ಮಹಿಳಾ ಸಂಘದ ಪ್ರತಿನಿಧಿಗಳು ಗ್ರಾಮದ ಅನೇಕ ಮುಖಂಡರು ಭಾಗವಹಿಸಿದ್ದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಧಮ್ಮ ಪಯಣದ ಉದ್ದಕ್ಕೂ ಬುದ್ಧ ಹಾಗೂ ಅಂಬೇಡ್ಕರ್ ಪ್ರತಿಮೆಗಳಿಗೆ ಪುಷ್ಪಾರ್ಚಣೆ ಸಲ್ಲಿಸಿದರು.

# ಗುಂಡ್ಲುಪೇಟೆಯಲ್ಲಿ ರೇಷ್ಮೆ ಜಾಗೃತಿ ಕಾರ್ಯಕ್ರಮ: ರೈತರಿಗೆ ವೈಜ್ಞಾನಿಕ ಮಾಹಿತಿ



**ಗುಂಡ್ಲುಪೇಟೆ:** ತಾಲೂಕಿನ ಕೃಷಿ ಇಲಾಖೆಯಲ್ಲಿ ಡಾ. ರಂಜಿನಿ ಎಂ.ಎಸ್. (ಎಂ.ಆರ್.ಎಂ.ಎ 2.0) ಅವರ ನೇತೃತ್ವದಲ್ಲಿ ರೇಷ್ಮೆ ಜಾಗೃತಿ ಕಾರ್ಯಕ್ರಮ ನಡೆಯಿತು

ಕಾರ್ಯಕ್ರಮದಲ್ಲಿ ರೈತರಿಗೆ ದ್ವಿ ತಳಿ (ಡಬಲ್ ಹೈಬ್ರಿಡ್) ರೇಷ್ಮೆ ತಳಿಗಳು, ನೂತನ ಹಿಪ್ಪುನೇರಳೆ ತಳಿಗಳು ಹಾಗೂ ರೇಷ್ಮೆ ಕೃಷಿಯಲ್ಲಿ ಆಗಿರುವ ವೈಜ್ಞಾನಿಕ ಪ್ರಗತಿಯ ಕುರಿತು ಮಾಹಿತಿ ನೀಡಲಾಯಿತು. ಡಬಲ್ ಹೈಬ್ರಿಡ್ ರೇಷ್ಮೆ ಮೊಟ್ಟೆಗಳ (ಡಿ.ಎಫ್.ಎಲ್) ವಿವಿಧ ವಿಧಗಳ ಬಗ್ಗೆಯೂ ರೈತರಿಗೆ ಅರಿವು ಮೂಡಿಸಲಾಯಿತು.

ಉಜಿ ನೊಣದ ಬಾಧೆ ತಡೆಗಟ್ಟುವ ಮುನ್ನೆಚ್ಚರಿಕಾ ಕ್ರಮಗಳು, ಬೀಜ ಗೂಡು ಉತ್ಪಾದಕರಾಗಿ ನೋಂದಣಿ ಮಾಡಿಕೊಳ್ಳುವ ವಿಧಾನ ಸೇರಿದಂತೆ ಹಲವು ವಿಷಯಗಳ ಕುರಿತು ಅಧಿಕಾರಿಗಳು ರೈತರೊಂದಿಗೆ ಸಂವಾದ ನಡೆಸಿದರು. ರೇಷ್ಮೆ ಇಲಾಖೆಯ ಧಾನ್ಯಾಗಾರಗಳಿಂದ ಚೌಕಿ ಹುಳುಗಳನ್ನು ಪಡೆಯುವುದು, ಕಂದಕ ತೆಗೆಯುವುದು ಹಾಗೂ ಹೊದಿಕೆ ಪದ್ಧತಿ ಮೂಲಕ ಮಣ್ಣಿನ ಫಲವತ್ತತೆ ಹೆಚ್ಚಿಸುವುದು ಮತ್ತು ಎರೆಹುಳು ಗೊಬ್ಬರ ಬಳಸಿ ಜೈವಿಕ ಕೃಷಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ಚಂದ್ರಶೇಖರ್ ಕಲ್ಲಿಮನಿ (ಕೆ.ವಿ.ಕೆ., ಚಾಮರಾಜನಗರ), ಸಹಾಯಕ ನಿರ್ದೇಶಕ ಶಶಿಧರ್, ಜಿಲ್ಲಾ ಪಂಚಾಯತ್ ಉಪನಿರ್ದೇಶಕ ರೇಣುಕೇಶ್, ಸಹಾಯಕ ನಿರ್ದೇಶಕಿ ಶ್ವೇತಾ ಕೆ.ಎನ್., ಹಿರಿಯ ರೇಷ್ಮೆ ವಿಸ್ತರಣಾಧಿಕಾರಿಗಳಾದ ಶಾಂತರಾಜು ಹಾಗೂ ಶಶಿ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

**ಪ್ರತ್ಯಕ್ಷ ಪ್ರಾತ್ಯಕ್ಷಿಕೆ**

ಬೇಗೂರು ಗ್ರಾಮದ ರೈತರೊಬ್ಬರ ರೇಷ್ಮೆ ಹುಳು ಸಾಕಣೆ ಮನೆಯಲ್ಲಿ ಸೋಂಕು ನಿವಾರಣೆ ಮತ್ತು ಬ್ಲಾಕ್ ಬಾಕ್ಸಿಂಗ್ ಕುರಿತು ಪ್ರತ್ಯಕ್ಷ ಪ್ರಾತ್ಯಕ್ಷಿಕೆ ನಡೆಸಲಾಯಿತು. ಶಿಫಾರಸು ಮಾಡಿದ ಸೋಂಕು ನಿವಾರಕಗಳನ್ನು ಬಳಸಿ ಸಾಕಣೆ ಮನೆಯನ್ನು ಸೋಂಕುಮುಕ್ತಗೊಳಿಸುವ ವಿಧಾನವನ್ನು ರೈತರಿಗೆ ತೋರಿಸಲಾಯಿತು.

ರೇಷ್ಮೆ ಮೊಟ್ಟೆಗಳಿಂದ ಏಕಕಾಲದಲ್ಲಿ ಹಾಗೂ ಸಮಾನವಾಗಿ ಹುಳುಗಳು ಹೊರಬರುವಂತೆ ಮಾಡುವ ಬ್ಲಾಕ್ ಬಾಕ್ಸಿಂಗ್ ವಿಧಾನವನ್ನು ಪ್ರಾಯೋಗಿಕವಾಗಿ ವಿವರಿಸಲಾಯಿತು.

ಉತ್ತಮ ಗುಣಮಟ್ಟದ ರೇಷ್ಮೆ ಇಳುವರಿ ಪಡೆಯಲು ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಳ್ಳುವಂತೆ ರೈತರಿಗೆ ಅಧಿಕಾರಿಗಳು ಸಲಹೆ ನೀಡಿದರು.

# ಪರಿಸರ ಸ್ನೇಹಿ ಮೂರ್ತಿಗಳ ಬಳಕೆಗೆ ಕರೆ

**ರಾಮನಗರ:** ಚನ್ನಪಟ್ಟಣ ನಗರಸಭಾ ವ್ಯಾಪ್ತಿಯಲ್ಲಿ ಗೌರಿ–ಗಣೇಶ ಮೂರ್ತಿ ಮಾರಾಟ ಮಾಡುವ ವ್ಯಾಪರಸ್ಥರು ಪರಿಸರ ಸ್ನೇಹಿ ಮಣ್ಣಿನ ಮೂರ್ತಿಗಳನ್ನು ತಯಾರು ಮಾಡಿ, ಮಾರಾಟ ಮಾಡುವ ಮೂಲಕ ಸ್ಥಳೀಯ ಆಡಳಿತದೊಂದಿಗೆ ಸಹಕರಿಸುವಂತೆ ಕೋರಲಾಗಿದೆ.

ಗೌರಿ–ಗಣೇಶ ಮೂರ್ತಿಗಳನ್ನು ಜಿಲ್ಲಾಡಳಿತ, ಪೋಲಿಸ್ ಇಲಾಖೆ ಮತ್ತು ನಗರ ಸಭೆಯಿಂದ ನಿಗದಿಪಡಿಸಿದ ಸ್ಥಳಗಳಲ್ಲಿ ಮಾತ್ರ ಚನ್ನಪಟ್ಟಣ ನಗರಸಭೆ ಕಾರ್ಯಾಲಯದಿಂದ ಪೂರ್ವಾನುಮತಿ ಪಡೆದು ಮಾರಾಟ ಮಾಡಬೇಕು ಹಾಗೂ ವಿಷಕಾರಿ ರಾಸಾಯನಿಕ, ಲೋಹದ ಲೇಪದ, ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಾದ ಗೌರಿ ಗಣೇಶ ಮೂರ್ತಿಗಳನ್ನು ಮಾರಾಟ ಮಾಡುವಂತಿಲ್ಲ. ಅದನ್ನು ಉಲ್ಲಂಘಿಸಿದ್ದಲ್ಲೀ ನಗರಸಭೆ ಹಾಗೂ ಪೋಲಿಸ್ ಇಲಾಖೆಯಿಂದ ತೆರವುಗೊಳಿಸಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು.

ಜೇಡಿ ಮಣ್ಣಿನ ಗಣೇಶ ವಿಗ್ರಹವನ್ನು ಸ್ಥಾಪಿಸಿ ಮತ್ತು ಎಲೆ, ಹೂವುಗಳಿಂದ ಮಾಡಿದ ನೈಸರ್ಗಿಕ ಬಣ್ಣ ಹಚ್ಚಿದ ಗಣಪನನ್ನೇ ಸಾರ್ವಜನಿಕರು ಪೂಜಿಸುವಂತೆ ಕರೆ ನೀಡಿರುವ ನಗರಸಭೆ, ಈ ಪ್ರಕ್ರಿಯೆಯಲ್ಲಿ ಎಲ್ಲಿಯೂ ಪ್ಲಾಸ್ಟಿಕ್ ವಸ್ತುಗಳನ್ನು ಬಳಸದಂತೆ ಕೋರಿದೆ. ಸಾಮೂಹಿಕವಾಗಿ ನಡೆಸುವ ಗಣೇಶನ ಚಪ್ಪರಕ್ಕೆ ಪರಿಸರ ಸ್ನೇಹಿ ವಸ್ತುಗಳನ್ನು ಬಳಸಿ, ಬಾವಿ, ಕೆರೆ, ಹೊಳೆಗಳಲ್ಲಿ ಗಣಪತಿ ಮೂರ್ತಿಯನ್ನು ವಿಸರ್ಜನೆ ಮಾಡಬೇಡಿ, ಸೂಚಿತ ಸ್ಥಳಗಳಲ್ಲಿ ಮಾತ್ರ ಗೌರಿ ಮತ್ತು ಗಣೇಶ ಮೂರ್ತಿಗಳನ್ನು ವಿಸರ್ಜಿಸಿ, ಸಾರ್ವಜನಿಕರು ಮತ್ತು ವ್ಯಾಪರಸ್ಥರು ಪರಿಸರ ಸ್ನೇಹಿಯಾಗಿ ಆಚರಿಸಲು ಹಾಗೂ ಚನ್ನಪಟ್ಟಣ ನಗರಸಭಾ ವ್ಯಾಪ್ತಿಯಲ್ಲಿ ಸಾರ್ವಜನಿಕವಾಗಿ ಪ್ರತಿಷ್ಠಾಪನೆ ಮಾಡುವ ಪರಿಸರ ಸ್ನೇಹಿ ಗೌರಿ ಗಣೇಶ ಮೂರ್ತಿಗಳನ್ನು ದೊಡ್ಡಮಳೂರು ಗ್ರಾಮದಲ್ಲಿರುವ ತೆಪ್ಪದಕೊಳದಲ್ಲಿ ವಿಸರ್ಜನೆ ಮಾಡುವಂತೆ ಚನ್ನಪಟ್ಟಣ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೇಧಮೂರ್ತಿಯ ವಿರುದ್ಧ ಕಠಿಣ ಕಾನೂನು ಕ್ರಮ ಆಗ್ರಹ



**ಗುಂಡ್ಲುಪೇಟೆ:** ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್, ಜಗಜ್ಯೋತಿ ಬಸವಣ್ಣ ಹಾಗೂ ಭಗವಾನ್ ಬುದ್ಧರ ಕುರಿತು ಅವಹೇಳನಕಾರಿಯಾಗಿ ಮಾತನಾಡಿರುವ ವೇಧಮೂರ್ತಿ ಎಂಬ ವ್ಯಕ್ತಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು, ಸೂಕ್ತ ಕಾನೂನು ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಿ ಶಿಕ್ಷೆಗೆ ಗುರಿಪಡಿಸಬೇಕು ಎಂದು ಆಗ್ರಹಿಸಿ ಗುಂಡ್ಲುಪೇಟೆ ವಕೀಲರ ಸಂಘದ ವತಿಯಿಂದ ನ್ಯಾಯಾಲಯದ ಕಲಾಪಗಳನ್ನು ಬಹಿಷ್ಕರಿಸಿ ಪ್ರತಿಭಟನೆ ನಡೆಸಲಾಯಿತು.

ಅಂಬೇಡ್ಕರ್, ಬಸವಣ್ಣ ಹಾಗೂ ಬುದ್ಧರು ಸಮಾಜಕ್ಕೆ ನೀಡಿರುವ ಕೊಡುಗೆ ಮತ್ತು ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಮಾನವೀಯ ಮೌಲ್ಯಗಳ ಸಂದೇಶವನ್ನು ಅವಹೇಳನಿಸುವ ರೀತಿಯಲ್ಲಿ ಮಾತನಾಡಿರುವುದು ಖಂಡನೀಯ ಎಂದು ವಕೀಲರು ಆಕ್ರೋಶ ವ್ಯಕ್ತಪಡಿಸಿದರು.

ಸಂಬಂಧಪಟ್ಟ ವ್ಯಕ್ತಿಯ ವಿರುದ್ಧ ಕಾನೂನು ಬದ್ಧವಾಗಿ ಕಠಿಣ ಕ್ರಮ ಕೈಗೊಂಡು, ಇಂತಹ ಘಟನೆಗಳು ಮರುಕಳಿಸದಂತೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗುಂಡ್ಲುಪೇಟೆ ವಕೀಲರ ಸಂಘದ ಪದಾಧಿಕಾರಿಗಳು ಹಾಗೂ ವಕೀಲರು ಉಪಸ್ಥಿತರಿದ್ದರು.

# ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗೆ ನಿವೃತ್ತಿ ಪರಿಹಾರ ವಿತರಣೆ



**ಗುಂಡ್ಲುಪೇಟೆ:** ಜಿಲ್ಲಾ ಹಾಲು ಒಕ್ಕೂಟ ಹಾಗೂ ಚಾಮುಲ್ ರೈತ ಕಲ್ಯಾಣ ಟ್ರಸ್ಟ್ ವತಿಯಿಂದ ನಿವೃತ್ತಿ ಹೊಂದಿದ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗೆ ನಿವೃತ್ತಿ ಪರಿಹಾರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ 11 ಫಲಾನುಭವಿಗಳಿಗೆ ಒಟ್ಟು 27.9 ಲಕ್ಷ ಮೊತ್ತದ ಪರಿಹಾರದ ಚೆಕ್‌ಗಳನ್ನು ಸಹಕಾರ ಒಕ್ಕೂಟದ ಅಧ್ಯಕ್ಷರು ಹಾಗೂ ಚಾಮುಲ್ ನಿರ್ದೇಶಕ ಎಚ್.ಎಸ್. ನಂಜುಂಡ ಪ್ರಸಾದ್ ಮತ್ತು ಎಂಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷರು ಹಾಗೂ ಚಾಮುಲ್ ನಿರ್ದೇಶಕ ಎಂ.ಪಿ. ಸುನಿಲ್ ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಚ್.ಎಸ್. ನಂಜುಂಡ ಪ್ರಸಾದ್, ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಸಿಬ್ಬಂದಿಗೆ ನಿವೃತ್ತಿ ನಂತರ ಯಾವುದೇ ಸೌಲಭ್ಯವಿಲ್ಲದೆ ಮನೆಗೆ ತೆರಳುವ ಪರಿಸ್ಥಿತಿ ಇತ್ತು. ಇದನ್ನು ಮನಗಂಡು ಒಕ್ಕೂಟದ ವತಿಯಿಂದ 2021ರ ಏಪ್ರಿಲ್‌ನಿಂದ ನಿವೃತ್ತಿ ಪರಿಹಾರ ಯೋಜನೆ ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು.

ಸಿಬ್ಬಂದಿ ಸಹಕಾರ ಸಂಘಗಳಲ್ಲಿ ಇನ್ನಷ್ಟು ಆಸಕ್ತಿಯಿಂದ ಕಾರ್ಯನಿರ್ವಹಿಸಿ ಸಂಘಗಳನ್ನು ಲಾಭದತ್ತ ಕೊಂಡೊಯ್ಯಬೇಕು. ಸಹಕಾರ ಸಂಘಗಳಲ್ಲಿ ದೊರೆಯುವ ಹಲವು ಸೌಲಭ್ಯಗಳು ಖಾಸಗಿ ಡೇರಿಗಳಲ್ಲಿ ದೊರೆಯುವುದಿಲ್ಲ. ಆದ್ದರಿಂದ ಸಿಬ್ಬಂದಿ ಹಾಗೂ ಹಾಲು ಉತ್ಪಾದಕರು ಈ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಚಾಮುಲ್ ನಿರ್ದೇಶಕ ಎಂ.ಪಿ. ಸುನಿಲ್ ಮಾತನಾಡಿ, ಸಂಘಗಳಲ್ಲಿ ಹಾಲಿನ ಗುಣಮಟ್ಟ ಕಾಪಾಡುವುದು ಹಾಗೂ ಸಂಘಗಳನ್ನು ಉತ್ತಮ ಸ್ಥಿತಿಗೆ ಕೊಂಡೊಯ್ಯುವಲ್ಲಿ ಸಿಬ್ಬಂದಿಯ ಪಾತ್ರ ಮಹತ್ವದ್ದಾಗಿದೆ. ಸಿಬ್ಬಂದಿಗೆ ಆತ್ಮಸ್ಥೈರ್ಯ ತುಂಬುವ ಉದ್ದೇಶದಿಂದ ಈ ನಿವೃತ್ತಿ ಪರಿಹಾರ ಯೋಜನೆ ಜಾರಿಯಲ್ಲಿದ್ದು, ಉತ್ತಮ ಸೇವೆ ಸಲ್ಲಿಸುವ ಮೂಲಕ ಹೆಚ್ಚಿನ ಸೌಲಭ್ಯಗಳನ್ನು ಪಡೆಯುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಚಾಮುಲ್ ವಿಸ್ತರಣಾಧಿಕಾರಿಗಳಾದ ಎಚ್. ಪ್ರಕಾಶ್, ಸಿದ್ದಲಿಂಗೇಶ್, ರಂಜಿತಾ, ಮುದ್ದಪ್ಪ, ಉದಯ್, ಮಂಜೇಶ್ ಹಾಗೂ ನಾಗೇಶ್ ಅಕ್ಕಲಪುರ, ನಂಜಪ್ಪ ಮಡಹಳ್ಳಿ, ಚಂದ್ರಮೌಳಿ ಹುಂಡಿಪುರ, ಪ್ರಭಾಕರ್ ಅಲತೂರು ಸೇರಿದಂತೆ ವಿವಿಧ ಸಹಕಾರ ಸಂಘಗಳ ಕಾರ್ಯದರ್ಶಿಗಳು ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

# ಮಹಿಳೆಯರು ಕೌಶಲ್ಯ ಬೆಳೆಸಿಕೊಂಡು ಸ್ವಾವಲಂಬಿಯಾಗಿ: ಗುರುಪ್ರಸಾದ್




**ಗುಂಡ್ಲುಪೇಟೆ:** ಮಹಿಳೆಯರು ಕೌಶಲ್ಯಗಳನ್ನು ಅಭಿವೃದ್ಧಿ ಪಡಿಸಿಕೊಂಡು ಸ್ವಾವಲಂಬಿ ಜೀವನ ನಡೆಸಲು ಮುಂದಾಗಬೇಕು ಎಂದು ಬೇಗೂರು ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗುರುಪ್ರಸಾದ್ ಹೇಳಿದರು.

ತಾಲೂಕಿನ ಬೇಗೂರು ಗ್ರಾಮದಲ್ಲಿ ಗ್ರಾಮೀಣ ಶಿಕ್ಷಣ ಮತ್ತು ಆರೋಗ್ಯ ಸಂಸ್ಥೆ ಹಾಗೂ ಗ್ರಾಮ ಪಂಚಾಯಿತಿ ಬೇಗೂರು ಸಹಯೋಗದಲ್ಲಿ ಹದಿಹರೆಯದ ಹೆಣ್ಣುಮಕ್ಕಳು ಹಾಗೂ ಮಹಿಳೆಯರಿಗಾಗಿ ಆಯೋಜಿಸಿರುವ ಉಚಿತ ಟೈಲರಿಂಗ್ ಮತ್ತು ಕಸೂತಿ ತರಬೇತಿ ಕೇಂದ್ರವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಸಂದರ್ಭದಲ್ಲಿ ಮಹಿಳೆಯರಿಗೆ ಕೌಶಲ್ಯ ಅಭಿವೃದ್ಧಿ ಅತ್ಯಂತ ಅಗತ್ಯವಾಗಿದೆ. ತರಬೇತಿಯನ್ನು ಸದುಪಯೋಗಪಡಿಸಿಕೊಂಡು ಉತ್ತಮವಾಗಿ ಕಲಿತುಕೊಂಡು ಸ್ವಉದ್ಯೋಗ ಆರಂಭಿಸುವ ಮೂಲಕ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ಅವರು ಸಲಹೆ ನೀಡಿದರು.

ಆರೋಗ್ಯ ಇಲಾಖೆಯ ಕೌನ್ಸಿಲರ್ ಶೈಲಾ ಮಾತನಾಡಿ, ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವುದು ಅಗತ್ಯ. ತಮ್ಮಲ್ಲಿರುವ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳುವುದರ ಜೊತೆಗೆ ಆರೋಗ್ಯದ ಬಗ್ಗೆಯೂ ಹೆಚ್ಚಿನ ಕಾಳಜಿ ವಹಿಸಬೇಕು. ಪೌಷ್ಟಿಕ ಆಹಾರ ಸೇವನೆಯ ಮೂಲಕ ಆರೋಗ್ಯವನ್ನು ಕಾಪಾಡಿಕೊಂಡರೆ ವೃತ್ತಿ ಮತ್ತು ಸ್ವಉದ್ಯೋಗದತ್ತ ಹೆಚ್ಚಿನ ಗಮನ ಹರಿಸಲು ಸಾಧ್ಯವಾಗುತ್ತದೆ ಎಂದರು.

ಗ್ರಾಮೀಣ ಶಿಕ್ಷಣ ಮತ್ತು ಆರೋಗ್ಯ ಸಂಸ್ಥೆಯ ಯೋಜನಾಧಿಕಾರಿ ಸುಷ್ಮಾ ಮಾತನಾಡಿ, ಸಂಸ್ಥೆಯ ಗುರಿ ಮತ್ತು ಉದ್ದೇಶ ಹಾಗೂ ಮಹಿಳೆಯರಿಗೆ ನೀಡಲಾಗುತ್ತಿರುವ ಉಚಿತ ಕೌಶಲ್ಯ ತರಬೇತಿಯ ಉದ್ದೇಶದ ಕುರಿತು ಮಾಹಿತಿ ನೀಡಿದರು.

ತರಬೇತಿ ಕೇಂದ್ರದಲ್ಲಿ ಒಟ್ಟು 50 ಹದಿಹರೆಯದ ಹೆಣ್ಣುಮಕ್ಕಳು ಹಾಗೂ ಮಹಿಳೆಯರಿಗೆ ಟೈಲರಿಂಗ್ ಮತ್ತು ಕಸೂತಿ ತರಬೇತಿ ನೀಡಲಾಗುತ್ತಿದೆ.

# ಅಕ್ರಮವಾಗಿ ಜಾನುವಾರು ಸಾಗಾಟ: ಆರೋಪಿಗಳ ಬಂಧನ

**ಗುಂಡ್ಲುಪೇಟೆ:** ತಾಲ್ಲೂಕಿನ ತೆರಕಣಾಂಬಿ ಪೊಲೀಸ್ ಠಾಣೆ ವ್ಯಾಪ್ತಿಯ ತೆರಕಣಾಂಬಿ ಸಂತೆಯಿಂದ ನಾಲ್ಕು ಜಾನುವಾರುಗಳನ್ನು ಅಕ್ರಮವಾಗಿ ಸಾಗಿಸುತ್ತಿದ್ದ ಆರೋಪದ ಮೇಲೆ ಪೊಲೀಸರು ದಾಳಿ ನಡೆಸಿ ಜಾನುವಾರುಗಳನ್ನು ವಶಕ್ಕೆ ಪಡೆದಿದ್ದಾರೆ.

ತೆರಕಣಾಂಬಿ ಸಬ್ ಇನ್ಸ್‌ಪೆಕ್ಟರ್ ಮಹೇಶ್ ನೇತೃತ್ವದ ಪೊಲೀಸ್ ತಂಡ ಕಾರ್ಯಾಚರಣೆ ನಡೆಸಿದ್ದು, ಜಾನುವಾರುಗಳನ್ನು ರಕ್ಷಿಸಿ ಬರಗಿ ಫಾರಂಗೆ ಬಿಡಲಾಗಿದೆ.

ಅಕ್ರಮ ಸಾಗಾಟಕ್ಕೆ ಬಳಸಿದ್ದ ಆಟೋವನ್ನು ಪೊಲೀಸರು ವಶಕ್ಕೆ ಪಡೆದಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಆರೋಪಿಗಳನ್ನು ಬಂಧಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ



## ಸಮಾಜ ಸೇವೆ, ವಾಲಿಬಾಲ್ ಪಟುವಾಗಿ ಗುರುತಿಸಿಕೊಂಡಿದ್ದಾರೆ

# ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ವೆಂಕಟೇಶ್ ನೇಮಕ

**ರಾಮನಗರ:** ಬೆಂಗಳೂರು ದಕ್ಷಿಣ ಜಿಲ್ಲಾ (ರಾಮನಗರ) ಕಾಂಗ್ರೆಸ್ ಸಮಿತಿ ನೂತನ ಅಧ್ಯಕ್ಷರಾಗಿ ಸಿ.ಎನ್.ಆರ್ ವೆಂಕಟೇಶ್ ಅವರನ್ನು ನೇಮಿಸಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ನೇಮಕ ಆದೇಶವನ್ನು ಹೊರಡಿಸಿದ್ದಾರೆ.

**ಸಿ.ಎನ್.ಆರ್ ಅಂತಲೇ ಪರಿಚಯ**

ಸಮಾಜ ಸೇವೆ ಮತ್ತು ವಾಲಿಬಾಲ್ ಆಟಗಾರನಾಗಿ ಸಮಾಜಕ್ಕೆ ಪರಿಚಯವಾದ ಸಿ.ಎನ್.ಆರ್ ವೆಂಕಟೇಶ್, ನಂತರ ಗುರುತಿಸಿಕೊಂಡಿದ್ದು ಕಾಂಗ್ರೆಸ್ ಪಕ್ಷದಲ್ಲಿ. ಸಿ.ಎನ್.ಆರ್ ಅಂತಲೇ ಜಿಲ್ಲೆಯಲ್ಲಿ ಪ್ರಚಲಿತ.

ರಾಮನಗರ ನಗರದ ಕಾಯಿಸೊಪ್ಪಿನ ಬೀದಿಯ ನಿವಾಸಿಗಳಾಗಿದ್ದ ಶ್ರೀಮತಿ ರಾಮಕ್ಕ ಶ್ರೀ ನರಸಿಂಹಯ್ಯ ರವರ ಮಗನಾಗಿ 1963 ರಲ್ಲಿ ಜನಿಸಿದ ಇವರು ತಮ್ಮ ಪ್ರಾಥಮಿಕ ಶಿಕ್ಷಣವನ್ನು ಜಿಕೆಬಿಎಂಎಸ್ ಪಡೆದುಕೊಂಡರು. ಪ್ರೌಢ ಶಿಕ್ಷಣ, ಪಿಯುಸಿಯನ್ನು ಜೂನಿಯರ್ ಕಾಲೇಜುನಲ್ಲಿ ಯಶಸ್ವಿಯಾಗಿ ಪೂರೈಸಿದ್ದಾರೆ. ಮುನ್ಸಿಪಲ್ ಪದವಿ ಕಾಲೇಜಿನಲ್ಲಿ (ಇಂದು ಸರ್ಕಾರಿ ಫಸ್ಟ್ ಗ್ರೇಡ್ ಕಾಲೇಜು) ಪದವಿ ಪಡೆದಿದ್ದಾರೆ.

**1994ರಲ್ಲಿ ರಾಜಕೀಯ ಪ್ರವೇಶ**

1994ರಲ್ಲಿ ರಾಜಕೀಯ ಪ್ರವೇಶಿಸಿದ ಇವರು ಡಿ.ಕೆ.ಬ್ರದರ್ಸ್ ಮತ್ತು ಸಿ.ಎಂ.ಲಿಂಗಪ್ಪ ಅವರ ಮಾರ್ಗದರ್ಶನದಲ್ಲಿ ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡರು. ಸರಳ ಮತ್ತು ಸಜ್ಜನ ವ್ಯಕ್ತಿತ್ವದ ಸಿ.ಎನ್.ಆರ್, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಟ್ಟಾಳುವಾಗಿ ಗುರುತಿಸಿಕೊಂಡಿದ್ದರು. ಕಾಂಗ್ರೆಸ್ ಪಕ್ಷದ ಪ್ರಮುಖರು ಮತ್ತು ಕಾರ್ಯಕರ್ತರ ವಿಶ್ವಾಸಗಳಿಸಿ ಕಾಂಗ್ರೆಸ್ ಪಕ್ಷದಲ್ಲಿ ತಮ್ಮ ವ್ಯಕ್ತಿತ್ವದ ಮೂಲಕವೇ ಪ್ರಚಲಿತರಾದರು. ನಗರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ, ಅಧ್ಯಕ್ಷರಾಗಿ ಸಹ ಕರ್ತವ್ಯ ನಿರ್ವಹಿಸಿದ್ದಾರೆ.



2004–05 ರಲ್ಲಿ ರಾಮನಗರ– ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. 2016–17ರಲ್ಲಿ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

**ಸಿ.ಎನ್.ಆರ್‌ರನ್ನು ಜನ ಗುರುತಿಸಿದ್ದು ಏಕೆ?**

ಸರಳ ಮತ್ತು ಸಜ್ಜನಿಕೆಯ ವ್ಯಕ್ತಿತ್ವದ ಸಿ.ಎನ್.ಆರ್. ಸಂಘಟನಾ ಚತುರ. ಸಮಾಜ ಸೇವಕನಾಗಿ, ಕ್ರೀಡಾಪಟುವಾಗಿ ಸಿ.ಎನ್.ಆರ್ ಅವರನ್ನು ಜನರು ಕಂಡಿದ್ದರು. ಸಮಾಜಿಕವಾಗಿ, ರಾಜಕೀಯವಾಗಿ ಇವರ ನೇತೃತ್ವದಲ್ಲಿ ಆಗಿರುವ ಹಲವಾರು ಕಾರ್ಯಗಳನ್ನು ಕಂಡು ಜನತೆ ಸಿ.ಎನ್.ಆರ್. ಅವರನ್ನು ಗುರುತಿಸಿದ್ದಾರೆ. ಶ್ಲಾಘಿಸಿದ್ದಾರೆ.

1999ರಲ್ಲಿ ಚನ್ನಪಟ್ಟಣ, ರಾಮನಗರ ಮತ್ತು ಮಾಗಡಿಗೆ ಒಂದೇ ಎಪಿಎಂಸಿ ಕಚೇರಿ ಇತ್ತು. ಆಗ ಇವರು ಸದಸ್ಯರಾಗಿ ಆಯ್ಕೆಯಾಗಿದ್ದರು. ರಾಮನಗರದ ತರಕಾರಿ ಮಾರುಕಟ್ಟೆಯ ಹರಾಜು ಕಟ್ಟೆ ಮತ್ತು ಕಾಂಪೌಂಡ್, ಸಿ.ಎನ್.ಆರ್ ಅವರ ಒತ್ತಾಯದ ಮೇರೆಗೆ ಮಂಜೂರಾಗಿತ್ತು. ಇವರ ಅವಧಿಯಲ್ಲೇ ಟೆಂಡರ್ ಸಹ ಆಗಿತ್ತು. ತದ ನಂತರ ಕಾಮಗಾರಿ ಆರಂಭಗೊಂಡು ಪೂರ್ಣಗೊಂಡಿದೆ.

ರಾಮನಗರದ ರಾಮದೇವರ ಬೆಟ್ಟದ ಆರ್ಚ್ ಬಳಿ ಬನ್ನಿಮಂಟಪದ ಭೂಮಿ ಇದೆ. ಇದಕ್ಕೆ ಕಾಂಪೌಂಡ್ ನಿರ್ಮಾಣ, ರಾಮ ದೇವರ ಬೆಟ್ಟದ ಮೆಟ್ಟಿಲುಗಳಿಗೆ ರೈಲಿಂಗ್ಸ್ ಅಳವಡಿಕೆ, ಬೆಟ್ಟದ ಮೇಲಿರುವ ಪಟ್ಟಾಭಿರಾಮನ ದೇವಾಲಯವನ್ನು ಭಕ್ತರು ಪ್ರದರ್ಶನ ಮಾಡಲು ಇದ್ದ ಅಡೆತಡೆಗಳನ್ನು ನಿವಾರಿಸಿದ್ದಾರೆ. ಇದಕ್ಕೆ ಅಂದಿನ ಸಂಸದರಿಂದ 10 ಲಕ್ಷರೂ ಎಂಪಿ ಫಂಡ್ ಮೂಲಕ ಮಂಜೂರು ಮಾಡಿಸಿಕೊಂಡ ಹೆಗ್ಗಳಿಕೆ ಸಿ.ಎನ್.ಆರ್. ವೆಂಕಟೇಶ್ ಅವರದ್ದು.

ನಗರದ ಹಿಂದೂ ರುದ್ರಭೂಮಿಯಲ್ಲಿ ನಿರ್ಮಾಣವಾಗಿರುವ ಹೈಟೆಕ್ ಬರಿಯಲ್ ಯಾಂತ್ರಿಕೃತ ವ್ಯವಸ್ಥೆ ಮಾಡಿಕೊಡುವಂತೆ ಪ್ರಥಮವಾಗಿ ತಾವೇ ಪ್ರಥಮವಾಗಿ ಅಂದು ಇಂಧನ ಸಚಿವರಾಗಿದ್ದ ಡಿಕೆಶಿ ಅವರಿಗೆ ಮನವಿ ಮಾಡಿದ್ದಾಗಿ. ಸಿಎನ್‌ಆರ್ ತಿಳಿಸಿದ್ದಾರೆ.

ಬೆಂಗಳೂರು ಮೈಸೂರು ಹೆದ್ದಾರಿ ರಸ್ತೆಯಲ್ಲಿರುವ ಹಿಂದುಳಿದ ವರ್ಗದ ಸ್ಮಶಾನದಲ್ಲಿ ಕಾಂಪೌಂಡ್, ಬರಿಯಲ್ ಶೆಡ್‌ಗಳು, ಕಾಂಕ್ರೀಟ್ ರಸ್ತೆ, ವಿಧಿವಿಧಾನ ಕಟ್ಟೆ. ಕೊಳವೆ ಬಾವಿ, ಕಾವಲುಗಾರನ ಮನೆಯನ್ನು ಇವರ ನೇತೃತ್ವದಲ್ಲಿ ನಿರ್ಮಾಣವಾಗಿದೆ. ಬೇರ್‍ಯಾವ ಸ್ಮಶಾನದಲ್ಲಿ ಇಲ್ಲದ ವ್ಯವಸ್ಥೆ ಈ ಸ್ಮಶಾನದಲ್ಲಿದೆ.

ಆದರೆ ರಾಜಕೀಯ ಕಾರಣಕ್ಕೆ ಸಿಎನ್‌ಆರ್ ಅಧ್ಯಕ್ಷ ಸ್ಥಾನ ಒಲಿದು ಬರಲಿಲ್ಲ. ಬಹು ವ್ಯಕ್ತಿತ್ವದ ಸಿ.ಎನ್.ಆರ್ ಅವರಿಗೆ ಇದೀಗ ಬೆಂಗಳೂರು ದಕ್ಷಿಣ ಜಿಲ್ಲೆ (ರಾಮನಗರ) ಡಿಸಿಸಿ ಅಧ್ಯಕ್ಷ ಸ್ಥಾನ ಲಭಿಸಿದೆ. ಜಿಲ್ಲೆಯಲ್ಲಿ ಪಕ್ಷ ಮತ್ತಷ್ಟು ಸಂಘಟನೆಯಾಗಲಿದೆ ಎಂದು ಬೇರು ಮಟ್ಟದ ಕಾಂಗ್ರೆಸ್ ಕಾರ್ಯಕರ್ತರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ಕೆರೆಗಳಲ್ಲಿ ಪಿಒಪಿ ವಿಗ್ರಹಗಳ ವಿಸರ್ಜನೆ ನಿಷೇಧ



ಚಾಮರಾಜನಗರ, ಗೌರಿ ಹಾಗೂ ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬವು ಸಮೀಪಿಸುತ್ತಿದ್ದು, ನೈಸರ್ಗಿಕ ಜಲಮೂಲಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಅಧಿಸೂಚನೆ ಹೊರಡಿಸಲಾಗಿದ್ದು, ಈ ಪ್ರಕಾರ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣ ಲೇಪಿತವಾದ ವಿಗ್ರಹಗಳನ್ನು ಯಾವುದೇ ಕೆರೆ ಮತ್ತು ಇತರೆ ನೈಸರ್ಗಿಕ ಜಲಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ.

ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣ ಲೇಪಿತ ಗಣೇಶ ವಿಗ್ರಹಗಳನ್ನು ಸ್ಥಾಪಿಸಿ ಪೂಜಿಸಿದ ನಂತರ ಕೆರೆ, ಬಾವಿ ಹಾಗೂ ಇನ್ನಿತರೆ ನೈಸರ್ಗಿಕ ಜಲಮೂಲಗಳಿಗೆ ವಿಸರ್ಜಿಸುವುದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗಲಿದೆ. ಇದರಿಂದ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೆ ಸಾರ್ವಜನಿಕರ ಆರೋಗ್ಯಕ್ಕೂ ದಕ್ಕೆ ಉಂಟಾಗುತ್ತದೆ. ಹೀಗಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಹಬ್ಬದ ಆಚರಣೆಯಿಂದ ನೈಸರ್ಗಿಕ ಜಲಮೂಲಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಅಧಿಸೂಚನೆ ಹೊರಡಿಸಿದೆ.



ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣ ಲೇಪಿತವಾದ ವಿಗ್ರಹಗಳನ್ನು ತಯಾರಿಕೆ ಹಾಗೂ ಮಾರಾಟ ನಿಷೇಧಿಸಲಾಗಿದ್ದು, ನೈಸರ್ಗಿಕ ಮಣ್ಣಿನಿಂದ ತಯಾರಿಸಿದ ಬಣ್ಣ ರಹಿತ, ನೈಸರ್ಗಿಕ ಬಣ್ಣ ಲೇಪಿತ ಗೌರಿ–ಗಣೇಶ ಮೂರ್ತಿಗಳನ್ನೇ ಪ್ರತಿಷ್ಠಾಪಿಸಿ ಪೂಜಿಸಬೇಕು.

ಗೌರಿ–ಗಣೇಶ ಮೂರ್ತಿಗಳನ್ನು ಮನೆಯಲ್ಲೇ ಬಕೆಟ್‌ನಲ್ಲಿ ವಿಸರ್ಜಿಸಬೇಕು ಅಥವಾ ಸ್ಥಳಿಯ ಸಂಸ್ಥೆಗಳು, ಗ್ರಾಮ ಪಂಚಾಯಿತಿಗಳು ನಿಗದಿಪಡಿಸಿರುವ ಸ್ಥಳಗಳಲ್ಲಿ ವಿಸರ್ಜನೆ ಮಾಡಬೇಕು. ಜಲ ಮೂಲಗಳಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣ ಲೇಪಿತ ವಿಗ್ರಹಗಳನ್ನು ವಿಸರ್ಜಿಸುವುದನ್ನು ನಿಷೇಧಿಸಲಾಗಿದ್ದು, ಈ ಆದೇಶವನ್ನು ಉಲ್ಲಂಘಿಸಿದ್ದಲ್ಲಿ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳಲಾಗುವುದು.

ಗೌರಿ–ಗಣೇಶ ಮೂರ್ತಿಗಳನ್ನು ವಿಸರ್ಜಿಸುವ ಸಂದರ್ಭದಲ್ಲಿ ಹಸಿ ಕಸ (ಹೂ, ಹಣ್ಣು, ಬಾಳೆ ಕಂಬ, ಮಾವಿನ ತೋರಣ ಇತ್ಯಾದಿ ಆಲಂಕಾರಿಕ ವಸ್ತುಗಳು) ಪ್ರತ್ಯೇಕಿಸಿ ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೇ ಸ್ಥಳೀಯ ಸಂಸ್ಥೆಗಳು/ಗ್ರಾಮ ಪಂಚಾಯಿತಿಗಳು ಕಸ ಸಂಗ್ರಹಣ ವಾಹನಕ್ಕೆ ನೀಡಬೇಕು. ಸಾರ್ವಜನಿಕವಾಗಿ ಸ್ಥಾಪಿಸುವ ಗಣೇಶ ಮೂರ್ತಿಯ ಚಪ್ಪರ ಹಾಗೂ ಉತ್ಸವಕ್ಕೆ ಪರಿಸರ ಸ್ನೇಹಿ ವಸ್ತುಗಳನ್ನೇ ಬಳಸಬೇಕು. ಯಾವುದೇ ಸಂದರ್ಭದಲ್ಲೂ ನಿಷೇಧಿತ ಪ್ಲಾಸ್ಟಿಕ್ ವಸ್ತುಗಳ ಬಳಕೆ ಮಾಡಬಾರದು. ಧ್ವನಿವರ್ಧಕ ಬಳಕೆಯನ್ನು ರಾತ್ರಿ 10 ರಿಂದ ಬೆಳಗ್ಗೆ 6 ಗಂಟೆಯವರೆಗೆ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯ ಕೇಂದ್ರ ಪೋಸ್ಟರ್ ಬಿಡುಗಡೆ



ಚಾಮರಾಜನಗರ, ಆಯುಷ್ಮಾನ್ ಆರೋಗ್ಯ ಕೇಂದ್ರಗಳ ಕುರಿತು ಸುಲಭವಾಗಿ ಮಾಹಿತಿ ದೊರೆಯುವಂತೆ ಮಾಡಲು ಹಾಗೂ ಆರೋಗ್ಯ ಸೇವೆಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಉದ್ದೇಶದಿಂದ ಆಯುಷ್ಮಾನ್ ಆರೋಗ್ಯ ಕೇಂದ್ರಗಳ ನಾಮಫಲಕ ಮತ್ತು ಪೋಸ್ಟರ್ಗಳನ್ನು ಜಿಲ್ಲಾಧಿಕಾರಿ ಶ್ರೀರೂಪ ಅವರು ಬಿಡುಗಡೆ ಮಾಡಿದರು.

ಜಿಲ್ಲಾಡಳಿತ, ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ, ಇನ್ಸ್ಟಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ಇವರ ಸಹಭಾಗಿತ್ವದಲ್ಲಿ ಜಿಲ್ಲೆಯ ಸಾರ್ವಜನಿಕರಿಗೆ ತಮ್ಮ ಸಮೀಪದಲ್ಲಿರುವ ಆಯುಷ್ಮಾನ್ ಆರೋಗ್ಯ ಕೇಂದ್ರಗಳ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಪೋಸ್ಟರ್ ಹಾಗೂ ಆರೋಗ್ಯ ಕೇಂದ್ರಗಳ ನಾಮಫಲಕವನ್ನು ಬಿಡುಗಡೆ ಮಾಡಲಾಯಿತು.

ಪ್ರಾರಂಭಿಕ ಹಂತದಲ್ಲಿ ಸುಮಾರು 50 ಆಯುಷ್ಮಾನ್ ಆರೋಗ್ಯ ಕೇಂದ್ರಗಳಲ್ಲಿ ನಾಮಫಲಕ ಹಾಗೂ ಪೋಸ್ಟರ್ ಗಳನ್ನು ಅಳವಡಿಸಲಾಗುವುದು. ನಂತರ ಇನ್ನುಳಿದ ಕೇಂದ್ರಗಳಿಗೆ ಅಳವಡಿಕೆ ಕಾರ್ಯಕ್ಕೆ ಆದ್ಯತೆ ನೀಡಲಾಗುತ್ತದೆ. ಆರೋಗ್ಯ ಸೇವೆಗಳನ್ನ ಜನರಿಗೆ ಇನ್ನಷ್ಟು ಹತ್ತಿರವಾಗಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಮಹತ್ವದ್ದಾಗಿದೆ. ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ರಾಜೇಶ್ ಕುಮಾರ್, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ರವಿಕುಮಾರ್, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ. ಸುಂದರೇಶ್, ಐಪಿಹೆಚ್ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕರಾದ ಡಾ. ಕೌಶಿಕ್, ಸಮುದಾಯ ಆರೋಗ್ಯ ಅಧಿಕಾರಿ ರಾಧಿಕ, ಇತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು

# ಚಾಮರಾಜನಗರ ಜಿಲ್ಲೆಯಲ್ಲಿ ಆವರಿಸಿದ ಬರ

**ಮರ ಅಪ್ಪಿ ಮಳೆಗಾಗಿ ಪ್ರಾರ್ಥನೆ**



ಚಾಮರಾಜನಗರ: ಜಿಲ್ಲೆಯಲ್ಲಿ ಬರ ಆವರಿಸಿ ಜನರು ತತ್ತರಿಸುತ್ತಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ಒಂದೆಡೆಯಾದರೇ, ಮತ್ತೊಂದೆಡೆ ಜಾನುವಾರುಗಳಿಗೆ ಮೇವು ಸಿಗುತ್ತಿಲ್ಲವೆಂದು ದನಗಾಹಿಗಳು ಅಳಲು ತೋಡಿಕೊಂಡಿದ್ದಾರೆ. ಚಾಮರಾಜನಗರ ಜಿಲ್ಲೆಯಲ್ಲಿ ಹಲವೆಡೆ ಬಂಜಾರ ಸಮುದಾಯ ವಾಸ ಮಾಡುತ್ತಿದ್ದು, ಮಳೆಗಾಗಿ ವಿಶಿಷ್ಟ ಆಚರಣೆ ನಡೆಸಿ ಪ್ರಾರ್ಥನೆ ಸಲ್ಲಿಸಿದ್ದಾರೆ. ಹನೂರು ತಾಲೂಕಿನ ದೊಮ್ಮನಗದ್ದೆ ಗ್ರಾಮದ ಬಂಜಾರ ಸಮುದಾಯದ ಮಹಿಳೆಯರು ಕಾಡಿಗೆ ತೆರಳಿ ಮರಗಳನ್ನು ಅಪ್ಪಿಕೊಂಡು ಕಣ್ಣೀರಿಡುತ್ತ ಮಳೆಗಾಗಿ ದೇವರನ್ನು ಪ್ರಾರ್ಥಿಸಿ ಸಾಂಪ್ರದಾಯಿಕ ಪೂಜೆ ಸಲ್ಲಿಸಿದರು.

**ಮರ ಅಪ್ಪಿ ಮಳೆಗಾಗಿ ಪ್ರಾರ್ಥನೆ**

ಮಳೆಯ ಕೊರತೆಯಿಂದ ರೈತರ ಕೃಷಿ ಚಟುವಟಿಕೆಗೆ ಹಿನ್ನಡೆಯಾಗಿದೆ. ಕೆರೆ–ಕಟ್ಟೆ, ಹಳ್ಳ – ಕೊಳ್ಳಗಳಲ್ಲಿ ನೀರು ಬರಿದಾಗಿ ಒಣಗಿವೆ. ಅಲ್ಲದೆ ಅಂತರ್ಜಲದ ಮಟ್ಟವೂ ಕುಸಿದಿದೆ. ಜಾನುವಾರುಗಳಿಗೆ ನೀರು ಮತ್ತು ಮೇವಿನ ಸಮಸ್ಯೆ ಉದ್ಭವಿಸಿದೆ. ಇಂತಹ ಸಂಕಷ್ಟ ಎದುರಾಗಿರುವ ಈ ಸಂದರ್ಭದಲ್ಲಿ ಉತ್ತಮ ಮಳೆ ಸುರಿದು ಬರದ ಛಾಯೆ ದೂರವಾಗಲಿ. ಜನ – ಜಾನುವಾರುಗಳಿಗೆ ಕುಡಿಯುವ ನೀರು, ಮೇವು ಸಿಗಲಿ ಹಾಗೂ ಬಿಸಿಲಿನಿಂದ ಒಣಗಿರುವ ಅರಣ್ಯವೆಲ್ಲ ಹಸಿರಿನಿಂದ ಕಂಗೊಳಿಸಿ, ಜನ, ಜಾನುವಾರುಗಳು ಹಾಗೂ ವನ್ಯಜೀವಿಗಳು ನೆಮ್ಮದಿಯಿಂದರಲಿ ಎಂದು ಮಹಿಳೆಯರು ಮತ್ತು ಮಕ್ಕಳು ಮರಗಳನ್ನು ಅಪ್ಪಿಕೊಂಡು ಕಣ್ಣೀರಿಡುತ್ತಾ ದೇವರನ್ನು ಪ್ರಾರ್ಥಿಸಿದ್ದಾರೆ. ಬಂಜಾರ ಸಮುದಾಯದ ಮಹಿಳೆಯರಿಂದ ಮಳೆಗಾಗಿ ಪ್ರಾರ್ಥನೆ ಮಳೆ ಕೈ ಕೊಟ್ಟ ಸಂದರ್ಭದಲ್ಲಿ ಬಂಜಾರ ಸಮುದಾಯದ ಸಾಂಪ್ರದಾಯಿಕ ಆಚರಣೆ ಇದಾಗಿದ್ದು, ಮಳೆಗಾಗಿ ಪ್ರಾರ್ಥನೆ ಸಲ್ಲಿಸಿರುವುದಾಗಿ ಗ್ರಾಮದ ಮುಖಂಡರು ಮಾಹಿತಿ ನೀಡಿದರು.

# ಮರಿತಿಬ್ಬೇಗೌಡರಿಂದ ದಾಖಲೆ ದುರ್ಬಳಕೆ: ಅರುಣ್ ದಾಸ್

ಮೈಸೂರು: ವಿಧಾನ ಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ ಈ ಹಿಂದೆ ಚುನಾವಣೆಗೆ ಸ್ಪರ್ಧಿಸುವಾಗ ಅಕ್ರಮವಾಗಿ ತಮ್ಮ ಮನೆಯ ವಿಳಾಸ ನೀಡಿದ್ದಾರೆ. ಮತದಾರರ ಗುರುತಿನ ಚೀಟಿಯಲ್ಲಿಯೂ ಅದನ್ನೇ ದಾಖಲಿಸಿಕೊಂಡಿದ್ದರು. ತಾವು ದೂರು ನೀಡಿದ ಮೇಲೆ ಬದಲಿಸಿದ್ದಾರೆ. ಅವರ ಸಹಚರ ಎಚ್.ಎ.ಪ್ರಭಾಕರ್ ಸಹಾ ತಮ್ಮ ಅಕ್ರಮ ಭೂ ವ್ಯವಹಾರಗಳಿಗೆ ತಮ್ಮ ಮನೆಯ ವಿಳಾಸವನ್ನೇ ನೀಡಿ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಸುಪ್ರೀಂಕೋರ್ಟ್ ವಕೀಲ ಅರುಣ್ ದಾಸ್ ಆರೋಪಿಸಿದರು.



ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಾವು ಸುಪ್ರೀಂಕೋರ್ಟ್ ವಕೀಲರಾಗಿರುವ ಕಾರಣ ನಗರದ ಕುವೆಂಪು ನಗರ ಕೆಎಚ್‌ಬಿ ಕಾಲೋನಿಯ ಮನೆಯಲ್ಲಿ ಹೆಚ್ಚು ವಾಸವಾಗಿಲ್ಲ. ತಮ್ಮ ಕುಟುಂಬಸ್ಥರು ಇದ್ದಾರೆ. ಆದರೆ ತಮ್ಮ ಮನೆಗೆ ಸಮನ್ಸ್‌ಗಳು ಬರುವುದು, ಭೂವ್ಯವಹಾರದಲ್ಲಿ ವಂಚನೆಗೊಳಗಾದವರು ಬರುವುದು ಆರಂಭವಾದ ಬಳಿಕ ತಾವು ಕಾರಣ ಹುಡುಕಿದಾಗ ಮರಿತಿಬ್ಬೇಗೌಡರ ಸಹಚರ ಎಚ್.ಎ. ಪ್ರಭಾಕರ್ ತಮ್ಮ ಮನೆಯ ವಿಳಾಸವನ್ನು ಅಕ್ರಮಗಳಿಗೆ ಬಳಸಿಕೊಂಡಿರುವುದು ಬೆಳಕಿಗೆ ಬಂದಿದೆ. ಹೀಗಾಗಿ ಇವರ ವಿರುದ್ಧ ಕಾನೂನು ಕ್ರಮಕ್ಕೆ ಮುಂದಾಗಿರುವುದಾಗಿ ತಿಳಿಸಿದರು. ಜೊತೆಗೆ ಮರಿತಿಬ್ಬೇಗೌಡರು ಸಹಾ ಈ ಹಿಂದೆ ತಮ್ಮ ಮನೆ ವಿಳಾಸವನ್ನೇ ಬಳಸಿಕೊಂಡಿದ್ದಾರೆ. ಮತದಾರರ ಗುರುತಿನ ಚೀಟಿಗೂ ಬಳಸಿಕೊಂಡಿದ್ದರು. ತಾವು ದೂರು ನೀಡಿದ ಮೇಲೆ ರಾತ್ರೋರಾತ್ರಿ ಬದಲಿಸಿಕೊಂಡರು, ಇದು ಅಕ್ರಮವಾಗಿದ್ದು, ಈ ಕುರಿತು ಕಳೆದ ಆ. 18 ರಂದು ಪಾಳಿಕೆ ಆಯುಕ್ತರ ಕಾರ್ಯಾಲಯಕ್ಕೆ ದೂರು ನೀಡಿರುವುದಾಗಿ ತಿಳಿಸಿದರು.

# ಬಿಜೆಪಿಯಿಂದ ದ್ವೇಷ ರಾಜಕಾರಣ

## ಸಚಿವ ಸತೀಶ್ ಜಾರಕಿಹೊಳಿ ನಿವಾಸದ ಮೇಲೆ ಇಡಿ ದಾಳಿ ಖಂಡಿಸಿ ಪ್ರತಿಭಟನೆ

ಚಾಮರಾಜನಗರ: ಸಚಿವ ಸತೀಶ್ ಜಾರಕಿಹೊಳಿ ಅವರ ನಿವಾಸದ ಮೇಲೆ ಇಡಿ (ಜಾರಿ ನಿರ್ದೇಶನಾಲಯ) ದಾಳಿ ನಡೆಸಿರುವುದನ್ನು ಖಂಡಿಸಿ ಅವರ ಅಭಿಮಾನಿ ಬಳಗದ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು. ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ವಿ. ಚಂದ್ರು ಹಾಗೂ ಜಿ.ಪಂ. ಮಾಜಿ ಸದಸ್ಯ ಎಸ್. ಸೋಮನಾಯಕ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು,



ಭಿತ್ತಿಪತ್ರಗಳನ್ನು ಹಿಡಿದು ಮೆರವಣಿಗೆ ಹೊರಟರು. ಬಳಿಕ ಭುವನೇಶ್ವರಿ ವೃತ್ತಕ್ಕೆ ತೆರಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಮಾನವ ಸರಪಳಿ ರಚಿಸಿ ಕೆಲಕಾಲ ರಸ್ತೆ ತಡೆ ನಡೆಸಿದ ಅವರು, ಕೇಂದ್ರ ಸರ್ಕಾರ, ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ಪ್ರತಿಭಟನೆಯಲ್ಲಿ ಸತೀಶ್ ಜಾರಕಿಹೊಳಿ ಅಭಿಮಾನಿ ಬಳಗದ ಜಿ.ಪಂ. ಮಾಜಿ ಉಪಾಧ್ಯಕ್ಷ ಕೊಪ್ಪಾಳಿ ಮಹದೇವನಾಯಕ, ಜಿ.ಪಂ. ಸದಸ್ಯ ರಮೇಶ್, ನಗರ ಸಭಾ ಮಾಜಿ ಅಧ್ಯಕ್ಷ ಸುರೇಶ್ ನಾಯಕ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರುಸ್ವಾಮಿ, ತಾ.ಪಂ. ಮಾಜಿ ಅಧ್ಯಕ್ಷರಾದ ಅಗರ ವೆಂಕಟೇಶ್, ಬಂಗರನಾಯಕ, ಚೂಡಾ ಮಾಜಿ ಅಧ್ಯಕ್ಷ ಸೈಯದ್ ರಫೀ, ದೇವರಾಜು, ಅಮಚವಾಡಿ ರಾಜು, ನಾಗೇಂದ್ರ, ಕೃಷ್ಣನಾಯಕ, ಚೆಂಗುಮಣಿ, ವೆಂಕಟೇಶ್, ಪಾಳ್ಯ ಕೃಷ್ಣನಾಯಕ, ಶಕುಂತಲಾ, ಜಗದೀಶ್ ನಾಯಕ, ಬಿಸಲವಾಡಿ ಸಿದ್ದನಾಯಕ, ನಾರಾಯಣನಾಯಕ, ಅಮಚವಾಡಿ ಶಿವಣ್ಣ, ರಾಜು, ಅರಕಲವಾಡಿ ರಾಚನಾಯಕ, ಯಾನಗಳ್ಳಿ ರಂಗಸ್ವಾಮಿ, ಕಿಲಗೆರೆ ಜಯಕುಮಾರ್, ಹರವೆ ರಂಗಸ್ವಾಮಿ, ರಂಗಸ್ವಾಮಿನಾಯಕ ಸೇರಿದಂತೆ ಇತರರು ಭಾಗವಹಿಸಿದ್ದರು.

### ಮುಂದಿನ ಸಿಎಂ ಹುದ್ದೆ ತಪ್ಪಿಸುವ ಹುನ್ನಾರ

ನಮ್ಮ ರಾಜ್ಯದ ನಾಯಕರಾಗಿ ಎಲ್ಲ ಸಮುದಾಯದವರನ್ನು ಒಗ್ಗಟ್ಟಾಗಿ ಕರೆದುಕೊಂಡು ಹೋಗುತ್ತಿರುವ ಸಚಿವ ಸತೀಶ್ ಜಾರಕಿಹೊಳಿ ಅವರು ಮುಂದಿನ ಮುಖ್ಯಮಂತ್ರಿಯಾಗುತ್ತಾರೆ ಎಂಬ ಕಾರಣದಿಂದ ಅವರ ನಿವಾಸದ ಮೇಲೆ ಕೇಂದ್ರ ಸರ್ಕಾರದ ಕುಮ್ಮಕ್ಕಿನಿಂದ ಇಡಿ ದಾಳಿ ಮಾಡಲಾಗಿದೆ. ಇದು ಅತ್ಯಂತ ಖಂಡನೀಯವಾಗಿದ್ದು, ಇದಕ್ಕೆ ಅಮಿತ್ ಶಾ ನೇರ ಹೊಣೆಯಾಗಿದ್ದಾರೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ವಿ. ಚಂದ್ರು ಆರೋಪಿಸಿದರು. ಅಹಿಂದ ನಾಯಕರಾಗಿ ಪ್ರವರ್ಧಮಾನಕ್ಕೆ ಬರುತ್ತಿರುವ ಜಾರಕಿಹೊಳಿ ಅವರಿಗೆ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಹುದ್ದೆ ತಪ್ಪಿಸಬೇಕು ಎಂಬ ಹುನ್ನಾರದಿಂದ ಬಿಜೆಪಿಯವರು ಅಮಿತ್ ಶಾ ಅವರ ಮುಖಾಂತರ ಇಡಿಯವರನ್ನು ಬಿಟ್ಟಿದ್ದಾರೆ. ಇದೊಂದು ರಾಜಕೀಯ ಪ್ರೇರಿತ ದಾಳಿಯಾಗಿದ್ದು, ಅವರ ಶಕ್ತಿಯನ್ನು ಕುಗ್ಗಿಸುವ ಯತ್ನವಾಗಿದೆ. ಇಡಿ ಅಧಿಕಾರಿಗಳು ಕೂಡಲೇ ಅವರ ನಿವಾಸ ಬಿಟ್ಟು ತೊಲಗಬೇಕು ಎಂದು ಅವರು ಒತ್ತಾಯಿಸಿದರು.

### ಉಗ್ರ ಹೋರಾಟದ ಎಚ್ಚರಿಕೆ

ಜಿ.ಪಂ. ಮಾಜಿ ಸದಸ್ಯ ಎಸ್. ಸೋಮನಾಯಕ ಮಾತನಾಡಿ, ವಾಲ್ಮೀಕಿ ಸಮುದಾಯದ ಹಿರಿಯ ನಾಯಕರಾದ ಸತೀಶ್ ಜಾರಕಿಹೊಳಿ ಅವರ ಏಳಿಗೆಯನ್ನು ಸಹಿಸದೆ ಕೇಂದ್ರ ಸರ್ಕಾರ ಇಡಿ ಅಧಿಕಾರಿಗಳಿಂದ ಅವರ ನಿವಾಸದ ಮೇಲೆ ದಾಳಿ ನಡೆಸಿದೆ. ಕೂಡಲೇ ಇಡಿ ಅಧಿಕಾರಿಗಳು ಜಾರಕಿಹೊಳಿ ನಿವಾಸದಿಂದ ತೊಲಗಬೇಕು, ಕಾರ್ಯಾಚರಣೆ ಮುಂದುವರಿಸಿದರೆ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ಹಾಗೂ ಜಾತ್ಯತೀತ ನಾಯಕರಾದ ಸತೀಶ್ ಜಾರಕಿಹೊಳಿ ಅವರ ಜನಪ್ರಿಯತೆಯನ್ನು ಸಹಿಸದೆ ಕೇಂದ್ರ ಬಿಜೆಪಿ ಸರ್ಕಾರವು ಈ ಷಡ್ಯಂತ್ರ ರೂಪಿಸಿದೆ. ಇಡಿ ಹಾಗೂ ಸಿಬಿಐ ಕೇಂದ್ರ ಸರ್ಕಾರದ ಅಧೀನದಲ್ಲಿ ಕೆಲಸ ಮಾಡುತ್ತಿದ್ದು, ಅಮಿತ್ ಶಾ ಅವರ ಕೈಗೊಂಬೆಯಂತೆ ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿ ದಮನ ಮಾಡುವ ದುರುದ್ದೇಶದಿಂದ ಈ ದಾಳಿ ನಡೆಸಲಾಗಿದೆ ಎಂದು ದೂರಿದರು.

### ಸತೀಶ್ ಜಾರಕಿಹೊಳಿ ಮನೆಗಳ ಮೇಲೆ ಇಡಿ ದಾಳಿ ರಾಜಕೀಯ ಪ್ರೇರಿತ

ಗುಂಡ್ಲುಪೇಟೆ:–ಕರ್ನಾಟಕ ರಾಜ್ಯದ ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ ಅವರ ಮನೆಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ದಾಳಿ ನಡೆಸಿರುವುದು ರಾಜಕೀಯ ಪ್ರೇರಿತ ನಡೆಯಾಗಿದೆ ಎಂದು ಮಾನವ ಬಂಧುತ್ವ ವೇದಿಕೆ ಚಾಮರಾಜನಗರ ಜಿಲ್ಲಾ ಸಂಚಾಲಕ ಸುಭಾಷ್ ಮಾಡ್ರಹಳ್ಳಿ ಖಂಡಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸತೀಶ್ ಜಾರಕಿಹೊಳಿ ಅವರು ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು ಹಾಗೂ ದಲಿತರ ಧ್ವನಿಯಾಗಿ, ಶೋಷಿತರ ಬದುಕಿನಲ್ಲಿ ಬದಲಾವಣೆ ತರುವ ನಿಟ್ಟಿನಲ್ಲಿ ನಿರಂತರವಾಗಿ ಕೆಲಸ ಮಾಡುತ್ತಿದ್ದಾರೆ. ಅವರ ರಾಜಕೀಯ ಹಾಗೂ ಸಾಮಾಜಿಕ ಸೇವೆಗಳು ಮುಂದಿನ ಯುವಜನತೆಗೆ ಮಾದರಿಯಾಗಿವೆ ಎಂದು ತಿಳಿಸಿದ್ದಾರೆ.

ಸತೀಶ್ ಜಾರಕಿಹೊಳಿ ಅವರ ಏಳಿಗೆಯನ್ನು ಸಹಿಸದೆ ಕೇಂದ್ರ ಸರ್ಕಾರ ತನ್ನ ಅಧೀನದಲ್ಲಿರುವ ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂಬುದು ಇಂತಹ ದಾಳಿಗಳಿಂದ ತಿಳಿದು ಬರುತ್ತದೆ ಎಂದು ಆರೋಪಿಸಿದ್ದಾರೆ. ದುರುದ್ದೇಶದಿಂದ ತನಿಖಾ ಸಂಸ್ಥೆಗಳನ್ನು ಬಳಸಿಕೊಂಡು ಸತೀಶ್ ಜಾರಕಿಹೊಳಿ ಅವರನ್ನು ಗುರಿಯಾಗಿಸಿಕೊಂಡರೆ, ಅವರ ಲಕ್ಷಾಂತರ ಅಭಿಮಾನಿಗಳು ಬೀದಿಗಿಳಿದು ಹೋರಾಟ ನಡೆಸಬೇಕಾಗುತ್ತದೆ ಎಂದು ಸುಭಾಷ್ ಮಾಡ್ರಹಳ್ಳಿ ಎಚ್ಚರಿಕೆ ನೀಡಿದ್ದಾರೆ.

# ಆಹಾರ ಮೇಳ ನಗರದಾಚೆ ಆಯೋಜಿಸಿ



**ಮೈಸೂರು:** ದಸರಾ ವೇಳೆ ಆಹಾರ ಮೇಳವನ್ನು ನಗರದ ಹೃದಯ ಭಾಗದಲ್ಲಿ ಆಯೋಜಿಸುವುದರಿಂದ ಸಂಚಾರ ವ್ಯತ್ಯಯವುಂಟಾಗಲಿದೆ. ಅಲ್ಲದೆ ಆಹಾರ ಮೇಳವನ್ನು 15 ದಿನಗಳಿಗೆ ವಿಸ್ತರಿಸುವುದು ಸರಿಯಲ್ಲ. ಹೀಗಾಗಿ ಜಿಲ್ಲಾಡಳಿತ, ಜಿಲ್ಲಾ ಉಸ್ತುವಾರಿ ಸಚಿವರು ಇದನ್ನು ಪುನರ್ ಪರಿಶೀಲಿಸಬೇಕೆಂದು ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸ್ಕೌಟ್ಸ್ ಅಂಡ್ ಗೈಡ್ಸ್ ಮೈದಾನ ಇಲ್ಲವೇ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸುವುದರಿಂದ ನಗರದ ಮಧ್ಯ ಭಾಗದಲ್ಲಿ ವಾಹನ ಸಂಚಾರಕ್ಕೆ ಅಡಚಣೆಯುಂಟಾಗಲಿದೆ. ಪ್ರವಾಸಿಗರಿಗೂ ಕಿರಿಕಿರಿಯುಂಟಾಗಲಿದೆ. ಆದ್ದರಿಂದ ನಗರದ ಹೊರ ಭಾಗದಲ್ಲಿ ಆಯೋಜಿಸಬೇಕು. ಇದೇ ವೇಳೆ 15 ದಿನಗಳಿಗೆ ವಿಸ್ತರಿಸುವುದರಿಂದ ತೆರಿಗೆ ಕಟ್ಟಿ ಹೋಟೆಲ್ ಉದ್ಯಮ ನಡೆಸುವವರಿಗೆ ದೊಡ್ಡ ಹೊಡೆತ ಬೀಳಲಿದೆ. ಆದ್ದರಿಂದ 9 ದಿನಗಳಿಗೆ ಸೀಮಿತಗೊಳಿಸಬೇಕು ಎಂದು ಕೋರಿದರು. ಜೊತೆಗೆ, ದಸರಾ ಮಹೋತ್ಸವ ವೇಳೆ ದೇಶ, ವಿದೇಶಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುವ ಕಾರಣ ಈ ವೇಳೆ ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳು ರಾತ್ರಿ 12 ರವರೆಗೆ ತೆರೆದಿರಲು ಅವಕಾಶ ನೀಡಬೇಕೆಂದು ಕೋರಿದರು. ಇನ್ನಿತರ ಪದಾಧಿಕಾರಿಗಳಾದ ರವಿಶಾಸ್ತ್ರಿ, ರವೀಂದ್ರ ಭಟ್, ಮಹೇಶ್‌ಕಾಮತ್, ಉಗ್ರಯ್ಯ, ಕೆ.ಎಸ್. ಅರುಣ್ ಇದ್ದರು.

# ಕನಿಷ್ಠ ವೇತನ ಜಾರಿಗೆ ಆಗ್ರಹ




**ಮೈಸೂರು:** ಪರಿಷ್ಕೃತ ಕನಿಷ್ಠ ವೇತನದ ಮರುಪರಿಷ್ಕರಣೆಯನ್ನು ಕೈ ಬಿಟ್ಟು ಕೂಡಲೇ ಕನಿಷ್ಠ ವೇತನ ಜಾರಿಗೊಳಿಸಬೇಕೆಂದು ಆಗ್ರಹಿಸಿ "ಕನಿಷ್ಠ ವೇತನ ಜಾರಿಗಾಗಿ ಹೋರಾಟ ಸಮಿತಿ" ನಗರದ ಚಿಕ್ಕಗಡಿಯಾರದ ಬಳಿ ಅಂಚೆ ಬಾಕ್ಸ್ ಪತ್ರ ಹಾಕಿ ಪತ್ರ ಚಳವಳಿ ನಡೆಸಿದರು.

"ಎಂಎಂಸಿ ಮತ್ತು ಆರ್ ಐ ಯುನೈಟೆಡ್ ಕಾಂಟ್ರಾಕ್ಟ್ ವರ್ಕರ್ಸ್ ಯೂನಿಯನ್ ವತಿಯಿಂದ ಮುಖ್ಯಮಂತ್ರಿಗಳಿಗೆ ಪತ್ರಗಳನ್ನು ಸಾಮೂಹಿಕವಾಗಿ ಕಳಿಸಿ ಮಾತನಾಡಿದ ಸಂಘದ ಅಧ್ಯಕ್ಷ ಚಂದ್ರಶೇಖರ್ ಮೇಟಿ, ಐದು ವರ್ಷಗಳಿಗೊಮ್ಮೆ ಮಾಡಬೇಕಾಗಿದ್ದ ಪರಿಷ್ಕರಣೆ ಕೊರೊನಾ ಹೆಸರಿನಲ್ಲಿ ಮುಂದೂಡಿದ್ದು 10 ವರ್ಷದ ನಂತರ ಈಗ ಮಾಡಿರುತ್ತಾರೆ. ಅದಕ್ಕೆ ಹೈಕೋರ್ಟ್ ನಲ್ಲಿ ತಡೆ ತರಲು ಪ್ರಯತ್ನಿಸಿದ ಮಾಲೀಕರ ಮಾಲೀಕರು ಪ್ರಯತ್ನಕ್ಕೆ ಸಫಲವಾಗದಿದ್ದಾಗ, ಕ್ಯಾಬಿನೆಟ್ ನಲ್ಲಿ ಆಗಿರುವ ನಿರ್ಧಾರವನ್ನು, ಹೊಸ ಮುಖ್ಯಮಂತ್ರಿಗಳಾದ ಶ್ರೀ ಡಿಕೆ ಶಿವಕುಮಾರ್, ಮಾಲೀಕರ ಒತ್ತಡಕ್ಕೆ ಮಣಿದ, ಮರು ಪರಿಷ್ಕರಣೆ ಮಾಡುತ್ತಿರುವುದು ಕಾರ್ಮಿಕ ವಿರೋಧಿಯಾಗಿದೆ. ಸರ್ಕಾರ ಈ ಕೂಡಲೇ ಪರಿಷ್ಕೃತ ವೇತನವನ್ನು ಜಾರಿಗೊಳಿಸಬೇಕು. ಇಲ್ಲದಿದ್ದರೆ ರಾಜ್ಯವ್ಯಾಪಿ ಹೋರಾಟ ಬಲಿಷ್ಠ ಗೊಳ್ಳುತ್ತದೆ ಕೆಲಸ ನಿಲ್ಲಿಸಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು. ಈ ಕಾರ್ಯಕ್ರಮದಲ್ಲಿ ಕಾರ್ಯದರ್ಶಿಗಳಾದ ಹರೀಶ್, ಕಾರ್ಯಕಾರಿಣಿ ಸಮಿತಿಯ ಸದಸ್ಯರಾದ ಅಕ್ಕಮಹಾದೇವಿ, ಪವಿತ್ರಾ, ಕಾರ್ಮಿಕರಾದ ಸಿದ್ದರಾಜು, ಗುರುಮಲ್ಲು, ಶಿವಮ್ಮ, ರಾಜಮ್ಮ ಮಲ್ಲಿಗೆ ಮುಂತಾದವರು ಭಾಗವಹಿಸಿದ್ದರು.

# ಪತ್ರಿಕಾ ವಿತರಕರ ಸೇವೆ ಸಮಾಜಕ್ಕೆ ಮಾದರಿ

**ಮೈಸೂರು:** ಸಮಾಜಕ್ಕೆ ಅಗತ್ಯವಾದ ಮಾಹಿತಿ ಮತ್ತು ಸುದ್ದಿಗಳನ್ನು ಪ್ರತಿದಿನ ಮನೆಮನೆಗೆ ತಲುಪಿಸುವ ಪತ್ರಿಕಾ ವಿತರಕರ ಸೇವೆ ಶ್ಲಾಘನೀಯ ಹಾಗೂ ಮಾದರಿಯಾಗಿದೆ ಎಂದು ನಗರಪಾಲಿಕೆ ಮಾಜಿ ಸದಸ್ಯ ಪ್ರಶಾಂತ್ ಗೌಡ ತಿಳಿಸಿದರು.

ಪತ್ರಿಕಾ ವಿತರಕರ ದಿನಾಚರಣೆ ಅಂಗವಾಗಿ ಕೆಎಂಪಿಕೆ ಚಾರಿಟಬಲ್ ಟ್ರಸ್ಟ್ ವತಿಯಿಂದ ದೇವರಾಜ ಅರಸು ರಸ್ತೆಯಲ್ಲಿ ಹಿರಿಯ ಪತ್ರಿಕಾ ವಿತರಕರಾದ ಕನಕರತ್ನ, ರಾಘು, ಚಂದ್ರಶೇಖರ್, ಓಂ ದೇವ್, ಶ್ರೀಕಾಂತ, ಸತೀಶ್ ಅವರನ್ನು ಸನ್ಮಾನಿಸಿ ಮಾತನಾಡಿದರು. ಪತ್ರಿಕಾ ವಿತರಕರು ಪ್ರತಿದಿನ ಮುಂಜಾನೆ ಎದ್ದು, ಮಳೆ, ಗಾಳಿ, ಚಳಿ ಹಾಗೂ ಬೇಸಿಗೆಯನ್ನು ಲೆಕ್ಕಿಸದೆ ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸುತ್ತಾರೆ. ಸಮಾಜಕ್ಕೆ ನಿಖರವಾದ ಮತ್ತು ವಿಶ್ವಾಸಾರ್ಹ ಮಾಹಿತಿಯನ್ನು ತಲುಪಿಸುವಲ್ಲಿ ಅವರು ಪ್ರಮುಖ ಕೊಂಡಿಯಾಗಿದ್ದಾರೆ ಎಂದರು.

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಮಾತನಾಡಿ ಇಂದಿನ ಡಿಜಿಟಲ್ ಯುಗದಲ್ಲಿಯೂ ಮುದ್ರಿತ ಪತ್ರಿಕೆಗಳ ಮೇಲಿನ ಜನರ ವಿಶ್ವಾಸ ಮುಂದುವರಿದಿದೆ. ಪತ್ರಿಕೆಗಳನ್ನು ಓದುಗರ ಮನೆಬಾಗಿಲಿಗೆ ತಲುಪಿಸುವ ಪತ್ರಿಕಾ ವಿತರಕರ ಪರಿಶ್ರಮ, ಶಿಸ್ತು ಮತ್ತು ಸೇವಾ ಮನೋಭಾವ ಎಲ್ಲರಿಗೂ ಮಾದರಿಯಾಗಿದೆ ಎಂದರು.

ಮೈಸೂರು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಕೆ.ಬಿ.ಲಿಂಗರಾಜು ಮಾತನಾಡಿ, ಪತ್ರಿಕಾ ವಿತರಕರು ಕೇವಲ ಪತ್ರಿಕೆ ವಿತರಿಸುವ



ಕೆಲಸ ಮಾಡುತ್ತಿಲ್ಲ. ಅವರು ಜ್ಞಾನ, ಅರಿವು ಮತ್ತು ಸಾಮಾಜಿಕ ಜಾಗೃತಿಯನ್ನು ಜನರಿಗೆ ತಲುಪಿಸುವ ಮಹತ್ತರ ಕಾರ್ಯದಲ್ಲಿ ತೊಡಗಿದ್ದಾರೆ. ಆದ್ದರಿಂದ ಅವರ ಸೇವೆಯನ್ನು ಗುರುತಿಸಿ ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ತಿಳಿಸಿದರು. ಮೈಸೂರು ಜಿಲ್ಲಾ ಪತ್ರಿಕಾ ಪ್ರತಿನಿಧಿಗಳ ಸಂಘದ ಪ್ರಧಾನ ಕಾರ್ಯದರ್ಶಿ ಎ.ರವಿ, ಕರ್ನಾಟಕ ಹಿತರಕ್ಷಣಾ ವೇದಿಕೆ ಅಧ್ಯಕ್ಷ ವಿನಯ್ ಕುಮಾರ್, ಜೀವದಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ನಿರೂಪಕ ಅಜಯ್ ಶಾಸ್ತ್ರಿ, ಎಚ್.ಜಿ.ಗಿರಿಧರ್, ಪ್ರಮೋದ್ ಗೌಡ, ಗುರುರಾಜ್ ಶೆಟ್ಟಿ, ಸಂತೋಷ್ ,ನವೀನ್, ಎಸ್ಎನ್ ರಾಜೇಶ್, ಪ್ರಶಾಂತ್, ಕೇಬಲ್ ಮಹೇಶ್, ದೂರ ರಾಜಣ್ಣ, ಸುಚೇಂದ್ರ ಇನ್ನಿತರರು ಹಾಜರಿದ್ದರು.

**ಮೈಸೂರು: ಮಹಾನಗರ ಪಾಲಿಕೆವತಿಯಿಂದ ಆಯೋಜನೆ**

# ಮಣ್ಣಿನ ಗಣಪನ ತಯಾರಿ ಕಾರ್ಯಾಗಾರ

ಮೈಸೂರು: ಮಹಾನಗರ ಪಾಲಿಕೆವತಿಯಿಂದ ಪರಿಸರ ಸ್ನೇಹಿ ಗಣೇಶೋತ್ಸವವನ್ನು ಉತ್ತೇಜಿಸುವ ಉದ್ದೇಶದಿಂದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಮಣ್ಣಿನ ಗಣೇಶ ಮೂರ್ತಿ ತಯಾರಿಕಾ ಕಾರ್ಯಾಗಾರದಲ್ಲಿ ಪಾಲಿಕೆ ಆಯುಕ್ತೆ ಎಂ.ಕೆ.ಸವಿತಾ ಭಾಗವಹಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಗಣೇಶೋತ್ಸವದ ಸಂದರ್ಭದಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ ಹಾಗೂ ರಾಸಾಯನಿಕ ಬಣ್ಣಗಳಿಂದ ತಯಾರಿಸಿದ ಮೂರ್ತಿಗಳ ಬಳಕೆಯಿಂದ ಜಲಮೂಲಗಳು ಮತ್ತು ಪರಿಸರದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಿದರು. ಈ ಹಿನ್ನೆಲೆಯಲ್ಲಿ ನೈಸರ್ಗಿಕ ಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳ ಬಳಕೆಯನ್ನು ಉತ್ತೇಜಿಸಲು ಪಾಲಿಕೆಯು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ.

ಆಯುಕ್ತೆ ಎಂ.ಕೆ.ಸವಿತಾ ಮಾತನಾಡಿ, "ಪರಿಸರ ಸಂರಕ್ಷಣೆ ಮತ್ತು ಪರಿಸರ ಸ್ನೇಹಿ





ಗಣೇಶೋತ್ಸವದ ಕುರಿತ ಜಾಗೃತಿ ಮಕ್ಕಳಿಂದಲೇ ಆರಂಭವಾಗಬೇಕು. ಮಕ್ಕಳು ಈ ಸಂದೇಶವನ್ನು ತಮ್ಮ ಕುಟುಂಬ ಹಾಗೂ ಸಮುದಾಯಕ್ಕೆ ತಲುಪಿಸುವ ಅತ್ಯುತ್ತಮ ರಾಯಭಾರಿಗಳಾಗಬೇಕು" ಎಂದು ತಿಳಿಸಿದರು.

ಪ್ರೌಢಶಾಲಾ ವಿಭಾಗ ಸದ್ವಿದ್ಯಾ ಶಾಲೆಯ ವಿಶಾಲ್(ಪ್ರ), ಸಂಜನಾ(ದ್ವಿ), ಪ್ರೀತಮ್(ತೃ) ಹಾಗೂ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಜಿಎಸ್ಎಸ್ಎಸ್ ಶಾಲೆ ಎಸ್.ಮಿಥುನ್(ಪ್ರ), ಜಿಬಿಎಸ್ಇ ಶಾಲೆಯ ವಿಭಾಶ್ರೀ(ದ್ವಿ), ಪ್ರಗತಿ ವಿದ್ಯಾಕೇಂದ್ರದ ಚಿನ್ಮಯ್ (ತೃ) ಬಹುಮಾನ ಪಡೆದರು. ಕಾರ್ಯಕ್ರಮದಲ್ಲಿ ಕಾರ್ಯಪಾಲಕ ಅಭಿಯಂತರ (ಪರಿಸರ) ಕೆ.ಎಸ್.ಮೃತ್ಯುಂಜಯ, ಪರಿಸರ ಅಭಿಯಂತರರಾದ ವಿ.ಶ್ರೀದೇವಿ, ನವೀನ್ ಮತ್ತು ಚಿನ್ಮಯಿ ಇತರರು ಉಪಸ್ಥಿತರಿದ್ದರು.

# ಸೆ.11 ರಂದು ಮಂಡ್ಯದಲ್ಲಿ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ

**ಮಂಡ್ಯ:** ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ (ಇಂದು) ಸೆಪ್ಟೆಂಬರ್ 11 ರಂದು ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಮತ್ತು ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭ–2026 ರ ಕಾರ್ಯಕ್ರಮವನ್ನು ಬೆಳಿಗ್ಗೆ 9.30 ಗಂಟೆಗೆ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ .ಕುಮಾರಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಎನ್. ಚಲುವರಾಯಸ್ವಾಮಿ ಅವರು ಕಾರ್ಯಕ್ರಮದ ಉದ್ಘಾಟನೆ ಮಾಡಲಿದ್ದಾರೆ.

ಕೃಷಿ ಸಚಿವ ಪಿ. ಎಂ. ನರೇಂದ್ರಸ್ವಾಮಿ ರವರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ, ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ರವರು ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಮಂಡ್ಯ ವಿಧಾನಸಭಾ ಶಾಸಕರಾದ ಪಿ.ರವಿಕುಮಾರ್ (ಗಣಿಗ) ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ವಿಧಾನಪರಿಷತ್ ಶಾಸಕರಾದ ದಿನೇಶ್ ಗೂಳಿಗೌಡ, ರಾಜ್ಯ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್ ಆತ್ಮಾನಂದ, ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ, ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ. ನಾಗೇಂದ್ರ ಕುಮಾರ್, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಬಿ.ಎಸ್. ಶಿವಣ್ಣ, ವಿಧಾನ ಸಭಾ ಶಾಸಕರುಗಳಾದ ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ ಉದಯ, ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್. ಕೃಷ್ಣ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಿ.ಪಿ ಪ್ರಕಾಶ್, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದ ಉಪಾಧ್ಯಕ್ಷರಾದ ವಿಜಯಲಕ್ಷ್ಮಿ ರಘುನಂದನ್, ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮನೋಜ್‌ಕುಮಾರ್ ಮೀನಾ ರವರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಪ್ರಧಾನ ಭಾಷಣವನ್ನು ಸೀಕ್ ಪೌಂಡೇಶನ್ ಅಧ್ಯಕ್ಷರು ಪ್ರೊ. ರಘೋತ್ತಮ ರಾವ್ ಕಾಶಿ ರವರು ನುಡಿಯಲಿದ್ದಾರೆ.

ಕಾರ್ಯಕ್ರಮದ ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿಗಳು ಡಾ.ಕುಮಾರ, ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್ ನಂದಿನಿ ಎಸ್ಪಿ ಡಾ.ಶೋಭಾರಾಣಿ ವಿ.ಜೆ, ಅಪರ ಜಿಲ್ಲಾಧಿಕಾರಿಗಳು ಬಿ.ಸಿ ಶಿವಾನಂದಮೂರ್ತಿ, ಭಾಗವಹಿಸಲಿದ್ದಾರೆ.

## ನಾಗಮಂಗಲ ತಾಲ್ಲೂಕು ಆಸ್ಪತ್ರೆಗೆ ಉಪಲೋಕಾಯುಕ್ತರ ಭೇಟಿ:

# ಔಷಧ ದಾಸ್ತಾನು, ಸ್ವಚ್ಛತೆ ಹಾಗೂ ಸೇವೆಗಳ ಪರಿಶೀಲನೆ

**ನಾಗಮಂಗಲ:** ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ನಾಗಮಂಗಲ ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡಿ ಆಸ್ಪತ್ರೆಯ ವಿವಿಧ ವಿಭಾಗಗಳು ಹಾಗೂ ಸಾರ್ವಜನಿಕರಿಗೆ ಒದಗಿಸಲಾಗುತ್ತಿರುವ ಆರೋಗ್ಯ ಸೇವೆಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿರುವ ಔಷಧಗಳ ದಾಸ್ತಾನು, ಸಂಗ್ರಹಣೆ, ವಿತರಣೆ ಹಾಗೂ ಅವಧಿ ಮೀರಿದ ಔಷಧಗಳ ಕುರಿತು ಪರಿಶೀಲನೆ ನಡೆಸಿದ ಅವರು, ಔಷಧಗಳ ನಿರ್ವಹಣೆಯಲ್ಲಿ ಯಾವುದೇ ರೀತಿಯ ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಹೊರರೋಗಿಗಳ ವಿಭಾಗ (OPD) ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಚಿಕಿತ್ಸೆ ನೀಡುವ ವೈದ್ಯರ ಹೆಸರನ್ನು ಸಾರ್ವಜನಿಕರಿಗೆ ಸ್ಪಷ್ಟವಾಗಿ ಕಾಣುವಂತೆ ಪ್ರದರ್ಶಿಸಬೇಕು.



ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅಧಿಕಾರಿಗಳು ನಿಯಮಿತವಾಗಿ ಭೇಟಿ ನೀಡಿ, ಅಲ್ಲಿನ ಮೂಲಸೌಕರ್ಯ ಹಾಗೂ ಸಾರ್ವಜನಿಕರಿಗೆ ದೊರೆಯುತ್ತಿರುವ ಆರೋಗ್ಯ ಸೇವೆಗಳ ಗುಣಮಟ್ಟವನ್ನು ಪರಿಶೀಲಿಸಬೇಕು ಎಂದು ನಿರ್ದೇಶನ ನೀಡಿದರು.

ನಾಗಮಂಗಲ ತಾಲ್ಲೂಕು ಆಸ್ಪತ್ರೆಯಲ್ಲಿ 2.75 ಕೋಟಿ ವೆಚ್ಚದಲ್ಲಿ ಕೈಗೊಳ್ಳಬೇಕಿರುವ ದುರಸ್ತಿ ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಿ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಚಿಕಿತ್ಸೆ ಪಡೆಯುವ ಸಾರ್ವಜನಿಕರಿಗೆ ನೀಡುವ ಚೀಟಿಯಲ್ಲಿ ವೈದ್ಯರ ಹೆಸರು ಹಾಗೂ ಸೂಚಿಸಿರುವ ಔಷಧಗಳ ಹೆಸರನ್ನು ಸ್ಪಷ್ಟವಾಗಿ ನಮೂದಿಸಬೇಕು. ಮಾತ್ರೆಗಳನ್ನು ಸೂಕ್ತವಾಗಿ ಕವರ್‌ಗಳಲ್ಲಿ ಹಾಕಿ ನೀಡುವುದರ ಜೊತೆಗೆ, ಯಾವ ಔಷಧವನ್ನು ಎಷ್ಟು ಪ್ರಮಾಣದಲ್ಲಿ ಹಾಗೂ ಹೇಗೆ ಸೇವಿಸಬೇಕು ಎಂಬುದರ ಕುರಿತು ರೋಗಿಗಳಿಗೆ ಅಗತ್ಯ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಇದೇ ವೇಳೆ ಆಸ್ಪತ್ರೆಯ ಶವಾಗಾರ (ಮಾರ್ಚುರಿ) ಸ್ಥಳಕ್ಕೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದ ಉಪಲೋಕಾಯುಕ್ತರು, ಈ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಸಾರ್ವಜನಿಕರಿಗೆ ಆರೋಗ್ಯ ಸೇವೆ ಪಡೆಯುವಲ್ಲಿ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಆಸ್ಪತ್ರೆಯ ಸ್ವಚ್ಛತೆ, ಮೂಲಸೌಕರ್ಯ, ಔಷಧ ಪೂರೈಕೆ, ಸಂಗ್ರಹಣೆ ಹಾಗೂ ಆರೋಗ್ಯ ಸೇವೆಗಳ ಗುಣಮಟ್ಟದ ಬಗ್ಗೆ ನಿರಂತರ ನಿಗಾವಹಿಸಬೇಕು ಎಂದು ಉಪಲೋಕಾಯುಕ್ತರು ಅಧಿಕಾರಿಗಳಿಗೆ ಸೂಚಿಸಿದರು.

# ಮಂಡ್ಯ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಕುಮಾರ್ ಕೊಪ್ಪ ಆಯ್ಕೆ

## ಪಕ್ಷ ನನಗೆ ನೀಡಿರುವ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿಭಾಯಿಸುತ್ತೇನೆ-ಕುಮಾರ್ ಕೊಪ್ಪ

**ಮಂಡ್ಯ:** ಅಖಿಲ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷವು ಕರ್ನಾಟಕದ 35 ಜಿಲ್ಲೆಗಳಿಗೆ ನೂತನ ಜಿಲ್ಲಾಧ್ಯಕ್ಷರನ್ನು ನೇಮಕ ಮಾಡಿದ್ದು, ಅದರಂತೆ ಮಂಡ್ಯ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಕುಮಾರ್ ಕೊಪ್ಪ ಅವರನ್ನು ನೇಮಕ ಮಾಡಿ ಎಐಸಿಸಿ ಆದೇಶ ಹೊರಡಿಸಿದೆ.

ನೇಮಕದ ಬಳಿಕ ಪ್ರತಿಕ್ರಿಯೆ ನೀಡಿರುವ ನೂತನ ಜಿಲ್ಲಾಧ್ಯಕ್ಷ ಕುಮಾರ್ ಕೊಪ್ಪ ಅವರು, ಪಕ್ಷ ನನಗೆ ನೀಡಿರುವ ಈ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿಭಾಯಿಸುತ್ತೇನೆ ಎಂದು ತಿಳಿಸಿದ್ದಾರೆ.

ಈ ಕಾಲಘಟ್ಟದಲ್ಲಿ ಜಿಲ್ಲಾಧ್ಯಕ್ಷ ಸ್ಥಾನ ಕಬ್ಬಿಣದ ಕಡಲೆಯಿದ್ದಂತೆ. ಮುಂದೆ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ಸಹಕಾರಿ ಸಂಸ್ಥೆಗಳ ಚುನಾವಣೆಗಳು ಮತ್ತು ಒಂದು ವರ್ಷ ನಾಲ್ಕು ತಿಂಗಳಲ್ಲಿ ಬರಲಿರುವ ವಿಧಾನಸಭಾ ಚುನಾವಣೆ ಎದುರಿಸುವುದು ದೊಡ್ಡ ಸವಾಲಾಗಿದೆ.ಈ ಸವಾಲನ್ನು ಎದುರಿಸಲು ಮಹಿಳಾ, ಕಾರ್ಮಿಕ, ರೈತ, ಎಸ್‌ಸಿ ಎಸ್‌ಟಿ, ವಿದ್ಯಾರ್ಥಿ, ಸೇವಾದಳ ಕಾಂಗ್ರೆಸ್ ಸೇರಿದಂತೆ ಪಕ್ಷದ ಎಲ್ಲಾ ಘಟಕಗಳ ಪದಾಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸುವ ಗುರಿ ಹೊಂದಿದ್ದೇವೆ. ಪ್ರತಿ ವಿಧಾನಸಭಾ ಕ್ಷೇತ್ರದ ಎರಡೂ ಬ್ಲಾಕ್‌ಗಳಲ್ಲಿ ಕಾರ್ಯಕರ್ತರನ್ನು ಸಜ್ಜುಗೊಳಿಸಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತೇವೆ ಎಂದು ಹೇಳಿದರು.

ಇದೇ ವೇಳೆ ಅವರು, ಕಾಂಗ್ರೆಸ್ ಪಕ್ಷವನ್ನು ಬೂತ್ ಮಟ್ಟದಲ್ಲಿ ಸಂಘಟಿಸುವುದು ನನ್ನ ಮತ್ತು ನನ್ನೊಂದಿಗೆ ಪದಾಧಿಕಾರಿಗಳಾಗುವ ಎಲ್ಲರ ಜವಾಬ್ದಾರಿಯಾಗಿದೆ. ಎಲ್ಲಾ ಕಾರ್ಯಕರ್ತರ ಸಹಕಾರ ಅತ್ಯವಶ್ಯಕ. ನಾನು ಮುಂದಿನ



ದಿನಗಳಲ್ಲಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಲು ಬದ್ಧನಿದ್ದೇನೆ, ಸಿದ್ಧನಿದ್ದೇನೆ ಎಂದರು.

ಜಿಲ್ಲಾಧ್ಯಕ್ಷ ಹುದ್ದೆಗೆ ತಮ್ಮ ನೇಮಕಕ್ಕೆ ಕಾರಣರಾದ ಎಐಸಿಸಿ ಉಸ್ತುವಾರಿ ಸೈಮನ್ ಅಲೆಕ್ಸ್, ಜಿಲ್ಲಾ ಉಸ್ತುವಾರಿ ಹಾಗೂ ನೀರಾವರಿ ಸಚಿವರಾದ ಎನ್. ಚಲುವರಾಯಸ್ವಾಮಿ, ಕೃಷಿ ಸಚಿವರಾದ ಪಿಎಂ ನರೇಂದ್ರಸ್ವಾಮಿ, ಜಿಲ್ಲೆಯ ಶಾಸಕರುಗಳಾದ ರಮೇಶ್ ಬಂಡಿಸಿದ್ದೇಗೌಡ, ರವಿಕುಮಾರ್ ಗಣಿಗ, ಕೆಎಂ ಉದಯ್, ವಿಧಾನಪರಿಷತ್ ಸದಸ್ಯರಾದ ಮಧು ಜಿ ಮಾದೇಗೌಡ, ದಿನೇಶ್ ಗೂಳಿಗೌಡ, ದಡದಪುರ ಶಿವಣ್ಣ, ನಿಗಮ ಮಂಡಳಿಗಳ ಅಧ್ಯಕ್ಷರು, ಸದಸ್ಯರು ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರುಗಳಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದರು.

# ಸುವರ್ಣ ಸಂಭ್ರಮದಲ್ಲಿ ಹಂಚ್ಯಾ ಹಾಲು ಉತ್ಪಾದಕರ ಸಂಘ

**ಮೈಸೂರು:** ಮೈಸೂರು ತಾಲ್ಲೂಕಿನ ಹಂಚ್ಯಾ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಸುವರ್ಣ ಮಹೋತ್ಸವ ಸಮಾರಂಭ ಯಶಸ್ವಿಯಾಗಿ ನಡೆಯಿತು.

ಡೇರಿ ಮುಂಭಾಗ ಆಯೋಜಿಸಿದ್ದ ಕಾರ್ಯಕ್ರಮವನ್ನು ಮೈಸೂರು ಜಿಲ್ಲಾ ಹಾಲು ಒಕ್ಕೂಟದ ಮಾಜಿ ನಿರ್ದೇಶಕಿ ಲೀಲಾ ನಾಗರಾಜ್ ದೀಪ ಬೆಳಗಿಸಿ ಉದ್ಘಾಟಿಸಿ ಮಾತನಾಡಿ, ನಮ್ಮ ಅವಧಿಯಲ್ಲಿ ಮ್ಯಾಟ್ ವಿತರಣೆಗೆ ಕ್ರಮವಹಿಸಿ ಒಂದು ಬಿಎಂಸಿಗೆ 25, ಮಾಮೂಲಿ ಸಂಘಗಳಿಗೆ 15ಮ್ಯಾಟ್ ನೀಡಲಾಯಿತು. ಮುಂದಿನ ದಿನಗಳಲ್ಲಿ ಮತ್ತಷ್ಟು ಮ್ಯಾಟ್ ವಿತರಣೆಗೆ ಕ್ರಮವಹಿಸಲಾಗುವುದು ಎಂದರು.

ಗುಣಮಟ್ಟದ ಹಾಲನ್ನು ಪೂರೈಕೆ ಮಾಡುವ ಮೂಲಕ ಮತ್ತಷ್ಟು ಹೈನೋದ್ಯಮ ಹೆಚ್ಚಿಸಿ. ಒಕ್ಕೂಟದಿಂದ 59ವರ್ಷ ಒಳಪಟ್ಟವರಿಗೆ 1ಲಕ್ಷ ಮರಣನಿಧಿ 60 ವರ್ಷ ಮೇಲ್ಪಟ್ಟವರಿಗೆ 20 ಸಾವಿರ ಹೈನುಗಾರರಿಗೆ ನೀಡಲಾಗುತ್ತಿದೆ. ಹಾಗೆಯೇ ಪ್ರತಿಯೊಬ್ಬರು ತಮ್ಮ ರಾಸುಗಳಿಗೆ ಕಡ್ಡಾಯವಾಗಿ ಮಾಡಿಸಿಕೊಳ್ಳಿ. ಚಾಪ್ ಕಟ್ಟರ್, ಹಾಲು ಕರೆಯುವ ಮಿಷನ್ ಸಹ ರಿಯಾಯಿತಿ ದರದಲ್ಲಿ ನೀಡುತ್ತಿದ್ದು ಬಳಕೆ ಮಾಡಿಕೊಳ್ಳಿ ಎಂದರು.

ಮೈಮುಲ್ ಮಾಜಿ ಅಧ್ಯಕ್ಷ ಕೆ.ಊಮಾಶಂಕರ್ ಮಾತನಾಡಿ, 50 ವರ್ಷದ ಸಂಭ್ರಮಕ್ಕೆ ಕಾರಣರಾದ ಎಲ್ಲರಿಗೂ ಅಭಿನಂದಿಸುತ್ತೇನೆ. 20ಲಕ್ಷ ಡೆಪಾಸಿಟ್ ಇಟ್ಟಿದ್ದಾರೆ. ಕ್ರಮೇಣ ಮುಂದಿನ ದಿನಗಳಲ್ಲಿ ದೊಡ್ಡ ನಿವೇಶನ ಪಡೆದು ಅಭಿವೃದ್ಧಿ ಸಾಧಿಸಲಿ. ಲಾಭದಾಯಕವಾಗಿ ನಡೆಯುತ್ತಿದ್ದು ಮುಂದೆಯೂ ಹೀಗೆ ಬೆಳೆದು ಮಾದರಿ ಸಂಘವಾಗಲಿ ಎಂದು ಹೇಳಿದರು.

ಮೈಸೂರು ಜಿಲ್ಲಾ ಹಾಲು ಒಕ್ಕೂಟದ ವಿಸ್ತರಣಾಧಿಕಾರಿ




ಡಾ.ಎಂ.ಪರಮೇಶ್ ಮಾತನಾಡಿ, ಸಂಘದಲ್ಲಿ ಒಟ್ಟು 436ಮಂದಿ ಷೇರುದಾರ ಸದಸ್ಯರಿದ್ದಾರೆ. 1ಕೋಟಿ 11ಲಕ್ಷ93814 ರೂ. ವಹಿವಾಟು ನಡೆದಿದೆ. ಎಫ್ ಡಿ 20ಲಕ್ಷ ಇರಿಸಿದ್ದು, ಶೇ.65ರಷ್ಟು ಲಾಭವನ್ನು ಸದಸ್ಯರಿಗೆ ಮುಂದಿನ ದಿನಗಳಲ್ಲಿ ನೀಡಲಿದೆ. ಒಟ್ಟು 9.26.635ರೂ. ಗಳ ಲಾಭದಲ್ಲಿ ಸಂಘ ಮುನ್ನಡೆಯುತ್ತಿರುವುದು ಸ್ವಾಗತಾರ್ಹವಾಗಿದೆ. ಹೆಚ್ಚಿನ ಗುಣಮಟ್ಟದ ಹಾಲನ್ನು ಪೂರೈಸುವ ಮೂಲಕ ಮತ್ತಷ್ಟು ಅಭಿವೃದ್ಧಿಯತ್ತ ಸಾಗಲಿ ಎಂದು ಹೇಳಿದರು.

ಹಂಚ್ಯಾ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಎಚ್.ಸಿ.ನಾಗೇಂದ್ರಮೂರ್ತಿ, ಮೈಸೂರು ತಾಲ್ಲೂಕು ಹಾಲು ಒಕ್ಕೂಟದ ಮೇಲ್ವಿಚಾರಕ ಹಾಗೂ ಪಶು ವೈದ್ಯಾಧಿಕಾರಿ ಡಾ.ಸುನೀಲ್ ಮಾತನಾಡಿದರು. 2025–26ನೇ ಸಾಲಿನ ಸರ್ವಸದಸ್ಯರ ಸಭೆ ನಡೆಯಿತು. ಇದೇ ವೇಳೆ ಸಂಘದ ಮಾಜಿ ಅಧ್ಯಕ್ಷರಾದ ಎಚ್. ಎಸ್.ರೆಹಮಾನ್, ಎಚ್.ಎಂ.ಮಲ್ಲಪ್ಪ, ಅರಸೇಗೌಡ, ಎಲ್.ವೆಂಕಟೇಶ್, ಚನ್ನಮಲ್ಲಪ್ಪ, ರಂಗಸ್ವಾಮಿ, ಎಚ್. ಎಂ.ಮಲ್ಲಿಕಾರ್ಜುನಯ್ಯ, ತಮ್ಮೇಗೌಡರನ್ನು ಹಾಗೂ ಅತಿಹೆಚ್ಚು ಹಾಲು ಹಾಕಿದ ರೈತರಾದ ನಂಜಪ್ಪ, ನಂದಕುಮಾರ್, ಬಸವರಾಜು, ಮಹದೇವು, ರಾಜು, ಎಚ್.ಎಂ.ಮಲ್ಲಿಕಾರ್ಜುನಯ್ಯ, ಎಂ.ನಾಗೇಂದ್ರ, ಲಕ್ಷ್ಮಣ್, ಚಿಕ್ಕೇಗೌಡ, ಮಾದಪ್ಪ ಮತ್ತು ಸಂಘದ ಸದಸ್ಯ ಹಾಗೂ ಜಿಪಂ ಮಾಜಿ ಸದಸ್ಯ ಮಾದೇಗೌಡ, ಗ್ರಾ.ಪಂ. ಮಾಜಿ ಅಧ್ಯಕ್ಷ ಎಚ್.ಸಿ.ಕುಮಾರಸ್ವಾಮಿ, ಗ್ರಾಪಂ ಮಾಜಿ ಸದಸ್ಯರಾದ ಎಚ್.ಡಿ.ಚೆನ್ನಯ್ಯ, ಬಸವರಾಜು, ಹಂಚ್ಯಾ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕ್ಷ ಜೋಗಿ ಸಿದ್ದಯ್ಯ, ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯ ಜಂಟಿ ಕಾರ್ಯದರ್ಶಿ ಹಂಚ್ಯಾ ಶ್ರೀನಿವಾಸ್, ಗ್ರಾಮದ ಮುಖಂಡರಾದ ಬೋರೇಗೌಡ, ಕಾಳೇಗೌಡ, ಸ್ವಾಮಿ ಅವರನ್ನು ಸನ್ಮಾನಿಸಲಾಯಿತು. ಡೇರಿಯ ಉಪಾಧ್ಯಕ್ಷ ಮಹದೇವ, ನಿರ್ದೇಶಕರಾದ ಮಹದೇವ, ದೇವರಾಜ, ಜವರೇಗೌಡ, ರಾಮಚಂದ್ರ, ಚನ್ನಬೋರೇಗೌಡ, ಹೆಚ್. ಎಂ.ಶಿವಣ್ಣ, ತಿಮ್ಮಶೆಟ್ಟಿ, ಸಿದ್ದಲಿಂಗು, ಚಿಕ್ಕನಂಜಯ್ಯ, ಸಾಕಮ್ಮ, ಪುಟ್ಟಮ್ಮ, ಮುಖ್ಯಕಾರ್ಯನಿರ್ವಹಣಾಧಿಕಾರಿ ಎಚ್.ಎಸ್.ರಾಮಚಂದ್ರ, ಹಾಲು ಪರೀಕ್ಷಕ ಶಂಭುಲಿಂಗಪ್ಪ, ಸಹಾಯಕಿ ಕೆಂಪಮ್ಮ ಇನ್ನಿತರರು ಉಪಸ್ಥಿತರಿದ್ದರು.

# ಮುಖ್ಯಮಂತ್ರಿಗಳ ಆದಿವಾಸಿ ಗೃಹಭಾಗ್ಯ ಯೋಜನೆಯಡಿ ಮನೆ ನಿರ್ಮಾಣಕ್ಕೆ ಅರ್ಜಿ

**ಮಡಿಕೇರಿ:** 2025–26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 198 ರಂತೆ ಅರಣ್ಯ ಅರಣ್ಯದಂಚಿನ ಹಾಡಿಗಳಲ್ಲಿ ವಾಸಮಾಡುತ್ತಿರುವ ಸೋಲಿಗ, ಹಸಲರು, ಗೌಡಲು, ಸಿದ್ದಿ, ಕುಡಿಯ, ಮಲೈಕುಡಿ, ಕಾಡುಕುರುಬ, ಇರುಳಿಗ, ಬೆಟ್ಟಕುರುಬ, ಯರವ, ಪಣಿಯನ್ ಬುಡಕಟ್ಟು ಜನಾಂಗದವರಿಗೆ "ಮುಖ್ಯಮಂತ್ರಿಗಳ ಆದಿವಾಸಿ ಗೃಹಭಾಗ್ಯ ಯೋಜನೆಯಡಿ" ಮನೆಗಳನ್ನು ನಿರ್ಮಾಣ ಮಾಡಲು ಅವಕಾಶವಿದ್ದು, ವಸತಿ ಸೌಲಭ್ಯಕ್ಕೆ ಸೆಪ್ಟೆಂಬರ್ 19 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.



ಅರ್ಜಿಯನ್ನು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ವಿರಾಜಪೇಟೆ ತಾಲ್ಲೂಕು, ಪೊನ್ನಂಪೇಟೆ– 9632465161, ಸಹಾಯಕ ನಿರ್ದೇಶಕರು(ಗ್ರೇಡ್–1), ಸಮಾಜ ಕಲ್ಯಾಣ ಇಲಾಖೆ, ಮಡಿಕೇರಿ–9482894676, ಸಹಾಯಕ ನಿರ್ದೇಶಕರು (ಗ್ರೇಡ್–2), ಸಮಾಜ ಕಲ್ಯಾಣ ಇಲಾಖೆ, ಸೋಮವಾರಪೇಟೆ–7259552655 ರವರನ್ನು ಸಂಪರ್ಕಿಸುವುದು.

ಅರ್ಜಿದಾರರು ಪರಿಶಿಷ್ಟ ಪಂಗಡದ ಮಹಿಳಾ ಫಲಾನುಭವಿಯಾಗಿರಬೇಕು (ವಿವಾಹಿತ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿ), ಮಾಜಿ ಯೋಧರು, ವಿಶೇಷ ಚೇತನರು ಮತ್ತು ಹಿರಿಯನಾಗರಿಕರು ಇದ್ದ ಪಕ್ಷದಲ್ಲಿ ಪುರುಷರು ಸಹ ಅರ್ಹರಾಗಿರುತ್ತಾರೆ.

ನಿವೇಶನ ಲಭ್ಯವಿದ್ದು ವಸತಿ ರಹಿತರಾಗಿ ಗುಡಿಸಲು/ ತಾತ್ಕಾಲಿಕ ಶೆಡ್‌ಗಳಲ್ಲಿರುವವರು, ಶಿಥಿಲಗೊಂಡ ಮನೆ ಅಥವಾ ಕಚ್ಚಾ ಮನೆಗಳಲ್ಲಿ ವಾಸಿಸುತ್ತಿರುವ ಕುಟುಂಬಗಳು. ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು.

ಅರ್ಜಿದಾರರು ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಬಿ.ಪಿ.ಎಲ್. ಪಡಿತರ ಚೀಟಿ, ಆಧಾರ್ ಕಾರ್ಡ್, ಬ್ಯಾಂಕ್ ಖಾತೆ, ಆಧಾರ್ ಸಂಖ್ಯೆಗೆ ಲಿಂಕ್ ಹೊಂದಿರುವ ಮೊಬೈಲ್ ಸಂಖ್ಯೆ/ಸಂಪರ್ಕ ಸಂಖ್ಯೆ ಹೊಂದಿರಬೇಕು. ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು, ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು ಮತ್ತು ಪಾರಂಪರಿಕ ಅರಣ್ಯ ಹಕ್ಕುಗಳ ಕಾಯ್ದೆಯನ್ವಯ ಜಿಲ್ಲಾ ಸಮಿತಿಯಿಂದ ನೀಡಲಾದ ಹಕ್ಕು ಪತ್ರ ಹೊಂದಿರಬೇಕು.

ಕುಟುಂಬದ ಹೆಸರಿನಲ್ಲಿ ಅರಣ್ಯ ಹಕ್ಕುಪತ್ರವಿದ್ದು, ಕಾನೂನಾತ್ಮಕವಾಗಿ ತಂದೆಯಿಂದ ಮಕ್ಕಳಿಗೆ ವರ್ಗಾವಣೆಯಾಗುವ ಸಂದರ್ಭವನ್ನು ಅವಲೋಕಿಸಿ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ/ ಕಾರ್ಯದರ್ಶಿಗಳು ವಿವಿಧ ವಸತಿ ಯೋಜನೆಗಳಲ್ಲಿ ಆಯ್ಕೆಯಾದ ಫಲಾನುಭವಿಗಳು ಹೊಂದಿರುವ ಸಾಗುವಳಿ/ಕೃಷಿ ಭೂವಿ/ಅರಣ್ಯಹಕ್ಕು ಜಮೀನುಗಳಲ್ಲಿ ಮನೆ ನಿರ್ಮಾಣಕ್ಕಾಗಿ ಗರಿಷ್ಠ 2 ಗುಂಟೆ ಮೀರದಂತೆ ಒಂದು ಬದಿಯಲ್ಲಿನ ನಿರ್ದಿಷ್ಟ ಭಾಗವನ್ನು "ಸರ್ಕಾರದ ವಸತಿ ಯೋಜನೆಯಡಿ ಮನೆ ನಿರ್ಮಾಣಕ್ಕಾಗಿ ಮಾತ್ರ" ಎಂದು ಅನುಮತಿ ನೀಡತಕ್ಕದ್ದು ಎಂದು ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಇಲಾಖೆಯ ಯೋಜನಾ ಸಮನ್ವಯಾಧಿಕಾರಿ ಭಾಗೀರಥಿ ಅವರು ತಿಳಿಸಿದ್ದಾರೆ.

## ವಿಶ್ವ ಬೆನ್ನುಹುರಿ ಗಾಯ ದಿನಾಚರಣೆ ಹಾಗೂ ನಶಾ ಮುಕ್ತ ಭಾರತ ಕಾರ್ಯಕ್ರಮ

# ಯಾವುದೇ ರೀತಿಯ ಗಾಯ/ ನೋವಿಗೆ ಆರಂಭದಲ್ಲಿ ಚಿಕಿತ್ಸೆ ಅಗತ್ಯ: ಡಾ.ಲೋಕೇಶ್

**ಮಡಿಕೇರಿ:** ಮಾದಕ ದ್ರವ್ಯದ ಹಾವಳಿ ತಡೆಯಲು 'ನಶಾ ಮುಕ್ತ ಭಾರತ' ಕಾರ್ಯಕ್ರಮ ನಿರಂತರವಾಗಿ ಆಯೋಜಿಸಿ, ಯುವ ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕರು ಹಾಗೂ ಡೀನ್ ಡಾ.ಎ.ಜೆ.ಲೋಕೇಶ್ ಅವರು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಬೋಧಕ ಆಸ್ಪತ್ರೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಕೊಡಗು ಶಾಖೆ, ಪ್ರಾಜೆಕ್ಟ್ ಸಮರ್ಥ್–ನಯರಾ ಎನರ್ಜಿ ಲಿಮಿಟೆಡ್‌ನ ಸಿಎಸ್‌ಆರ್ ಉಪಕ್ರಮ ಹಾಗೂ ಸಮುದಾಯ ಸಹಭಾಗಿತ್ವದಲ್ಲಿ ನಗರದ ಜಿಲ್ಲಾ ಆಸ್ಪತ್ರೆಯ ಬೋಧನಾ ಕೊಠಡಿಯಲ್ಲಿ ಗುರುವಾರ ನಡೆದ ವಿಶ್ವ ಬೆನ್ನುಹುರಿ ಗಾಯ ದಿನಾಚರಣೆ ಮತ್ತು ನಶಾ ಮುಕ್ತ ಭಾರತ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಮಾದಕ ದ್ರವ್ಯಕ್ಕೆ ದಾಸರಾಗಲು ಕಾರಣಗಳು ಮತ್ತು ಹಿರಿಯರು ವ್ಯಸನಕ್ಕೆ ಒಳಗಾಗಲು ಕಾರಣಗಳು ವಿಭಿನ್ನವಾಗಿರುತ್ತವೆ. ಆದ್ದರಿಂದ ಕಾಲೇಜುಗಳು, ಪ್ರಾಥಮಿಕ ಶಿಕ್ಷಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ವಿವಿಧ ಎನ್‌ಜಿಒಗಳ ಸಹಕಾರದೊಂದಿಗೆ ಮತ್ತಷ್ಟು ಕಾರ್ಯಕ್ರಮ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.

ಬೆನ್ನುಹುರಿಯ ಗಾಯ ಹಾಗೂ ಪಾರ್ಶ್ವವಾಯು ಸೇರಿದಂತೆ ನರ ಸಂಬಂಧಿತ ಸಮಸ್ಯೆಗಳ ಕುರಿತು ವಿವರಿಸಿದ ಅವರು, ರೋಗಿಯನ್ನು ಆರಂಭಿಕ ಹಂತದಲ್ಲೇ ಗುರುತಿಸಿ ಸೂಕ್ತ ಚಿಕಿತ್ಸೆ ನೀಡುವುದು ಅತ್ಯಂತ ಮುಖ್ಯವಾಗಿದೆ ಎಂದರು.

ಬೆನ್ನುಹುರಿಯ ಗಾಯವು ಆಘಾತಕಾರಿ ಕಾರಣಗಳಿಂದ ಉಂಟಾಗಬಹುದು. ಆರಂಭಿಕ ಹಂತದಲ್ಲೇ ಸಮಸ್ಯೆಯನ್ನು ಗುರುತಿಸಿ ಫಿಸಿಯೋಥೆರಪಿ ಹಾಗೂ ಅಗತ್ಯ ಚಿಕಿತ್ಸೆಯನ್ನು ನೀಡಿದಲ್ಲಿ ಹಾನಿಗೊಳಗಾದ ಅಂಗಗಳ ಕಾರ್ಯಕ್ಷಮತೆಯನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.



ರಸ್ತೆ ಅಪಘಾತದ ಇತಿಹಾಸದೊಂದಿಗೆ ರೋಗಿಯೊಬ್ಬರು ಆಸ್ಪತ್ರೆಗೆ ಬಂದ ತಕ್ಷಣ ಅದನ್ನು ಕೇವಲ ಬೆನ್ನುಹುರಿಯ ಗಾಯ ಎಂದು ಪರಿಗಣಿಸಬಾರದು. ರೋಗಿಯ ಸಂಪೂರ್ಣ ವೈದ್ಯಕೀಯ ಇತಿಹಾಸವನ್ನು ತಿಳಿದುಕೊಳ್ಳುವುದು ಅತ್ಯಂತ ಅಗತ್ಯವಾಗಿದೆ ಎಂದು ವೈದ್ಯಕೀಯ ಅವರು ಸಲಹೆ ನೀಡಿದರು.

ಕೆಲವೊಮ್ಮೆ ಕೈಕಾಲುಗಳಲ್ಲಿ ನಿಶ್ಯಕ್ತಿ ಉಂಟಾದ ಪರಿಣಾಮ ರೋಗಿ ಬಿದ್ದಿರುವ ಸಾಧ್ಯತೆಯೂ ಇರುತ್ತದೆ. ಹೀಗಾಗಿ ರೋಗಿಯ ಇತಿಹಾಸವನ್ನು ಸರಿಯಾಗಿ ತಿಳಿದುಕೊಳ್ಳದೆ ನೇರವಾಗಿ 'ಬೆನ್ನುಹುರಿಯ ಗಾಯ' ಎಂದು ನಿರ್ಧರಿಸಿ ಎಂಆರ್‌ಐ ಅಥವಾ ಸಿಟಿ ಸ್ಕ್ಯಾನ್‌ಗೆ ಸೂಚಿಸುವುದು ಸರಿಯಾದ ಕ್ರಮವಲ್ಲ ಎಂದು ಡಾ.ಲೋಕೇಶ್ ಅವರು ತಿಳಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ಡಿ.ಎಸ್.ನಂಜುಂಡಯ್ಯ ಅವರು ಮಾತನಾಡಿ, ಬೆನ್ನುಹುರಿಯು ಮಾನವ ಶರೀರದ ಪ್ರಮುಖ ಅಂಗವಾಗಿದ್ದು, ದೇಹದ ವಿವಿಧ ಚಲನವಲನಗಳು ಹಾಗೂ ಕಾರ್ಯಚಟುವಟಿಕೆಗಳಿಗೆ ಬೆನ್ನುಹುರಿ ಪ್ರಮುಖ ಪಾತ್ರ ವಹಿಸುತ್ತದೆ. ಮೂಳೆಗಳ ಒಳಭಾಗದಲ್ಲಿರುವ ಬೆನ್ನುಹುರಿಯನ್ನು ಸಂರಕ್ಷಿಸಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಅಪಘಾತಗಳು ಸೇರಿದಂತೆ ವಿವಿಧ ಕಾರಣಗಳಿಂದ ಬೆನ್ನುಹುರಿಗೆ ಗಾಯವಾಗದಂತೆ ಮುನ್ನೆಚ್ಚರಿಕೆ ವಹಿಸುವುದು ಅಗತ್ಯ ಎಂದು ತಿಳಿಸಿದರು.

ನಶಾ ಮುಕ್ತ ಭಾರತ ಅಭಿಯಾನದ ಉದ್ದೇಶವು ಡ್ರಗ್ಸ್ ಸೇರಿದಂತೆ ಎಲ್ಲ ರೀತಿಯ ದುಶ್ಚಟಗಳಿಂದ ಮುಕ್ತವಾದ ಸಮಾಜ ನಿರ್ಮಿಸುವುದಾಗಿದೆ. ಯುವಜನರು ಮಾದಕ ವಸ್ತುಗಳ ವ್ಯಸನಕ್ಕೆ ಒಳಗಾಗದಂತೆ ಜಾಗೃತಿ ಮೂಡಿಸುವುದು ಹಾಗೂ ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳಲು ಪ್ರೋತ್ಸಾಹಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು. ಬೆನ್ನುಹುರಿಯ ಆರೋಗ್ಯದ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ, ಮಾದಕ ವಸ್ತುಗಳ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜನರಲ್ಲಿ ನಿರಂತರ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ವೈದ್ಯಕೀಯ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಅತೀಶ್ ಅವರು ಮಾತನಾಡಿ, ನಶಾ ಮುಕ್ತ ಭಾರತ ಅಭಿಯಾನದ ಜಾಗೃತಿ ಮೂಡಿಸುವಲ್ಲಿ ವೈದ್ಯರು, ತಜ್ಞರು, ಪ್ರಾಧ್ಯಾಪಕರು, ನರ್ಸಿಂಗ್ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳ ಜವಾಬ್ದಾರಿ ಮಹತ್ವದ್ದಾಗಿದೆ ಎಂದು ಹೇಳಿದರು.

ಈ ಹಿಂದೆ ಕೊಯಿಮ್ಸ್‌ನಲ್ಲಿ ಯಾವುದೇ ಉತ್ತಮ ವೈದ್ಯಕೀಯ ಸೇವೆ ಸಾಧ್ಯವಿಲ್ಲ ಎಂಬ ಅಭಿಪ್ರಾಯಗಳಿದ್ದವು. ಆದರೆ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇತಿಹಾಸದಲ್ಲೇ ಮೊದಲ ಬಾರಿಗೆ ಲ್ಯಾಪ್ರೋಸ್ಕೋಪಿ ಮೂಲಕ ಕಿಡ್ನಿ ಕಲ್ಲಿನ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನೆರವೇರಿಸಿರುವುದು ಸಂಸ್ಥೆಯ ಮತ್ತೊಂದು ಮಹತ್ವದ ಸಾಧನೆಯಾಗಿದೆ. ಇದೀಗ ಸಂಸ್ಥೆಯಲ್ಲಿ ಹಂತ ಹಂತವಾಗಿ ಪ್ರತಿಯೊಂದು ವಿಭಾಗದಲ್ಲೂ ಸುಧಾರಣೆ ತರಲಾಗುತ್ತಿದ್ದು, ವೈದ್ಯರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳ ಪರಿಶ್ರಮದಿಂದ ಹೊಸ ಸಾಧನೆ ಮಾಡುತ್ತಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮನೋತಜ್ಞರಾದ ಡಾ.ರೂಪೇಶ್ ಅವರು ಮಾತನಾಡಿ, ನಶಾ ಮುಕ್ತ ಭಾರತ ಅಭಿಯಾನವು ನಿರಂತರವಾಗಿ ನಡೆಯುವ ಕಾರ್ಯಕ್ರಮವಾಗಿದ್ದು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರನ್ನು ತಲುಪುವ ಉದ್ದೇಶದಿಂದ ವಿವಿಧ ಜಾಗೃತಿ ಚಟುವಟಿಕೆಗಳನ್ನು ಸತತವಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ನಶಾ ಮುಕ್ತ ಭಾರತದ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಂದ ಸಹಿ ಸಂಗ್ರಹ ಅಭಿಯಾನ ನಡೆಸಲಾಗುತ್ತಿದೆ ಎಂದು ತಿಳಿಸಿದರು.

# ಸಿಕ್ಸ್‌ಪ್ಯಾಕ್‌ಗಲ್ಲ, ಶತಾಯುಷಿಗಾಗಿ ಗರಡಿ



ಗರಡಿ ಮನೆ ಕೇವಲ ಕಸರತ್ತಿನ ತಾಣವಲ್ಲ, ಅದು ಮಣ್ಣಿನ ಘಮಲು ತುಂಬಿದ ಜೀವಂತ ಪ್ರಯೋಗಾಲಯ. ಇಲ್ಲಿ ಮಲ್ಲಕಂಬ ಏರುವಾಗ ಭುಜದ ನರಜಾಲ ಚುರುಕಾಗಿ, ಒಳಕಿವಿಯ ಸಮತೋಲನ ವ್ಯವಸ್ಥೆ ಬಲಗೊಳ್ಳುತ್ತದೆ. ಸೂರ್ಯನಮಸ್ಕಾರದ ಹನ್ನೆರಡು ಭಂಗಿಗಳು ಬೆನ್ನುಹುರಿಯ ದ್ರವದ ಚಲನೆಗೆ ವೇಗ ನೀಡಿ, ನರಗಳಿಗೆ ಪೋಷಣೆ ನೀಡುತ್ತವೆ. ಅಖಾಡದ ಕೆಂಪು ಮಣ್ಣು ಚರ್ಮದ ಎಣ್ಣೆ ಸ್ರವಿಕೆಯನ್ನು ನಿಯಂತ್ರಿಸಿ, ದೇಹವನ್ನು ಶುದ್ಧಗೊಳಿಸುತ್ತದೆ.

ಇದು ಸಮುದಾಯದ ಪಾಠಶಾಲೆಯೂ ಹೌದು. ಇಲ್ಲಿ ಜಾತಿ–ಮತದ ಗೋಡೆ ಕರಗಿ ಎಲ್ಲರೂ ಲಂಗೋಟಿ ಬಂಧುಗಳಾಗುತ್ತಾರೆ. ಹಿರಿಯ ಉಸ್ತಾದರು ದೇಸಿ ಕಸರತ್ತು ಹೇಳಿಕೊಡುವಾಗ ಶ್ರಮದ ಮೌಲ್ಯ ಅರಿವಾಗುತ್ತದೆ. ಜಾತ್ರೆಯಲ್ಲಿ ಲಾಠಿ–ಬನೇಟಿ ಪ್ರದರ್ಶನ ನೋಡಿದ ಯುವಜನತೆಗೆ ಮೊಬೈಲ್ ಚಟಕ್ಕಿಂತ ಮೈ ಚಟ ಮುಖ್ಯವೆನಿಸುತ್ತದೆ.

ಗರಡಿಯ ಆಹಾರವೇ ಔಷಧ. ಬೆಳಗ್ಗೆ ಹುರಳಿಕಾಳಿನ ಸೂಪು, ಅಭ್ಯಾಸದ ನಡುವೆ ಎಳನೀರು–ಬಾಳೆಹಣ್ಣು, ಮಧ್ಯಾಹ್ನ ರಾಗಿ ಮುದ್ದೆ–ನಾಟಿ ಸಾರು ಶುದ್ಧ ಇಂಧನ ನೀಡುತ್ತವೆ. ವಾರಕ್ಕೊಮ್ಮೆ ಎಣ್ಣೆ ಸ್ನಾನ ಮತ್ತು ಬಿಸಿಲು ಕಾಯುವಿಕೆಯಿಂದ ರಕ್ತನಾಳಗಳು ಸಡಿಲಗೊಳ್ಳುತ್ತವೆ.

ಈ ಶಿಸ್ತು ದೇಹಕ್ಕೆ ಕವಚವಾದಾಗ ಬದುಕು ಆತ್ಮವಿಶ್ವಾಸದಿಂದ ತುಂಬುತ್ತದೆ. ನಾಲಿಗೆ ಶುದ್ಧಿಯಂತಹ ಸಣ್ಣ ಅಭ್ಯಾಸವೇ ಹೃದಯದ ಆರೋಗ್ಯಕ್ಕೆ ರಕ್ಷಣೆಯಾಗುತ್ತದೆ. ಗರಡಿ ಮನೆ ದೇಹವನ್ನು ಮಾತ್ರವಲ್ಲ, ಮನಸ್ಸನ್ನು ಗಟ್ಟಿಗೊಳಿಸುವ ಆಯುಷ್ಯದ ಗುರುಕುಲ.

ಅಂಕಣ-18

ಸಾವು ಸಂಕಟಪಡುವ ಸಂಗತಿಗಳು..!



|ಡಾ.ಸುಧಾಕರ.ಜಿ.ಲಕ್ಕವಳ್ಳಿ



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



## ಸ್ಪಾರ್ಕ್ ನಲ್ಲಿ ಜಾಕಿ ಭಾವನಾ

ಸ್ಪಾರ್ಕ್ ಶೀರ್ಷಿಕೆಯಂತೆ ಕಥೆಯಲ್ಲೂ ಕೂಡ ಸ್ಪಾರ್ಕ್ ಇದೆ. ಎಲ್ಲ ಪಾತ್ರಗಳಲ್ಲಿಯೂ ಆ ಸ್ಪಾರ್ಕ್ ಇದೆ. ಆ ಕಾರಣದಿಂದಲೇ ನಾನು ಈ ಚಿತ್ರ ಒಪ್ಪಿಕೊಂಡೆ. ನಾನು ಚಾಲೆಂಜಿಂಗ್ ಅನಿಸುವ ಚಿತ್ರಕಥೆ ಇದ್ದಾಗಲೇ ಸಿನಿಮಾ ಒಪ್ಪಿಕೊಳ್ಳುತ್ತೇನೆ. ನಿರ್ದೇಶಕರು ಈ ಪಾತ್ರದ ಬಗ್ಗೆ ಹೇಳಿದಾಗ ನಾನಂತೂ ಇಂಥ ಪಾತ್ರ ಈ ಹಿಂದೆ ಮಾಡಿಲ್ಲ ಎನ್ನುವುದು ಗೊತ್ತಾಯಿತು. ಅದಕ್ಕಾಗಿ ನಾನು ನಿರ್ದೇಶಕರಿಗೆ ದನ್ಯವಾದ ಹೇಳುತ್ತೇನೆ. ಬಹಳ ಸಮಯದ ಬಳಿಕ ನಟಿಯಾಗಿ ನನ್ನ ಪ್ರತಿಭೆಯನ್ನು ಹೊರಗೆಳೆಯಬಲ್ಲಂಥ ಪಾತ್ರವೇ ದೊರಕಿದೆ. ನಿರ್ಮಾಪಕಿ ತುಂಬ ಸಮರ್ಪಣಾ ಭಾವದಿಂದ ನಿತ್ಯವೂ ಸೆಟ್ ಗೆ ಬಂದು ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ ಎಂದರು ಭಾವನಾ.

ಚಿತ್ರದ ನಾಯಕ ನಿರಂಜನ್ ಸುಧೀಂದ್ರ ಒಳ್ಳೇ ಪ್ರತಿಭೆ ಎಂದು ಭಾವನಾ ಪ್ರಶಂಸಿಸಿದರು.



ಚಿತ್ರತಂಡದ ಪ್ರತಿಯೊಬ್ಬ ಕಲಾವಿದರ ಜೊತೆಗೆ ತಮಗೆ ಇರುವಂಥ ಆತ್ಮೀಯತೆ ಬಗ್ಗೆ ಭಾವನಾ ಮನಸುಬಿಚ್ಚಿ ಮಾತನಾಡಿದರು. ಈ ಚಿತ್ರದಲ್ಲಿ ಶ್ರೇಷ್ಠ ನಟರು, ತಂತ್ರಜ್ಞರು ಇರುವುದಷ್ಟೇ ಅಲ್ಲ, ಕೌಟುಂಬಿಕ ವಿಚಾರ, ಉತ್ತಮ ಸಂದೇಶ ಎಲ್ಲವನ್ನೂ ಮನರಂಜನೆಯ ಸಂಪೂರ್ಣ ಪ್ಯಾಕೇಜ್ ಜೊತೆ ನೀಡಲಾಗಿದೆ ಎಂದು ಭಾವನಾ ಸಂಭ್ರಮ ವ್ಯಕ್ತಪಡಿಸಿದರು.

ನಟ ಗಣೇಶ್ ರಾವ್ ಕೇಸರ್ಕರ್ ನಟ ಅಶ್ವಿನ್ ಹಾಸನ್ ನಟ ಧರ್ಮಣ್ಣ ಮಾತನಾಡಿದರು.

ಕಾರ್ಯಕಾರಿ ನಿರ್ಮಾಪಕ ಶುಭಂ ಸಿಂಗ್ ನಟಿಸಿದ್ದು ವಿಶೇಷ.

ನಿರ್ದೇಶಕ ಮಹಾಂತೇಶ್ ಹಂದ್ರಾಳ್ ಮಾತನಾಡಿ ಪ್ರತಿ ಪಾತ್ರಕ್ಕೆ ತಕ್ಕಂತೆ ಕಲಾವಿದರನ್ನು ಆಯ್ಕೆ ಮಾಡಿದ್ದೇನೆ. ಒಂದು ಘಟನೆಯಲ್ಲಿ ಪತ್ರಕರ್ತನಾದ ನಾಯಕನಿಗೆ ಸಹಕಾರಿಯಾಗಿ ಎಂಟ್ರಿ ನೀಡುವ ವೈದೇಹಿ ಎನ್ನುವ ಲಾಯರ್ ಪಾತ್ರವನ್ನು ಭಾವನಾ ಮಾಡಿದ್ದಾರೆ ಎಂದರು.

## ಸಮಾಜದಲ್ಲಿ ಹೆಣ್ಣಿನ ಸಂಕಷ್ಟಗಳ ಸುತ್ತ ಹೆಣೆದ 'ಮುಳ್ಳಿನ ಗುಲಾಬಿ'

ಆಶಾ ಗುರುಲಿಂಗಯ್ಯ ಅವರ ಮುಳ್ಳಿ ಗುಲಾಬಿ ಕಾದಂಬರಿಯನ್ನಾಧರಿಸಿ, ಅದೇ ಹೆಸರಲ್ಲಿ ನಿರ್ಮಾಣವಾಗುತ್ತಿರುವ ಚಿತ್ರಕ್ಕೆ ಸ್ಟೈಲ್ ಶಿವು ಆಕ್ಷನ್ ಕಟ್ ಹೇಳುತ್ತಿದ್ದಾರೆ. ಅಜಯ್ ಗೌಡ, ಆಶಾ, ಗಿರಿಜಾ ಲೋಕೇಶ್, ರೇಖಾದಾಸ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಲಿರುವ "ಮುಳ್ಳಿನ ಗುಲಾಬಿ" ಚಿತ್ರದ ಪ್ರಥಮ ಪತ್ರಿಕಾಗೋಷ್ಠಿ ಇತ್ತೀಚೆಗೆ ನಡೆಯಿತು.

ಈ ವೇಳೆ ಮಾತನಾಡಿದ ಲೇಖಕಿ ಕಮ್ ನಾಯಕಿ ಆಶಾ ಗುರುಲಿಂಗಯ್ಯ ಸ್ವದೇಶಿ ದಿಶಾ ಕಂಪನಿ ಸಿಇಓ ಆಗಿ ಕೆಲಸ ಮಾಡುತ್ತಿದ್ದೇನೆ. ಡಿಗ್ರಿ ಓದುವಾಗಲೇ ಕಾದಂಬರಿ ಬರೆಯುವ ಹವ್ಯಾಸವಿತ್ತು. ಕಷ್ಟಪಡುತ್ತಿದ್ದ ಒಬ್ಬ ಹೆಣ್ಣು ಮಗಳನ್ನು ನೋಡಿ ಈ ಕಥೆ ಬರೆದೆ. ಆಕೆ ಓದಲು ಎಷ್ಟು ಕಷ್ಟಪಡುತ್ತಾಳೆ, ಮದುವೆಯಾದ ಮೇಲೆ ಗಂಡನ ಮನೆಯಲ್ಲಿ ಏನೆಲ್ಲ ತೊಂದರೆ ಅನುಭವಿಸುತ್ತಾಳೆ ಎಂದು ಅದರಲ್ಲಿ ಹೇಳಿದ್ದೆ. ಆ ಕಾದಂಬರಿಗೆ ಬಿಟಿ. ಲಲಿತಾನಾಯಕ್ ಮುನ್ನುಡಿ ಬರೆದರೆ, ಮೈಸೂರು ರಮಾನಂದ್ ಹಿನ್ನುಡಿ ಬರೆದರು. ಪ್ರಕಟಿಸಿದಾಗ ಸಾವಿರ ಪ್ರತಿ ಸೇಲಾಗಿ ತುಂಬಾ ಸಕ್ಸಸ್ ಆಯ್ತು. ಇಷ್ಟೊಂದು ಜನ ಇಷ್ಟಪಟ್ಟ ಕಾದಂಬರಿ ಸಿನಿಮಾ ಆದರೆ ಎಲ್ಲರಿಗೂ ತಲುಪುತ್ತೆ ಅನಿಸಿತು. ಶಿವು ಸಿಕ್ಕಾಗ ಈಬಗ್ಗೆ ಹೇಳಿದಾಗ ಅವರೂ ಒಪ್ಪಿದರು ಎಂದು ಹೇಳಿದರು.



ನಿರ್ದೇಶಕ ಸ್ಟೈಲ್ ಶಿವು ಮಾತನಾಡಿ ನಿಸರ್ಗ ನಂತರ ಇದು ನನ್ನ ಎರಡನೇ ಚಿತ್ರ. ನಾವೆಲ್ಲ ಸ್ನೇಹಿತರೇ ಸೇರಿ ಈ ಸಿನಿಮಾ ಮಾಡುತ್ತಿದ್ದೇವೆ. ಅತ್ತೆ ಮನೆಯಲ್ಲಿ ಹೆಣ್ಣು ಯಾವರೀತಿ ತೊಂದರೆ ಅನುಭವಿಸ್ತಾಳೆ ಮತ್ತು ಅದರಿಂದ ಹೇಗೆ ಹೊರಬರುತ್ತಾಳೆ ಅನ್ನೋದನ್ನಿಟ್ಟುಕೊಂಡು ಈ ಚಿತ್ರ ಮಾಡುತ್ತಿದ್ದೇವೆ. ಹಳೇ ಚಿತ್ರಕ್ಕೂ ನಮ್ಮ ಚಿತ್ರಕ್ಕೂ ಸಂಬಂಧವಿಲ್ಲ. ಎಲ್ಲ ಕಾಲದಲ್ಲೂ ಹೆಣ್ಣಿನ ಕಷ್ಟ ಇದ್ದದ್ದೇ. 80% ಮೂಲಕಥೆ ಇಟ್ಟುಕೊಂಡು ಸ್ಕ್ರಿಪ್ಟ್ ಮಾಡಿದ್ದು, 25 ದಿನಗಳ ಕಾಲ ಬೆಂಗಳೂರು ಸುತ್ತಮುತ್ತ ಚಿತ್ರೀಕರಣ ನಡೆಸುವ ಯೋಜನೆಯಿದೆ. ನಾಯಕನ ಪಾತ್ರಕ್ಕೆ ಇನ್ನೂ ಫೈನಲ್ ಆಗಿಲ್ಲ. ಚಿತ್ರದಲ್ಲಿ 2 ಹಾಡುಗಳಿದ್ದು ಪಲ್ಲಕ್ಕಿ ಮ್ಯೂಸಿಕ್ ಮಾಡುತ್ತಿದ್ದಾರೆ ಎಂದರು.

ವಿಶೇಷ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿರುವ ನಿರ್ಮಾಪಕ ಅಜಯ್ ಗೌಡ ಮಾತನಾಡಿ ನಾನು ತೆರೆಯ ಹಿಂದೆ ತುಂಬಾ ವರ್ಷ ಕೆಲಸ ಮಾಡಿದ್ದೆ. ಮೊದಲ ಬಾರಿಗೆ ಸ್ಕ್ರೀನ್ ಮುಂದೆ ಬರ್ತಿದ್ದೇನೆ. ನನ್ನದು ಲವರ್ ಬಾಯ್ ಪಾತ್ರ ಎಂದರು.

ಚಿತ್ರಕಥೆ ಬರೆದ ಎಂಡಿ. ಕೌಶಿಕ್ ಮಾತನಾಡಿ ಈಗ ಕಾದಂಬರಿ ಆಧಾರಿತ ಚಿತ್ರಗಳ ನಿರ್ಮಾಣ ಕಡಿಮೆಯಾಗಿದೆ. ಈ ಕಥೆ ಪ್ರಸ್ತುತ ಸಮಾಜಕ್ಕೆ ಹಿಡಿದ ಕನ್ನಡಿಯಂತಿದೆ ಎಂದರು.

ಹಿರಿಯ ನಟಿ ರೇಖಾದಾಸ್, ಅಪೂರ್ವ, ಮೈಸೂರು ರಮಾನಂದ್, ಛಾಯಾಗ್ರಾಹಕ ಪಿವಿಆರ್. ಸ್ವಾಮಿ ಚಿತ್ರದ ಕುರಿತಂತೆ ಮಾತನಾಡಿದರು.



## ಸೀತಾ ಸರ್ಕಲ್ ಶ್ರೀ ಕೃಷ್ಣನ್ ಮನೆ: ಹಾಡು ಬಂತು

ಸೀತಾ ಸರ್ಕಲ್ ಶ್ರೀ ಕೃಷ್ಣನ್ ಮನೆ ಸಿನಿಮಾದ ಕಳ್ಳೇ ಬೀಜ ಕಿತ್ತುಕೊಂಡ್ ಹೋದ್ಲು? ಎಂಬ ಮಜವಾದ ಲಿರಿಕಲ್ ವಿಡಿಯೋ ಹಾಡು ಯೂಟ್ಯೂಬ್‌ನಲ್ಲಿ ಬಿಡುಗಡೆಯಾಗಿ ಸಾಮಾಜಿಕ ಜಾಲತಾಣಗಳಲ್ಲಿ ಸದ್ದು ಮಾಡುತ್ತಿದೆ.

ಈ ಹಾಡಿಗೆ ಗಾಯಕ ದಿವ್ಯ ಕುಮಾರ್ ಧ್ವನಿಯಾಗಿದ್ದು, ರಾಘವೇಂದ್ರ ವಿ. ಅವರ ಆಕರ್ಷಕ ಸಂಗೀತ ಸಂಯೋಜನೆ ಕೇಳುಗರನ್ನು ಗುನುಗುವಂತೆ ಮಾಡಿದೆ. ಚಿತ್ರದ ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ನಿರ್ದೇಶನದ ಜವಾಬ್ದಾರಿ ಹೊತ್ತಿರುವ ಅಭಿನಂದನ್ ದೇಶಪ್ರಿಯ ಅವರೇ ಈ ಹಾಡಿಗೆ ಸಾಹಿತ್ಯ ಬರೆದಿದ್ದಾರೆ. ಭೂಷಣ್ ಅವರ ನೃತ್ಯ ನಿರ್ದೇಶನ ಮತ್ತು ಉಜ್ವಲ್ ಚಂದ್ರ ಅವರ ಸಂಕಲನ ಹಾಡಿನ ದೃಶ್ಯ ಶ್ರೀಮಂತಿಕೆಯನ್ನು ಹೆಚ್ಚಿಸಿದ್ದು, ಯುವ ಪ್ರೇಕ್ಷಕರನ್ನು ಆಕರ್ಷಿಸುತ್ತಿದೆ.

ಬೆಂಗಳೂರು, ಸಕಲೇಶಪುರ, ಮಡಿಕೇರಿ ಮತ್ತು ಹೊನ್ನಾವರದ ನಯನಮನೋಹರ ತಾಣಗಳಲ್ಲಿ ವಿಷ್ಣು ಪ್ರಸಾದ್, ವಿಶ್ವ ಪಾಟೀಲ್ ಹಾಗೂ ವಿದ್ಯಾ ಕಿರಣ್ ಅವರ ಕ್ಯಾಮೆರಾ ಕಣ್ಣಿನಲ್ಲಿ ಸಿನಿಮಾ ಸೆರೆಯಾಗಿದೆ. ಚೇತನ್ ರಾವ್ ಅವರ ಹಿನ್ನೆಲೆ ಸಂಗೀತ ಇದೆ.

ಚಿತ್ರದಲ್ಲಿ ಯುವನ್ ಹಣಕೋಡ್ ಹಾಗೂ ಅರ್ಜುನ್ ವೇದಾಂತ ಜೊತೆಗೆ ರಕ್ಷಿತಾ ಮುಖ್ಯ ಭೂಮಿಕೆಯಲ್ಲಿ ನಟಿಸಿದ್ದಾರೆ. ಇವರೊಂದಿಗೆ ಹಿರಿಯ ನಟ ದತ್ತಣ್ಣ, ವಿಜಯ್ ಚಂಡೂರ್, ನವೀಂದ್ರ, ಅನಿಲ್ ಸಿದ್ದು, ನಾಗರಾಜ್ ಮೂರ್ತಿ, ಮಿಮಿಕ್ರಿ ಗೋಪಿ, ಮನ್‌ದೀಪ್ ರಾಯ್, ಪ್ರಶಾಂತ್ ವೈ.ಎನ್ ಮತ್ತು ವಿ. ರವಿ ಶಂಕರ್ ನಾಗ್ ತಾರಾಗಣ ಅಭಿನಯಿಸಿದೆ.

## 'ಲವ್ ಟುವರ್ಡ್ಸ್ ಫ್ಯಾಮಿಲಿ' ಹಾಡು ಬಿಡುಗಡೆ

"ಲವ್ ಟುವರ್ಡ್ಸ್ ಫ್ಯಾಮಿಲಿ" ಹಾಡು ಬಿಡುಗಡೆ ಚಂದ್ರಮೋಹನ್ ನಿರ್ದೇಶನದ "ಲವ್ ಟುವರ್ಡ್ಸ್ ಫ್ಯಾಮಿಲಿ" ಚಿತ್ರದ "ಕುಂದಾಪುರದ ಹೆಣ್ಣಿವಳು" ಎಂಬ ಹಾಡಿನ ಬಿಡುಗಡೆ ಹಾಗೂ ಪತ್ರಿಕಾಗೋಷ್ಠಿ ಇತ್ತೀಚೆಗೆ ನಡೆಯಿತು.

ನಾಗಾರ್ಜುನ ಶರ್ಮ ಅವರ ರಚನೆ, ವಿಜಯ್ ಪ್ರಕಾಶ್ ಗಾಯನ ಹಾಗೂ ಆನಂದಲೀಲಾ ಅವರ ಸಂಗೀತ ಸಂಯೋಜನೆ ಇರುವ ಈ ಹಾಡನ್ನು ನಟ ಮನೋರಂಜನ್ ಅನಾವರಣ ಮಾಡಿದರು.

ಲಿಂಗರಾಜ್ ಬೀದರ್ ಅವರ ನಿರ್ಮಾಣದ ಈ ಚಿತ್ರದಲ್ಲಿ ನವನಟ ಧೀರಜ್, ರಾಧೆ ನಾಯಕ, ನಾಯಕಿಯಾಗಿ ನಟಿಸಿದ್ದಾರೆ.



ನಿರ್ದೇಶಕ ಚಂದ್ರಮೋಹನ್ ಮಾತನಾಡಿ ಧೀರಜ್ ಹಾಗೂ ನಾನು ಕಥೆ ಮಾಡಿದೆವು.ನಾಯಕ, ನಾಯಕಿ ಇಬ್ಬರ ಮೇಲೆ ಹೆಚ್ಚಿನ ಕಥೆ ಸಾಗುತ್ತದೆ. ಚಿತ್ರದಲ್ಲಿ 3 ಹಾಡುಗಳಿದ್ದು, ರಾಜೇಶ್ ಆನಂದಲೀಲಾ ಸಂಗೀತ ಸಂಯೋಜನೆ ಮಾಡಿದ್ದಾರೆ. ಕುಂದಾಪುರ, ತೀರ್ಥಹಳ್ಳಿ ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದೆ ಎಂದರು.

ನಾಯಕ ಧೀರಜ್ ಮಾತನಾಡಿ ಮೈಸೂರಿನ ರಂಗವಲ್ಲಿ ತಂಡದಲ್ಲಿದ್ದೆ ಸೀರಿಯಲ್ ಗಳಿಗೆ ಅಸೋಸಿಯೇಟ್ ಆಗಿ ಕೆಲಸ ಮಾಡಿದ್ದೆ. ಕಳೆದ ಜುಲೈನಲ್ಲಿ ಶುರುವಾದ ಜರ್ನಿಯಿದು.ಎಂದರು.

ನಿರ್ಮಾಪಕ ಲಿಂಗರಾಜ್ ಬೀದರ್ ಮಾತನಾಡಿ ಇದು ನನ್ನ ನಿರ್ಮಾಣದ ಮೊದಲ ಚಿತ್ರ. ನಾನು ಈ ಸಿನಿಮಾ ಪ್ರಾರಂಭಿಸಲು ಕಾರಣ ನಾಯಕ ಹಾಗೂ ನಿರ್ದೇಶಕರು. ಎಂದರು.

ನಾಯಕಿ ರಾಧೆ ಇದು ನನ್ನ ಮೊದಲ ಚಿತ್ರ. ಈಗಿನ ಜನರೇಶನ್ ಗೆ ಆಪ್ಟ್ ಆಗುವ ಕಥೆ ಎಂದರು.



## "ಒರಿಜಿನಲ್ ಮಾನ್ ಸ್ಟರ್" ಚಿತ್ರಕ್ಕೆ ಮುಹೂರ್ತ



"ಒರಿಜಿನಲ್ ಮಾನ್ ಸ್ಟರ್" ಚಿತ್ರದ ಮುಹೂರ್ತ ಸಮಾರಂಭ ನೆರವೇರಿದೆ. ನೈಸ್ ಸಂಸ್ಥೆಯ ಅಶೋಕ್ ಖೇಣಿ, ಮಾಧವ ಕಿರಣ್, ನಿರ್ಮಾಪಕರಾದ ಉದಯ್ ಕೆ ಮೆಹ್ತ, ಗಂಗಾಧರ್ ಮುಂತಾದವರು ಉಪಸ್ಥಿತರಿದ್ದರು.

"ಒರಿಜಿನಲ್ ಮಾನ್ ಸ್ಟರ್" ಚಿತ್ರದ ಶೀರ್ಷಿಕೆ ಮುಂಬೈನಲ್ಲಿ ಬಿಡುಗಡೆ ಆಗಿತ್ತು. ಆದರೆ ಇಲ್ಲಿಯೂ ಚಿತ್ರದ ಮುಹೂರ್ತ ಸಮಾರಂಭ ಮಾಡಿ ಚಾಲನೆ ನೀಡಬೇಕೆಂದು ನನ್ನ ಆಸೆಯಾಗಿತ್ತು. ಇಂದಿನಿಂದ ಈ ಚಿತ್ರದ ಚಿತ್ರೀಕರಣ ಆರಂಭವಾಗಿದೆ. ಶಿವಣ್ಣ ಹಾಗೂ ತೆಲುಗು ನಟ ಸುನೀಲ್ ಕೂಡ ಪ್ರಮುಖಪಾತ್ರದಲ್ಲಿ ನಟಿಸುತ್ತಿದ್ದಾರೆ. ಹಿಂದಿ ಹಾಗೂ ಕನ್ನಡ ಭಾಷೆಗಳಲ್ಲಿ ಈ ಚಿತ್ರ ನಿರ್ಮಾಣವಾಗುತ್ತಿದೆ ಎಂದು ನಿರ್ದೇಶಕ ಹಾಗೂ ನಿರ್ಮಾಪಕ ಅರ್ ಚಂದ್ರು ತಿಳಿಸಿದರು. ಈ ಚಿತ್ರದ ಕಥೆ ಇಷ್ಟವಾಯಿತು. ಮಾನ್ ಸ್ಟರ್ " ಎಂದರೆ ದೈತ್ಯ ಅಂತ. ಆದರೆ ಆ ದೈತ್ಯನಲ್ಲೂ ಬರೀ ದೈತ್ಯತನವಲ್ಲದೆ ಬೇರೆ ಒಂದು ಲೈನ್ ಇದೆ. ಅದನ್ನು ಈ ಚಿತ್ರದಲ್ಲಿ ನೋಡಬಹುದು. ತೆಲುಗು ಮಿಶ್ರಿತ ಕನ್ನಡದಲ್ಲಿ ನನ್ನ ಸಂಭಾಷಣೆ ಇರುತ್ತದೆ. ಸುನೀಲ್ ಅವರ ಜೊತೆಗೆ ನಟಿಸುತ್ತಿರುವುದು ಖುಷಿಯಾಗಿದೆ. ಎಂದರು ಶಿವಣ್ಣ.

ನಟ ಸುನೀಲ್ ತಮ್ಮ ಪಾತ್ರದ ಬಗ್ಗೆ ಮಾತನಾಡಿದರು

## ಶ್ರೇಯಾ ಘೋಶಾಲ್ ಕಂಠಸಿರಿಯಲ್ಲಿ "ನಾದಸುನಾದ" ಹಾಡು

ಗಣೇಶ್ ನಾಯಕರಾಗಿ ನಟಿಸಿರುವ, ಸಮೃದ್ಧಿ ವಿ ಮಂಜುನಾಥ್ ನಿರ್ಮಾಣದ ಶ್ರೀನಿವಾಸರಾಜು ನಿರ್ದೇಶನದ "ಬೃಂದಾ ವಿಹಾರಿ" ಚಿತ್ರದ "ನಾದನಿನಾದ" ಹಾಡು ಆನಂದ್ ಆಡಿಯೋ ಯೂಟ್ಯೂಬ್ ಚಾನಲ್ ನಲ್ಲಿ ಬಿಡುಗಡೆಯಾಗಿದೆ. ಡಾ॥ವಿ.ನಾಗೇಂದ್ರಪ್ರಸಾದ್ ಬರೆದಿರುವ ಈ ಹಾಡನ್ನು ಹೆಸರಾಂತ ಗಾಯಕಿ ಶ್ರೇಯಾ ಘೋಶಾಲ್ ಹಾಡಿದ್ದಾರೆ.

ಈಗಾಗಲೇ ಬಿಡುಗಡೆಯಾಗಿರುವ ಈ ಚಿತ್ರದ ಹಾಡುಗಳು ಸೂಪರ್ ಹಿಟ್ ಆಗಿದೆ.

ಗಣೇಶ್ ಹಾಗೂ ಶ್ರೀನಿವಾಸರಾಜು ಇವರಿಬ್ಬರ ಕಾಂಬಿನೇಶನ್ ನಲ್ಲಿ ಬರುತ್ತಿರುವ ಈ ಚಿತ್ರದಲ್ಲಿ ಗಣೇಶ್ ಜೊತೆಗೆ ನಾಯಕಿಯರಾಗಿ ದೇವಿಕಾ ಭಟ್ ಹಾಗೂ ಮಾಳವಿಕ ಶರ್ಮ ಅಭಿನಯಿಸಿದ್ದಾರೆ.

## ಗಣಪನ ಸನ್ನಿದಿಯಲ್ಲಿ ಕಲೀಲಾ ಮುಹೂರ್ತ



ಕಲೀಲಾ ಚಿತ್ರದ ಮುಹೂರ್ತ ಟ ನಡೆದಿದೆ. ಮೊದಲ ದೃಶ್ಯಕ್ಕೆ ನಿರ್ದೇಶಕ ಸಿಂಪಲ್ ಸುನಿ ಕ್ಲಾಪ್ ಮಾಡಿದರು.ಕೆವಿಆರ್ ಪಿಕ್ಚರ?ಸ್ ನಿರ್ಮಾಣದ ಜವಬ್ದಾರಿಯನ್ನು ಹೊತ್ತುಕೊಂಡಿದೆ. ಕೆ.ರಾಘವ್ ಕಥೆ,ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ.

ನಂತರ ಮಾತನಾಡಿದ ನಿರ್ದೇಶಕರು, ಇದೊಂದು ಮಾಸ್ ಕಂಟೆಂಟ್ ಜತೆಗೆ ಅಣ್ಣ ತಂಗಿ ಬಾಂಧವ್ಯವನ್ನು ಹೇಳಲಾಗುತ್ತಿದೆ. ಒಂದು ನಿಮಿಷದ ಕೋಪ, ಜೀವನವೆಲ್ಲ ತಾಪ ಎಂಬ ಗಾದೆಯಂತೆ ಚಿತ್ರದಲ್ಲಿ ಏನೂ ತಿಳಿಯದ ಮುಗ್ದ ಹುಡುಗನೊಬ್ಬ ಕೋಪದಲ್ಲಿ ತಪ್ಪು ಮಾಡಿಕೊಂಡು, ಮುಂದೆ ಆಗುವಂತ ಅನಾಹುತ, ನೋವುಗಳನ್ನು ಹೇಗೆ ಎದುರಿಸುತ್ತಾನೆ . ಆತನ ಉದ್ದ ಹೆಸರನ್ನು ಕಡಿತ ಮಾಡಿದರೆ ಕಲೀಲ ಅಂತ ಕರೆಯಲಾಗುತ್ತದೆ. ಅಲ್ಲದೆ ಒಂದಷ್ಟು ಬಿಸಿ ರಕ್ತದ ಹುಡುಗಿಯರು ಬೈಕ್ ಓಡಿಸುತ್ತಾ, ಮಾರಿಯರಾಗಿ ಏನು ಮಾಡುತ್ತಾರೆ. ಇಂತಹ ಸನ್ನಿವೇಶಗಳು ಬಿಜಾಪುರದಲ್ಲಿ ತೆರೆದುಕೊಳ್ಳುತ್ತದೆ. ಈಗಿನ ಜನರು ಇಷ್ಟಪಡುವಂತ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಕಾಲ್ಪನಿಕ ದೃಶ್ಯಗಳನ್ನು ಸೃಷ್ಟಿಸಲಾಗಿದೆ. ಮಿಕ್ಕಂತೆ ಹೆಚ್ಚಿನ ವಿವರಗಳನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು ಎಂದರು.

ಬಡ ಕಾರ್ಮಿಕನಾಗಿ ಕಾಣಿಸಿಕೊಳ್ಳುತ್ತಿದ್ದೇನೆ. ಇಲ್ಲಿಯವರೆಗೂ ಮಾಡಿರದ ಪಾತ್ರಕ್ಕೆ ಬಣ್ಣ ಹಚ್ಚುತ್ತಿದ್ದೇನೆಂದು ನಾಯಕ ರಾಕೇಶ್ ಅಡಿಗ ತಿಳಿಸಿದರು. ಬಡ ಹಳ್ಳಿ ಹುಡುಗಿಯಾಗಿ ಖುಷಿ ಅಭಿನಯ ಇದೆ.

ಉಳಿದಂತೆ ಅಪೂರ್ವ, ಶಿಲ್ಪೆ ಮಂಜುನಾಥ್, ಜೋಗಿ ಉಮೇಶ್‌ಪುಂಗ, ಕಡ್ಡಿ ವಿಶ್ವ, ಬಲರಾಜವಾಡಿ, ಕಾಕ್ರೋಚ್ ಸುಧಿ, ವರ್ಧನ್, ಶೋಭಿತ, ಮಫ್ತಿ ಪ್ರದೀಪ್, ಪೂಜಾಶೆಟ್ಟಿ, ಶಿಲ್ಪ ಮುಂತಾದವರು ನಟಿಸುತ್ತಿದ್ದಾರೆ.

ಬೆಂಗಳೂರು, ಬಿಜಾಪುರ ಮತ್ತು ಮೈಸೂರು ಸುಂದರ ತಾಣಗಳಲ್ಲಿ ನಲವತ್ತೈದು ದಿನಗಳ ಕಾಲ ಒಂದೇ ಹಂತದಲ್ಲಿ ಚಿತ್ರೀಕರಣ ಮುಗಿಸಲು ತಂಡವು ಯೋಜನೆ ರೂಪಿಸಿಕೊಂಡಿದೆ.

## ಮಹಾನ್ ಚಿತ್ರದಲ್ಲಿ ಮಹಾನ್ ನಟರು



ಪ್ರಕಾಶ್ ಬುದೂರು ನಿರ್ಮಿಸುತ್ತಿರುವ, ಪಿ.ಸಿ.ಶೇಖರ್ ನಿರ್ದೇಶಿಸುತ್ತಿರುವ ಮಹಾನ್ ಚಿತ್ರದಲ್ಲಿ ಶಿವರಾಜ್ ಕುಮಾರ್ ವಿಜಯ್ ರಾಘವೇಂದ್ರ ದೇವರಾಜ್, ರಮೇಶ್ ಭಟ್, ಅವಿನಾಶ್, ರಂಗಾಯಣ ರಘು, ಶರತ್ ಲೋಹಿತಾಶ್ವ ಹಾಗೂ ರಮೇಶ್ ಇಂದಿರಾ ನಟಿಸಿದ್ದಾರೆ. ಈ ಆರು ಕಲಾವಿದರು ಪ್ರಮುಖಪಾತ್ರಗಳಲ್ಲಿ ನಟಿಸಿದ್ದು, ಇತ್ತೀಚೆಗೆಫಸ್ಟ್ ಲುಕ್ ಅನಾವರಣವಾಗಿದೆ.

ರಮೇಶ್ ಇಂದಿರಾ ಅವರು ಇನ್ ಸ್ಪೆಕ್ಟರ್ ಪಾತ್ರದಲ್ಲಿ ನಟಿಸಿದ್ದಾರೆ. ದೇವರಾಜ್. ಸೂಪರಿಂಟೆಂಡೆಂಟ್ ಆಫ್ ಪೊಲೀಸ್ ಪಾತ್ರದಲ್ಲಿ ಇದ್ದಾರೆ

ಹಳ್ಳಿಯ ಹಿತಾಸಕ್ತಿ ಕಾಯುವ ರೈತ ಮುಖಂಡನ ಪಾತ್ರದಲ್ಲಿ ರಂಗಾಯಣ ರಘು ಅವರು ಕಾಣಿಸಿಕೊಂಡಿದ್ದಾರೆ.

ಅನುಭವಿ ವೈದ್ಯರ ಪಾತ್ರದಲ್ಲಿರಮೇಶ್ ಭಟ್ ಕಾಣಿಸಿಕೊಳ್ಳಲಿದ್ದಾರೆ.

ಶರತ್ ಲೋಹಿತಾಶ್ವ ವಿಭಿನ್ನವಾಗಿ ಕಾಣಿಸಿಕೊಳ್ಳಲಿದ್ದಾರೆ. ಅವಿನಾಶ್

ಇಡೀ ಹಳ್ಳಿಗೆ ಸೇನೆಯ ಮಹತ್ವವನ್ನು ಪರಿಚಯಿಸುವ ಪಾತ್ರ ಅವಿನಾಶ್ ಅವರದು. ರಾಧಿಕಾ ನಾರಾಯಣ್, ಮಿತ್ರ, ನಮ್ರತಾ ಗೌಡ, ವರ್ಷ ಬೊಳ್ಳಮ್ಮ, ಕಿರಣ್ ಶ್ರೀನಿವಾಸ್ ಅಭಿನಯಿಸಿದ್ದಾರೆ.



## ಸರ್ವೇ ಜನಾಃ... ಚಿತ್ರೀಕರಣ ಮುಗೀತು

ಎಸ್.ವಿ. ನಾರಾಯಣ್ ಹಾಗೂ ಎಸ್ ವಿ ಕೃಷ್ಣಮೂರ್ತಿ ನಿರ್ಮಿಸುತ್ತಿರುವ, ಸುನೀಲ್ ರುದ್ರಪ್ರಭಾ ನಿರ್ದೇಶನದ ಹಾಗೂ ಮನೋರಂಜನ್ ರವಿಚಂದ್ರನ್ ನಾಯಕನಾಗಿ ನಟಿಸಿರುವ "ಸರ್ವೇ ಜನಾಃ ಸುಖಿನೋ ಭವಂತು" ಚಿತ್ರದ ನಾಯಕಿಯಾಗಿ ಬಹುಭಾಷಾ ನಟಿ ಅಪರ್ಣ ದಾಸ್ ಅಭಿನಯಿಸಿದ್ದಾರೆ. ಪೃಥ್ವಿ ಅಂಬರ್ ಖಳನಟನಾಗಿ ಕಾಣಿಸಿಕೊಂಡಿದ್ದಾರೆ.

ನಾಯಕಿ ಅಪರ್ಣ ದಾಸ್ ಮೂಲತಃ ಕೇರಳದ ಪಾಲ್ ಕ್ಕಾಡ್‌ನವರು. ತಮಿಳಿನ ವಿಜಯ್ ಅಭಿನಯದ Beast, Dada ಚಿತ್ರ ಹಾಗೂ **Vadandhi** ತಮಿಳು ವೆಬ್ ಸೀರೀಸ್‌ನಲ್ಲಿ ನಟಿಸಿರುವ ಅಪರ್ಣ ದಾಸ್, ಈ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ.

ಚಿತ್ರದಲ್ಲಿ ರಂಗಾಯಣ ರಘು, ಸಿದ್ಲಿಂಗು ಶ್ರೀಧರ್, ದೀಕ್ಷಿತ್ ಗೌಡ, ಮನಮೋಹನ್ ರೈ ಹಾಗೂ ದಶಾವರ ಚಂದ್ರು ಸೇರಿದಂತೆ ಹಲವು ಪ್ರಮುಖ ಕಲಾವಿದರು ಅಭಿನಯಿಸಿದ್ದಾರೆ. ಚಿತ್ರದ ಚಿತ್ರೀಕರಣ ಪೂರ್ಣಗೊಂಡಿದ್ದು, ಒಟ್ಟು 55 ದಿನಗಳ ಕಾಲ ಬೆಂಗಳೂರು, ಮಂಡ್ಯ, ಮೈಸೂರು, ಮೇಲುಕೋಟೆ, ದೊಡ್ಡಬಳ್ಳಾಪುರ, ಗದಗ, ಬೆಳಗಾವಿ, ಹುಬ್ಬಳ್ಳಿ ಹಾಗೂ ಧಾರವಾಡ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ.

## "ವಿಷ್ಣುವಲ್ಲಭ"ಕ್ಕೆ ಚಾಲನೆ

ರುಹಿನಾ ರೆಹಮಾನ್ ನಿರ್ಮಿಸುತ್ತಿರುವ, ಚಂದ್ರಶೇಖರ್ ಬಂಡಿಯಪ್ಪ ನಿರ್ದೇಶನದ ಶಾನ್ ಹಾಗೂ ಸಾನ್ಯ ಅಯ್ಯರ್ ನಾಯಕ – ನಾಯಕಿಯಾಗಿ ನಟಿಸುತ್ತಿರುವ "ವಿಷ್ಣುವಲ್ಲಭ" ಚಿತ್ರದ ಮುಹೂರ್ತ ನೆರವೇರಿದೆ. ಸಚಿವಜಮೀರ ಮೊದಲ ಸನ್ನಿವೇಶಕ್ಕೆ ಆರಂಭ ಫಲಕ ತೋರಿದರು. ಕೆ.ಮಂಜು ಕ್ಯಾಮೆರಾ ಚಾಲನೆ ಮಾಡಿದರು.

ರೆಹಮಾನ್ ಪುತ್ರಿ ರುಹಿನಾ ಕಥೆ ಬರೆದಿದ್ದಾರೆ. ಕ್ರಿಯೇಟಿವ್ ಹೆಡ್ ಇವರೇ.

ಚಂದ್ರಶೇಖರ್ ಬಂಡಿಯಪ್ಪ ನಿರ್ದೇಶಿಸುತ್ತಿದ್ದಾರೆ. ಕೆ.ಎಸ್ ಚಂದ್ರಶೇಖರ್ ಛಾಯಾಗ್ರಹಣ ಇದೆ. ಶಾನ್ ಈ ಚಿತ್ರದ ನಾಯಕ. ಸಾನ್ಯ ಅಯ್ಯರ್ ನಾಯಕಿ. ಅವಿನಾಶ್, ಸಂಪತ್, ಸಂಗೀತ, ಸ್ವಾತಿ, ಯಶ್ ಶೆಟ್ಟಿ ಮುಂತಾದವರು ಇದ್ದಾರೆ. ಮೊದಲ ಹಂತದ ಚಿತ್ರೀಕರಣ ಆರಂಭ ಆಗಿದೆ. ಶ್ರೀಲಂಕಾ ಮುಂತಾದ ಕಡೆ ಚಿತ್ರೀಕರಣವಾಗಲಿದೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,